ಸಂಪುಟ: 14 Volume | ಸಂಚಿಕೆ: 69 Issue | ಪುಟಗಳು 08 Pages | ಗುರುವಾರ 18 ಜೂನ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**
ಪ್ರೀತಿಯಿಂದಾಡಿದ ಪ್ರತಿಯೊಂದು ನುಡಿಯು ಸಿಡಿಲಿನಂತೆ ಪರಿಣಾಮಕಾರಿ.
–ಸ್ವಾಮಿ ವಿವೇಕಾನಂದ



ಹುಮನಾಬಾದ್: ವಿದ್ಯುತ್ ಖಾಸಗಿಕರಣದಿಂದ ಆಗುವ ತೊಂದರೆಗಳ ಕುರಿತು ಮಾಜಿ ಸಚಿವ ರಾಜಶೇಖರ ಪಾಟೀಲ ರವರಿಗೆ ವಿದ್ಯುತ್ ಇಲಾಖೆಯ ಅಧಿಕಾರಿಗಳು ಬುಧುವಾರ ಮನವಿ ಪತ್ರ ಸಲ್ಲಿಸಿದರು.



ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ನಡೆದ ಕಾಂಗ್ರೆಸ್ ಶಾಸಕರ ಸಭೆಯಲ್ಲಿ ಸಿದ್ದರಾಮಯ್ಯ ಅವರು ಭಾಗವಹಿಸಿದ ಸಂದರ್ಭ.

## ಕೆಪಿಸಿಸಿ ನೂತನ ಅಧ್ಯಕ್ಷರ ಭೇಟಿ



**ಗಂಗಾವತಿ:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿಯ (ಕೆಪಿಸಿಸಿ) ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಕಾಂಗ್ರೆಸ್‌ನ ಹಿರಿಯ ನಾಯಕ ಬಿ.ಕೆ. ಹರಿಪ್ರಸಾದ್ ಅವರನ್ನು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕೊಪ್ಪಳ ಜಿಲ್ಲಾ ಅಧ್ಯಕ್ಷ ರೆಡ್ಡಿ ಶ್ರೀನಿವಾಸ ಅವರು ಬೆಂಗಳೂರಿನ ನಿವಾಸದಲ್ಲಿ ಭೇಟಿ ಮಾಡಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಬಿ.ಕೆ. ಹರಿಪ್ರಸಾದ್ ಅವರ ನೇತೃತ್ವದಲ್ಲಿ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಮತ್ತಷ್ಟು ಬಲಿಷ್ಠವಾಗಲಿ ಹಾಗೂ ಸಂಘಟನಾ ಚಟುವಟಿಕೆಗಳು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು. ರಾಜ್ಯದ ಜನಪರ ಯೋಜನೆಗಳನ್ನು ಸಮರ್ಪಕವಾಗಿ ಜನರಿಗೆ ತಲುಪಿಸುವಲ್ಲಿ ಪಕ್ಷದ ಸಂಘಟನೆ ಇನ್ನಷ್ಟು ಸಶಕ್ತವಾಗಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದ ರೆಡ್ಡಿ ಶ್ರೀನಿವಾಸ ಅವರು, ಪಕ್ಷದ ಬೆಳವಣಿಗೆಗೆ ಎಲ್ಲ ಕಾರ್ಯಕರ್ತರು ಒಗ್ಗಟ್ಟಿನಿಂದ ಶ್ರಮಿಸಬೇಕೆಂದು ಕರೆ ನೀಡಿದರು.

## ಜೀವ ಬೆದರಿಕೆ: ಭದ್ರತೆಗಾಗಿ ಸಿಎಂಗೆ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಈಡಿಗ ಸಮುದಾಯದ ಗುರುಗಳಾದ ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿ ಪೀಠ ಕಲಬುರ್ಗಿ ಶ್ರೀ ಶರಣಬಸವೇಶ್ವರ ಮಠ ಹಾವೇರಿ ಪೀಠಾಧಿಪತಿಗಳಾದ ಶ್ರೀ ಪ್ರಣವಾನಂದರಾಮ್ ಮಹಾಸ್ವಾಮಿಗಳಿಗೆ ಸಾಮಾಜಿಕ ಜಾಲತಾಣಗಳಲ್ಲಿ ಜೀವ ಬೆದರಿಕೆ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ ಸ್ವಾಮೀಜಿಗಳಿಗೆ ಸೂಕ್ತ ಭದ್ರತೆ ಒದಗಿಸಬೇಕು ಎಂದು ಬ್ರಹ್ಮಶ್ರೀ ನಾರಾಯಣ ಗುರು ಶಕ್ತಿ ಪೀಠ ಟ್ರಸ್ಟ್ ಹಾಗೂ ಅತಿ ಹಿಂದುಳಿದ ಮಠಾಧೀಶರ ಮಹಾಸಭಾ ಸ್ವಾಮೀಜಿಗಳು ಸಿಎಂ ಡಿ.ಕೆ. ಶಿವಕುಮಾರ್ ಅವರಿಗೆ ಮನವಿ ಸಲ್ಲಿಸಿದರು.

ಮುಖ್ಯಮಂತ್ರಿಗಳ ಸದಾಶಿವನಗರ ನಿವಾಸಕ್ಕೆ ಸ್ವಾಮೀಜಿಗಳು ಬುಧವಾರ ಭೇಟಿ ನೀಡಿ ಮನವಿ ಮಾಡಿದರು. ಸರ್ವಧರ್ಮ ಸಮಾಜದ ಶ್ರೀ ಸಂಗಮಾನಂದ ಸ್ವಾಮೀಜಿ, ವಿಶ್ವಕರ್ಮ ಸಮಾಜದ ಶ್ರೀ ದೊಡ್ಡೇಂದ್ರ ಸ್ವಾಮೀಜಿ, ಬಂಜಾರ ಸಮಾಜದ ಶ್ರೀ ಸರ್ದಾರ್ ಸೇವಾಲಾಲ್ ಸ್ವಾಮೀಜಿ, ಕುಂಬಾರ ಸಮಾಜದ ಶ್ರೀ ಬಸವಮೂರ್ತಿ ಕುಂಬಾರ



ಗುಡ್ಡಯ್ಯ ಸ್ವಾಮೀಜಿ, ಹೂಗಾರ ಸಮಾಜದ ಹಳ್ಳಿರಾಯ ನಾಟಿಕಾರ ಸ್ವಾಮೀಜಿ, ಅರೆ ಅಲೆಮಾರಿ ಸಮಾಜದ ಶ್ರೀ ಕರುಣಾಕರ ಸ್ವಾಮೀಜಿ, ಪಿಂಜಾರ ಸಮಾಜದ ಶ್ರೀ ಮರುಳಶಂಕರ ಸ್ವಾಮೀಜಿಗಳು ಮನವಿ ಸಲ್ಲಿಸಿದರು.

ಶ್ರೀ ಪ್ರಣಾವಾನಂದರಾಮ್ ಮಹಾಸ್ವಾಮಿಗಳು ಈಡಿಗ ಹಾಗೂ ಹಿಂದುಳಿದ ಸಮಾಜಕ್ಕೆ ಆಗಿರುವ ಅನ್ಯಾಯಗಳ ಬಗ್ಗೆ ಗೋಕರ್ಣದಲ್ಲಿ ನಡೆದ ಸಮಾಜ ಸಭೆಯಲ್ಲಿ ಧ್ವನಿ ಎತ್ತಿದ್ದರು. ಮಾಜಿ ಸಿಎಂ ಸಿದ್ದರಾಮಯ್ಯ ಅವರು ಎಲ್ಲಾ ಸಮುದಾಯಗಳಿಗೂ ಸಮನಾಗಿ ಅನುದಾನ ಬಿಡುಗಡೆ ಮಾಡಬೇಕಿತ್ತು ಎಂದು ಆಗ್ರಹಿಸಿದ್ದರು.

## ಪಿಡಿಓ ನೇಮಕಾತಿ ಶೀಘ್ರ ಪೂರ್ಣಕ್ಕೆ ಸೂಚನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಪಂಚಾಯತ್ ಅಭಿವೃದ್ಧಿ ಅಧಿಕಾರಿ (ಪಿಡಿಓ) 150 ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ ಖಂಡ್ರೆ ಕರ್ನಾಟಕ ಲೋಕ ಸೇವಾ ಆಯೋಗದ ಕಾರ್ಯದರ್ಶಿಗಳಿಗೆ ತಿಳಿಸಿದ್ದಾರೆ.

ಕೆಪಿಎಸ್.ಸಿ. ಕಾರ್ಯದರ್ಶಿಗೆ ಕಳಿಸಿರುವ ಲಿಖಿತ ಸೂಚನೆಯಲ್ಲಿ ಅವರು, ಗ್ರಾಮೀಣ ಪ್ರದೇಶದ ಪ್ರಗತಿಯಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಪಾತ್ರ ಮಹತ್ವದ್ದಾಗಿದ್ದು, ಕಲ್ಯಾಣ ಕರ್ನಾಟಕ ವೃಂದದಲ್ಲಿ 97 ಹಾಗೂ ಉಳಿಕೆ ವೃಂದದಲ್ಲಿ 150 ಪಂಚಾಯ್ತಿ ಅಧಿಕಾರಿಗಳ ಹುದ್ದೆಗಳ ಭರ್ತಿಗೆ 2024ರಲ್ಲಿ ಅಧಿಸೂಚನೆ ಆಗಿದ್ದರೂ ಅಂತಿಮ ಪಟ್ಟಿ ಪ್ರಕಟಿಸದಿರುವ ಬಗ್ಗೆ ಪ್ರಸ್ತಾಪಿಸಿದ್ದಾರೆ.



ಹಳ್ಳಿಗಳ ಆತ್ಮ ಗ್ರಾಮಗಳಲ್ಲಿದ್ದು, ಹಳ್ಳಿಗಳ ಅಭಿವೃದ್ಧಿಯಾದಾಗ ಮಾತ್ರವೇ ದೇಶದ ಅಭಿವೃದ್ಧಿ ಸಾಧ್ಯ ಎಂಬ ಮಹಾತ್ಮಾ ಗಾಂಧೀ ಅವರ ಮಾತುಗಳನ್ನು ಉಲ್ಲೇಖಿಸಿರುವ ಈಶ್ವರ ಖಂಡ್ರೆ, ಪಿಡಿಓಗಳ ನೇರ ನೇಮಕಾತಿ ಪ್ರಕ್ರಿಯೆ ನಡೆಸುವ ಸಂಬಂಧ ಕೆ.ಪಿ.ಎಸ್.ಸಿಗೆ 2024ರ ಮಾರ್ಚ್ 14ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

# ಪರಿಷತ್‌ಗೆ ಇಂದು ಫೈಟ್

## ವಿಧಾನ ಪರಿಷತ್‌ನ 7 ಸ್ಥಾನಕ್ಕಾಗಿ ಚುನಾವಣೆ | ಅಖಾಡದಲ್ಲಿ ಜೆಡಿಎಸ್, ಬಿಜೆಪಿ ಕಾಂಗ್ರೆಸ್ ಹುರಿಯಾಳುಗಳು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ವಿಧಾನ ಪರಿಷತ್‌ನ ಏಳು ಸ್ಥಾನಗಳಿಗೆ ಇಂದು (ಜೂನ್ 18) ಚುನಾವಣೆ ನಡೆಯಲಿದೆ. ಒಟ್ಟು ಏಳು ಸ್ಥಾನಗಳಿಗೆ 8 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಹೀಗಾಗಿ ಚುನಾವಣಾ ಕಣ ರಂಗೇರಿದ್ದು, ಕಾಂಗ್ರೆಸ್ ಪಕ್ಷದ ಐದನೇ ಅಭ್ಯರ್ಥಿ ವಿಜಯ್ ಕಾರ್ತಿಕ್, ಜೆಡಿಎಸ್ ಪಕ್ಷದ ಅಭ್ಯರ್ಥಿ ಗೋವಿಂದ ರಾಜು ಪೈಕಿ ಯಾರು ಗೆಲ್ಲುತ್ತಾರೆ ಎಂಬುವುದು ಸದ್ಯಕ್ಕೆ ಭಾರೀ ಕುತೂಹಲಕ್ಕೆ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷವು ಬಿಡದಿ ರೆಸಾರ್ಟ್‌ನಲ್ಲಿ ತನ್ನ ಶಾಸಕರಿಗಾಗಿ ಅಣಕು ಮತದಾನ ಆಯೋಜಿಸಿ ಗಮನಸೆಳೆದಿದೆ. ಇದರಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭಾಗವಹಿಸಿದ್ದು ವಿಶೇಷವಾಗಿದೆ.

**ಚುನಾವಣಾ ಕಣ ರಂಗು:** ವಿಧಾನ ಪರಿಷತ್‌ಕಣದಲ್ಲಿ ಏಳನೇ ಅಭ್ಯರ್ಥಿ ಅಖಾಡಕ್ಕಿಳಿಸಿರುವುದು ಮೇಲ್ಮನೆ ಚುನಾವಣಾ ಕಣ ರಂಗೇರುವಂತೆ ಮಾಡಿದೆ. ಏಳು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಯಲ್ಲಿ ಕಾಂಗ್ರೆಸ್ 5 ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದರೆ, ಬಿಜೆಪಿ 2 ಹಾಗೂ ಜೆಡಿಎಸ್ ಒಬ್ಬ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ.

**ಇಬ್ಬರ ನಡುವೆ ತೀವ್ರ ಸ್ಪರ್ಧೆ:** ಈ ಚುನಾವಣೆಯಲ್ಲಿ ಕಾಂಗ್ರೆಸ್ನ ನಾಲ್ವರು ಹಾಗೂ ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಸರಾಗವಾಗಿ ಗೆಲುವು ಸಾಧಿಸಲಿದ್ದಾರೆ. ಆದರೆ ಏಳನೇ ಸ್ಥಾನಕ್ಕೆ ಜಟಾಪಟಿ ಶುರುವಾಗಿದೆ. ಕಾಂಗ್ರೆಸ್ ಅಭ್ಯರ್ಥಿ ವಿನಯ್ ಕಾರ್ತಿಕ್ ಹಾಗೂ ಜೆಡಿಎಸ್ ಅಭ್ಯರ್ಥಿ ಗೋವಿಂದ ನಡುವೆ ತೀವ್ರ ಸ್ಪರ್ಧೆ ಏರ್ಪಟ್ಟಿದೆ.

### ಉಚ್ಚಾಟಿತರ ಸಂಚಲನ..!

ಬಿಜೆಪಿಯ ಉಚ್ಚಾಟಿತ ಶಾಸಕ ಸೋಮಶೇಖರ್, ಶಿವರಾಮ್‌ಹೆಬ್ಬಾರ್ ಅವರು ಕಾಂಗ್ರೆಸ್‌ನಲ್ಲಿ ಗುರುತಿಸಿಕೊಂಡಿದ್ದು ಸಂಚಲನಕ್ಕೆ ಕಾರಣವಾಗಿದೆ. ಬಸನಗೌಡ ಪಾಟೀಲ್ ಯತ್ನಾಳ್ ಮತ ಯಾರಿಗೆ? ಉತ್ತರವಿಲ್ಲ. 7ನೇ ಅಭ್ಯರ್ಥಿಯನ್ನು ಗೆಲ್ಲಿಸಲು ಕಾಂಗ್ರೆಸ್ ಕಸರತ್ತು ನಡೆಸಿದ್ದು, ಕೆಲ ಜೆಡಿಎಸ್, ಬಿಜೆಪಿಯಿಂದ ಗೆದ್ದಿರುವ ಶಾಸಕರನ್ನು ಸೆಳೆಯುವ ಯತ್ನ ನಡೆಸಿದೆ.

### ರೆಸಾರ್ಟ್ ರಾಜಕೀಯ

ಕರ್ನಾಟಕ ವಿಧಾನಸಭೆಯಿಂದ ವಿಧಾನ ಪರಿಷತ್ ದ್ವೈವಾರ್ಷಿಕ ಚುನಾವಣೆಯಲ್ಲಿ ಕ್ರಾಸ್ ವೋಟಿಂಗ್ ಆತಂಕ ಎದುರಿಸುತ್ತಿರುವ ಕಾಂಗ್ರೆಸ್ ತನ್ನ ಮತಗಳ ರಕ್ಷಣೆಗಾಗಿ ರೆಸಾರ್ಟ್ ಮೊರೆಹೋಗಿದೆ. ಒಂದು ಮಾಹಿತಿ ಪ್ರಕಾರ ಅಡ್ಡ ಮತದಾನ ಆಗುವ ಭೀತಿಯಿಂದ ಕಾಂಗ್ರೆಸ್ ಈ ಕ್ರಮ ಕೈಗೊಂಡಿದೆ. ಏತನ್ಮಧ್ಯೆ ಅತೃಪ್ತರಿಗೆ ಜೆಡಿಎಸ್ ಕರೆ ಮಾಡಿರುವುದಾಗಿ ಮೂಲಗಳು ತಿಳಿಸಿವೆ.







### ಕಣದಲ್ಲಿರುವ ಕಲಿಗಳು..?

ಕಾಂಗ್ರೆಸ್ ಅಭ್ಯರ್ಥಿಗಳಾಗಿ ಬಿಕೆ ಹರಿಪ್ರಸಾದ್, ತಿಪ್ಪಣ್ಣಪ್ಪ ಕಮಕನೂರ, ಪಿವಿ ಮೋಹನ್, ಶಿವಣ್ಣ ಕಣದಲ್ಲಿದ್ದಾರೆ. 5ನೇ ಅಭ್ಯರ್ಥಿಯಾಗಿ ವಿನಯ್‌ಕಾರ್ತಿಕ್ ಅಖಾಡದಲ್ಲಿದ್ದಾರೆ. ಬಿಜೆಪಿ ಅಭ್ಯರ್ಥಿಗಳಾಗಿ ಲಿಂಗರಾಜ್ ಪಾಟೀಲ್ ಹಾಗೂ ರಘು ಕೌಟಿಲ್ಯ ಅವರನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಲಾಗಿದೆ. ಇನ್ನು ಜೆಡಿಎಸ್ ನಿಂದ ಗೋವಿಂದರಾಜು ಅವರು ಅಖಾಡಲ್ಲಿದ್ದಾರೆ.

### ಗೆಲ್ಲೋಕೆ ಬೇಕಿರುವ ಸಂಖ್ಯೆ..?

ಒಬ್ಬ ಅಭ್ಯರ್ಥಿ ಗೆಲುವಿಗೆ ಬೇಕಾದ ಮತಗಳು 28. ಕಾಂಗ್ರೆಸ್ ಐದು ಅಭ್ಯರ್ಥಿಗಳನ್ನು ಗೆಲ್ಲಿಸಲು 140 ಮತ ಬೇಕು. ಅದರೆ ಕಾಂಗ್ರೆಸ್ ಬಳಿ ಇರುವ ಸಂಖ್ಯೆ 135. ಜೊತೆಗೆ ಎರಡು ಪಕ್ಷೇತರ ಶಾಸಕರು, 1 ಸರ್ವೋದಯ ಪಕ್ಷದ ಶಾಸಕರ ಬೆಂಬಲದಿಂದ 138 ಆಗಲಿದೆ. ಉಚ್ಚಾಟಿತ ಶಾಸಕ ಎಸ್ಟಿ ಸೋಮಶೇಖರ್, ಶಿವರಾಂ ಹೆಬ್ಬಾರ್ ಬೆಂಬಲದಿಂದ 140 ಆಗಲಿದೆ. ಹಾಗಾಗಿ ಐದನೇ ಅಭ್ಯರ್ಥಿಯನ್ನು ಗೆಲ್ಲಿಸುವ ಹುಮ್ಮಸ್ಸಿನಲ್ಲಿ ಸಿಎಂ ಡಿಕೆಶಿ ಇದ್ದಾರೆ.

## ನೇಣು ಬಿಗಿದುಕೊಂಡು ಪಿಎಸ್‌ಐ ಆತ್ಮಹತ್ಯೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ರಾಜ್ಯದ ಗೃಹ ಹಾಗೂ ಐಟಿಬಿಟಿ ಸಚಿವ ಪ್ರಿಯಾಂಕ್ ಖರ್ಗೆ ಅವರ ತವರು ಕ್ಷೇತ್ರವಾದ ಕಲಬುರ್ಗಿಯಲ್ಲಿ ಪಿಎಸ್‌ಐಯೊಬ್ಬರು ಸೀರೆಯಿಂದ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡ ಘಟನೆ ಮಂಗಳವಾರ ನಗರದ ಗಂಗಾನಗರದಲ್ಲಿ ತಡರಾತ್ರಿ ಬೆಳಕಿಗೆ ಬಂದಿದೆ. ಮೃತರಿಗೆ ನಗರ ಪೋಲಿಸ್ ಆಯುಕ್ತರ ಕಚೇರಿ ವ್ಯಾಪ್ತಿಯಲ್ಲಿ ಬರುವ ಡಿಸಿಆರ್‌ಬಿ ವಿಭಾಗದ ಪಿಎಸ್‌ಐ ಹಾಗೂ ಗಂಗಾನಗರದ ನಿವಾಸಿ ಬಸವರಾಜ್ ಶಾಂತಪ್ಪ ಹೇರೂರ್ (39) ಎಂದು ಗುರುತಿಸಲಾಗಿದೆ.



ಬಸವರಾಜ್ ಅವರು ಕಳೆದ ಮಂಗಳವಾರ ತಡರಾತ್ರಿ ಗೆಳೆಯರಿಗೆ ಮೊಬೈಲ್ ಕರೆ ಮಾಡಿ ಆತ್ಮಹತ್ಯೆ ವಿಷಯ ಹೇಳಿಕೊಂಡರು. ವಿಷಯ ತಿಳಿದ ಗೆಳೆಯರು ಬಸವರಾಜ್ ಅವರ ತಂದೆಗೆ ಮೊಬೈಲ್ ಕರೆ ಮಾಡಿ ವಿಷಯ ಹೇಳಿದರು. ತಕ್ಷಣ ಅವರ ತಂದೆ ಮನೆಯ ಬಾಗಿಲು ಒಡೆದು ನೋಡುವಷ್ಟರಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಬಸವರಾಜ್ ಅವರು ಪತ್ತೆಯಾದರು. ಬಸವರಾಜ್ ಹೇರೂರ್ ಅವರು ಕಳೆದ 2014ರ ಬ್ಯಾಚ್ ಪಿಎಸ್‌ಐ ಆಗಿದ್ದರು. ಅವರ ತಂದೆ ಶಾಂತಪ್ಪ ಅವರು ನಿವೃತ್ತ ಮುಖ್ಯ ಗುರುಗಳು. ಪತ್ನಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ. ದಂಪತಿಗೆ ಮೂವರು ಪುತ್ರಿಯರು ಇದ್ದು, ಮಾನಸಿಕ ಕಿನ್ನತೆಗೆ ಒಳಗಾಗಿದ್ದರು ಎನ್ನಲಾಗಿದೆ.

ಕುಟುಂಬದ ಮೂಲಗಳ ಪ್ರಕಾರ ತೀವ್ರ ಮಾನಸಿಕ ಖಿನ್ನತೆಗೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಹೇಳಲಾಗಿದೆ. ಆದಾಗ್ಯೂ, ಕೌಟುಂಬಿಕ ಸಮಸ್ಯೆಗಳು ಇರಬಹುದು ಎಂದು ಶಂಕೆ ವ್ಯಕ್ತಪಡಿಸಲಾಗಿದೆ. ಈ ಕುರಿತು ರಾಘವೇಂದ್ರ ನಗರ ಠಾಣೆಯ ಪೋಲಿಸರು ಪ್ರಕರಣ ದಾಖಲಿಸಿಕೊಂಡಿದ್ದು, ಶವವನ್ನು ಜಿಮ್ಸ್ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ಕಳಿಸಲಾಗಿದೆ.

ಬಸವರಾಜ್ ಆಗಾಗ ಹೊಟ್ಟೆನೋವು ಎನ್ನುತ್ತಿದ್ದ. ಆಗಾಗ ಮದ್ಯ ಕುಡಿಯುತ್ತಿದ್ದ. ಆತ್ಮಹತ್ಯೆಗೆ ಕಾರಣ ಏನೆಂದೂ ಗೊತ್ತಿಲ್ಲ. ಆತ್ಮಹತ್ಯೆ ಮಾಡಿಕೊಳ್ಳುವ ಮುಂಚೆ ತನ್ನ ಸಹುದ್ಯೋಗಿಗಳ ಜೊತೆಗೆ ಕೆಲಸದ ವಿಚಾರವಾಗಿ ಮಾತನಾಡಿದ್ದಾನೆ. ಕೆಲಸದಲ್ಲೂ ಯಾವುದೇ ಸಮಸ್ಯೆ ಇರಲಿಲ್ಲ ಎಂದು ಅವರು ಹೇಳಿದರು. ಸ್ಥಳಕ್ಕೆ ನಗರ ಪೋಲಿಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ., ಅವರು ಭೇಟಿ ನೀಡಿ ಪರಿಶೀಲಿಸಿದರು. ಈ ಕುರಿತು ನ್ಯೂ ರಾಘವೇಂದ್ರ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

# ಕಾರ್ಖಾನೆಗಳ ಕೆಮಿಕಲ್ ಹಳ್ಳದ ಹಲ್‌ಚಲ್..?

• ಮಲ್ಲಿಕಾರ್ಜುನ ರೆಡ್ಡಿ, ಹುಮನಾಬಾದ್

ಕಾರ್ಖಾನೆಗಳ ಕೆಮಿಕಲ್ ಇದೀಗ ಪವಿತ್ರವಾದ ಜೀವಜಲ ಜೀವಜಲ ಹಳ್ಳಕ್ಕೆ ಬಿಟ್ಟಿರುವುದು ಜನರ ಕೆಂಗಣ್ಣಿಗೆ ಕಾರಣವಾಗಿದೆ. ಜೀವಜಲ ಉಳಿಸಲು ಜನರ ಹೋರಾಟ ಅನಿವಾರ್ಯ ಎಂದು ಪರಿಸರ ಪ್ರೇಮಿಗಳು ಎಚ್ಚರಿಕೆ ನೀಡಿದ್ದಾರೆ.


**ಜನರಲ್ಲಿ ತೀವ್ರ ಆಕ್ರೋಶ:** ಹುಮನಾಬಾದ್ ನೆಲದಲ್ಲಿ ಕೈಗಾರಿಕೆಗಳ ಹೆಸರಿನಲ್ಲಿ ಪರಿಸರಕ್ಕೆ ಹಾನಿಯಾಗುವ ಚಟುವಟಿಕೆಗಳು ನಡೆಯುತ್ತಿದ್ದು, ಜನರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿವೆ. ಹಳ್ಳಗಳಿಗೆ ರಾಸಾಯನಿಕ ತ್ಯಾಜ್ಯ ನೀರು ಸೇರುತ್ತಿದೆ ಎಂಬ ದೂರಿನ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಪರಿಶೀಲನೆ ನಡೆಸಿ ಸತ್ಯಾಸತ್ಯತೆ ಹೊರತರಬೇಕಿದೆ.

**ನಿರ್ಲಕ್ಷ್ಯಕ್ಕೆ ಅವಕಾಶ ಬೇಡ:** ಜನರ ಜೀವ, ಜಾನುವಾರುಗಳ ರಕ್ಷಣೆ ಹಾಗೂ ರೈತರ ಭವಿಷ್ಯದ ಪ್ರಶ್ನೆ ಎದುರಾದಾಗ ಯಾವುದೇ ನಿರ್ಲಕ್ಷ್ಯಕ್ಕೆ ಅವಕಾಶ ಇರಬಾರದು. ಹಳ್ಳಗಳು ನಮ್ಮ ಗ್ರಾಮೀಣ ಬದುಕಿನ ಜೀವನಾಡಿ. ಇದೇ ನೀರಿನ ಮೇಲೆ ರೈತರು ಕೃಷಿ ಮಾಡುತ್ತಾರೆ, ಜಾನುವಾರುಗಳು ಅವಲಂಬಿಸಿವೆ ಮತ್ತು ಪರಿಸರದ ಸಮತೋಲನ ಉಳಿದಿದೆ.

**ಪ್ರಕೃತಿಯ ನಾಶ ಸಲ್ಲ:** ಈ ಜೀವನಾಡಿಯನ್ನು ಕಲುಷಿತಗೊಳಿಸುವ ಯಾವುದೇ ಕ್ರಮ ಜನರ ಬದುಕಿನ ಮೇಲೆ ನೇರ ಪರಿಣಾಮ ಬೀರುವ ಅಪಾಯವಿದೆ. ಅಭಿವೃದ್ಧಿಯ ಹೆಸರಿನಲ್ಲಿ ಪ್ರಕೃತಿಯನ್ನು ನಾಶ ಮಾಡುವ ಮನೋಭಾವಕ್ಕೆ ಸಮಾಜ ಒಗ್ಗಟ್ಟಿನಿಂದ ವಿರೋಧ ವ್ಯಕ್ತಪಡಿಸಬೇಕು.

**ಪಂಚಾಯಿತಿ ಫಜೀತಿ**





### ಸಂಬಂಧಿತ ಇಲಾಖೆ ಪರಿಶೀಲಿಸಲಿ: ಜನತೆ

ಜಿಲ್ಲಾಡಳಿತ, ಮಾಲಿನ್ಯ ನಿಯಂತ್ರಣ ಅಧಿಕಾರಿಗಳು ಮತ್ತು ಸಂಬಂಧಪಟ್ಟ ಇಲಾಖೆಗಳು ಕೇವಲ ವರದಿಗಳಲ್ಲಿ ಸೀಮಿತವಾಗದೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ನಿಯಮ ಉಲ್ಲಂಘನೆ ನಡೆದಿರುವುದು ದೃಢಪಟ್ಟಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಪರಿಸರ ಪ್ರೇಮಿಗಳು ಒತ್ತಾಯಿಸುತ್ತಿದ್ದಾರೆ.

ಯಾವುದೇ ಕೈಗಾರಿಕಾ ತ್ಯಾಜ್ಯ ಹಳ್ಳಕ್ಕೆ ಹರಿಯುತ್ತಿಲ್ಲ. ಎಲ್ಲಾ ಕರೆಕ್ಟ್ ಆಗಿದೆ. ಗಡವಂತಿ ಬ್ರಿಡ್ಜ್ ಬಳಿ ಹಳ್ಳದ ನೀರು ಕ್ಲಿಯರ್ ಆಗಿದೆ. ಮಾಣಿಕನಗರದ ಬಳಿ ಸುತ್ತಮುತ್ತಲ ಚರಂಡಿ ನೀರು ಸೇರಿ ಮಲಿನವಾಗಿದೆ. ಪ್ರಾದೇಶಿಕ ಪ್ರಯೋಗಾಲಯದ ವರದಿಯಲ್ಲಿ ಕೋಳಿಫಾರಮ್ ಹಾಗೂ ಇ ಕೊಲಿ ಎಂಬ ವೈರಾಣುದಿಂದ ನೀರು ವಾಸನೆ ಬರಲು ಕಾರಣವಾಗಿದೆ.

–**ಸಂತೋಷ್,** ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಎಂಜಿನಿಯರ್

### ವರದಿ ಬಂದಿದೆ, ಎಲ್ಲಿದೆ..?

ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸಹಾಯಕ ಪರಿಸರ ಎಂಜಿನಿಯರ್ ಸಂತೋಷ್ ಅವರನ್ನು ಪ್ರಶ್ನಿಸಿದಾಗ, ಈ ಕಲುಷಿತ ನೀರನ್ನು ಪಿಡಿಓ, ಗ್ರಾ.ಪಂ, ಸಮ್ಮುಖದಲ್ಲೇ ಸಂಗ್ರಹಿಸಿದ್ದು, ಕಲ್ಬುರ್ಗಿಯ ಪ್ರಾದೇಶಿಕ ಪ್ರಯೋಗಾಲಯಕ್ಕೆ ಕಳಿಸಲಾಗಿದೆ. ವರದಿಯೂ ಬಂದಿದೆ ಎಂದಿದ್ದಾರೆ. ಆ ವರದಿ ಕೊಡಿ ಎಂದಾಗ, ಅದಕ್ಕೆ ಅವರು, ಪ್ರಮುಖ ಅಧಿಕಾರಿ ಆದಮ್ ಪಟೇಲರು ಪ್ರಭಾರರಾಗಿದ್ದು ಇದೀಗ ಯಾದಗಿರಿಯಲ್ಲಿದ್ದಾರೆ. ಅವರ ಸ್ವಿಚ್ ಆಫ್ ಆಗಿದೆ. ಅವರನ್ನು ಕೇಳಿಯೇ ನಾವು ಕೊಡಬೇಕು ಎಂದು ಸಮಜಾಯಿಷಿ ನೀಡಿದ್ದಾರೆ.

## 'ನನ್ನ ಪತ್ರಕ್ಕೆ RSS ಮುಖ್ಯಸ್ಥ ಮೋಹನ್ ಭಾಗವತ್ ಸರಿಯಾದ ಉತ್ತರ ನೀಡಬೇಕು': ಪ್ರಿಯಾಂಕ್ ಖರ್ಗೆ

# ರೈತರ ಬಾಕಿ ಉಳಿದ ಪರಿಹಾರದ ಮೊತ್ತ ತಕ್ಷಣ ಬಿಡುಗಡೆ ಆಗಲಿ

ರಾಜ್ಯದ ಬೆನ್ನೆಲುಬಾಗಿರುವ ರೈತರು ಪ್ರಕೃತಿಯ ವೈಪರೀತ್ಯ, ಅಕಾಲಿಕ ಮಳೆ, ಬರ ಹಾಗೂ ವಿವಿಧ ಬೆಳೆ ಹಾನಿಗಳಿಂದ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರ ಘೋಷಿಸಿರುವ ಪರಿಹಾರದ ಮೊತ್ತ ಸಮಯಕ್ಕೆ ಸರಿಯಾಗಿ ರೈತರ ಕೈ ಸೇರದಿರುವುದು ಆತಂಕಕಾರಿ ಸಂಗತಿಯಾಗಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಅನೇಕ ರೈತರು ಬೆಳೆ ನಷ್ಟದಿಂದ ಸಾಲದ ಹೊರೆ ಹೊತ್ತು ಜೀವನ ಸಾಗಿಸುತ್ತಿದ್ದಾರೆ. ಸರ್ಕಾರದಿಂದ ಬರುವ ಪರಿಹಾರದ ಹಣದ ನಿರೀಕ್ಷೆಯಲ್ಲಿ ದಿನ ಕಳೆಯುತ್ತಿರುವ ರೈತರಿಗೆ ವಿಳಂಬವಾಗುತ್ತಿರುವ ಪಾವತಿ ಮತ್ತಷ್ಟು ಸಂಕಷ್ಟವನ್ನುಂಟು ಮಾಡುತ್ತಿದೆ. ಆದ್ದರಿಂದ ಅಧಿಕಾರಿಗಳು ಬಾಕಿ ಉಳಿದಿರುವ ಎಲ್ಲಾ ಪರಿಹಾರದ ಮೊತ್ತಗಳ ಪಟ್ಟಿಯನ್ನು ಪರಿಶೀಲಿಸಿ ಯಾವುದೇ ವಿಳಂಬವಿಲ್ಲದೆ ರೈತರ ಖಾತೆಗಳಿಗೆ ನೇರವಾಗಿ ಜಮಾ ಮಾಡಬೇಕು.

ರೈತರ ಕಷ್ಟವನ್ನು ಅರ್ಥಮಾಡಿಕೊಳ್ಳುವುದು ಸರ್ಕಾರ ಮತ್ತು ಆಡಳಿತದ ಪ್ರಮುಖ ಜವಾಬ್ದಾರಿಯಾಗಿದೆ. ಬೆಳೆ ಹಾನಿ ಪರಿಹಾರವು ಕೇವಲ ಹಣಕಾಸಿನ ನೆರವಲ್ಲ; ಅದು ರೈತರ ಬದುಕಿಗೆ ಆಸರೆಯಾಗಿದೆ. ರೈತರ ಸಮಸ್ಯೆಗಳಿಗೆ ತ್ವರಿತ ಸ್ಪಂದನೆ ನೀಡಿದಾಗ ಮಾತ್ರ ಕೃಷಿ ಕ್ಷೇತ್ರ ಬಲಗೊಳ್ಳುತ್ತದೆ.

ಹೀಗಾಗಿ ರಾಜ್ಯ ಸರ್ಕಾರ ಹಾಗೂ ಸಂಬಂಧಪಟ್ಟ ಇಲಾಖೆಗಳು ರೈತರ ಬಾಕಿ ಉಳಿದಿರುವ ಪರಿಹಾರದ ಮೊತ್ತಗಳನ್ನು ತಕ್ಷಣ ಬಿಡುಗಡೆ ಮಾಡಿ ಅನ್ನದಾತರ ನೆರವಿಗೆ ಧಾವಿಸಬೇಕು. ರೈತರ ಬದುಕಿನಲ್ಲಿ ಭರವಸೆಯ ಬೆಳಕು ಮೂಡಿಸಲು ಇದು ಅತ್ಯಂತ ಅಗತ್ಯವಾಗಿದೆ.



# ಸಂವಿಧಾನವೇ ದೇಶದ ಧರ್ಮಗ್ರಂಥ: ಎಸ್.ಬಿ. ಕುಚಬಾಳ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಡಾ. ಬಾಬಾಸಾಹೇಬ ಅಂಬೇಡ್ಕರ್ ರಚಿಸಿದ ಸಂವಿಧಾನವೇ ದೇಶದ ನಿಜವಾದ ಧರ್ಮಗ್ರಂಥವಾಗಿದ್ದು, ಅದು ಭಾರತೀಯರ ರಕ್ಷಾ ಕವಚವಾಗಿದೆ ಎಂದು ನಿವೃತ್ತ ಶಿಕ್ಷಣಾಧಿಕಾರಿ ಎಸ್.ಬಿ. ಕುಚಬಾಳ ಅಭಿಪ್ರಾಯಪಟ್ಟರು.

ನಗರದ ಡಾ. ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಭೀಮರಾಜ ಸಾಹಿತ್ಯ ಪರಿಷತ್, ಬೀದರ ವತಿಯಿಂದ ಮಂಗಳವಾರ ಆಯೋಜಿಸಲಾದ ಬುದ್ಧ, ಬಸವ, ಅಂಬೇಡ್ಕರ ಸಾಂಸ್ಕೃತಿಕ ಉತ್ಸವ ಹಾಗೂ ಸಂವಿಧಾನ ಕುರಿತ ವಿಚಾರ ಸಂಕಿರಣ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.



ಭಾರತದಲ್ಲಿ ವಿವಿಧ ಜಾತಿ, ಧರ್ಮಗಳ ಜನರು ವಾಸಿಸುತ್ತಿದ್ದು, ಪ್ರತಿಯೊಬ್ಬರಿಗೂ ತಮ್ಮದೇ ಆದ ಧರ್ಮಗ್ರಂಥಗಳಿವೆ. ಆದರೆ ದೇಶದ ಎಲ್ಲ ನಾಗರಿಕರನ್ನು ಸಮಾನವಾಗಿ ಕಾಣುವ ಸಂವಿಧಾನವೇ ಭಾರತದ ಧರ್ಮಗ್ರಂಥವಾಗಿದೆ. ಇದು ಪ್ರತಿಯೊಬ್ಬ ಭಾರತೀಯನ ಹಕ್ಕುಗಳನ್ನು ಕಾಪಾಡುವ ರಕ್ಷಾ ಕವಚವಾಗಿದ್ದು, ಸಮಾನತೆ ಹಾಗೂ ನ್ಯಾಯವನ್ನು ಒದಗಿಸುತ್ತದೆ ಎಂದು ಹೇಳಿದರು.

ಸಂವಿಧಾನವು ಸರ್ವರ ಹಿತವನ್ನು ಕಾಪಾಡುವುದರ ಜೊತೆಗೆ ಸಮಾನ ಅವಕಾಶಗಳನ್ನು ನೀಡುವ ಮೂಲಕ ದೇಶದ ಸರ್ವಾಂಗೀಣ ಅಭಿವೃದ್ಧಿಗೆ ದಾರಿಯಾಗುತ್ತದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಸಮಾಜದ ಮುಖಂಡ ಶಂಕರರಾವ ದೊಡ್ಡಿ ಮಾತನಾಡಿ, ಸಂವಿಧಾನವು ಕೇವಲ ದಲಿತ ಸಮುದಾಯಕ್ಕೆ ಸೀಮಿತವಾಗಿಲ್ಲ. ಅದು ಎಲ್ಲ ಧರ್ಮ, ಜಾತಿ ಹಾಗೂ ವರ್ಗಗಳ ಜನರಿಗೆ ನ್ಯಾಯ ಮತ್ತು ಸಮಾನ ಹಕ್ಕುಗಳನ್ನು ಒದಗಿಸಿದೆ ಎಂದು ಹೇಳಿದರು.

ಇನ್ನೋರ್ವ ಮುಖ್ಯ ಅತಿಥಿ ಸಂದೀಪ್ ಕಾಂಟೆ ಮಾತನಾಡಿ, ಇಂದಿನ ಪರಿಸ್ಥಿತಿಯಲ್ಲಿ ಸಂವಿಧಾನವೇ ನಮ್ಮ ಉಸಿರಾಗಿದ್ದು, ಅದರ ಮೌಲ್ಯಗಳನ್ನು ಕಾಪಾಡುವುದು ಪ್ರತಿಯೊಬ್ಬ ನಾಗರಿಕನ ಆದ್ಯಕರ್ತವ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸಮಾಜ ಸೇವಕ ಸುರೇಶ್ ಜೋಜನಾಕರ್ ಮಾತನಾಡಿ, ಎಲ್ಲರ ಹಿತ ಕಾಪಾಡುತ್ತಿರುವ ಸಂವಿಧಾನವನ್ನು ಕೆಲವರು ಬದಲಾಯಿಸಲು ಯತ್ನಿಸುತ್ತಿದ್ದಾರೆ. ಆದರೆ ಅಂತಹ ಪ್ರಯತ್ನಗಳು ಯಶಸ್ವಿಯಾಗುವುದಿಲ್ಲ ಎಂದು ಹೇಳಿದರು.

ಕಾರ್ಯಕ್ರಮದ ಸಾನಿಧ್ಯವನ್ನು ಕಲಬುರಗಿಯ ಅಮ್ರಪಾಲಿ ಬುದ್ಧ ವಿಹಾರದ ಪೂಜ್ಯ ಭಂತೆ ಧಮ್ಮಜ್ಯೋತಿ ವಹಿಸಿದ್ದರು. ಭೀಮರಾಜ ಸಾಹಿತ್ಯ ಪರಿಷತ್ ಅಧ್ಯಕ್ಷ ತಾತ್ಯಾರಾವ ಕೆ. ಮಾರ್ಥಂಡ್ ಅಧ್ಯಕ್ಷತೆ ವಹಿಸಿದ್ದರು.

ವೇದಿಕೆಯಲ್ಲಿ ಡಿ.ಎಸ್.ಎಸ್. ಅಧ್ಯಕ್ಷ ಅರುಣ ಪಟೇಲ್, ಶಕ್ತಿ ಕನ್ನಡ ದಿನಪತ್ರಿಕೆಯ ಸಂಪಾದಕ ಶಕ್ತಿಕಾಂತ ಬಾವಿದೊಡ್ಡಿ, ನಿವೃತ್ತ ಪ್ರಾಂಶುಪಾಲ ಎಂ.ಡಿ. ನಿಝಾಮ್, ಆಲ್ ಇಂಡಿಯಾ ಬುದ್ಧಿಷ್ಟ ಎಜ್ಯುಕೇಶನ್ ಸೊಸೈಟಿ ಅಧ್ಯಕ್ಷ ಪ್ರಸನ್ನ ಡಾಂಗೆ ಹಾಗೂ ಹಿರಿಯ ಸಮಾಜ ಸೇವಕ ಸುಧಾಕರ ಎಕಂಬೇಕರ್ ಉಪಸ್ಥಿತರಿದ್ದರು.

ನಿವೃತ್ತ ಗ್ರಂಥಪಾಲಕ ಬಸವರಾಜ ದಾಂಡೇಕರ್ ಕಾರ್ಯಕ್ರಮ ನಿರ್ವಹಿಸಿದರು. ಬಳಿಕ ವಿವಿಧ ಕಲಾ ತಂಡಗಳಿಂದ ಸಾಂಸ್ಕೃತಿಕ ಉತ್ಸವ ಜರುಗಿತು. 15ಕ್ಕೂ ಹೆಚ್ಚು ಕಲಾ ತಂಡಗಳು ಭಾಗವಹಿಸಿ ಹಾಡು, ತತ್ವಪದ, ಕೋಲಾಟ ಹಾಗೂ ಜಾನಪದ ಗೀತೆಗಳ ಮೂಲಕ ಪ್ರೇಕ್ಷಕರ ಮನಗೆದ್ದವು.

# ಪಿಡಿಒ ಅಮಾನತು: ಹೋರಾಟಕ್ಕೆ ಸಂದ ಜಯ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಹುಮನಾಬಾದ್ ತಾಲೂಕಿನ ಸಿಂಧನಕೇರಾ ಗ್ರಾಮ ಪಂಚಾಯಿತಿಯ ಸಭಾ ನಡವಳಿ ಪುಸ್ತಕದಲ್ಲಿ ನಕಲಿ ಹೆಸರುಗಳು ಮತ್ತು ಹುದ್ದೆಗಳನ್ನು ಸೃಷ್ಟಿಸಿ, ದಾಖಲೆಗಳನ್ನು ತಿದ್ದುಪಡಿ ಹಾಗೂ ಫೋರ್ಜರಿ ಮಾಡಿ ಮೇಲಧಿಕಾರಿಗಳಿಗೆ ತಪ್ಪು ಮಾಹಿತಿ ಸಲ್ಲಿಸಲಾಗಿದೆ ಎಂದು ಆರೋಪಿಸಿ ಫೆಬ್ರವರಿ 27, 2026ರಂದು ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬಹುಜನ ಯುವ ಪ್ಯಾಂಥರ್ ವತಿಯಿಂದ ದೂರು ಸಲ್ಲಿಸಲಾಗಿತ್ತು.



ದೂರಿನ ಆಧಾರದ ಮೇಲೆ ಜಿಲ್ಲಾ ಪಂಚಾಯಿತಿಯ ಯೋಜನಾ ಮತ್ತು ಅಂದಾಜು ಮೌಲ್ಯಮಾಪನ ಅಧಿಕಾರಿಗಳು ಹಾಗೂ ಸಹಾಯಕ ಯೋಜನಾಧಿಕಾರಿಗಳು ಜಂಟಿ ಪರಿಶೀಲನೆ ನಡೆಸಿ ವರದಿ ಸಲ್ಲಿಸಿದ್ದರು. ವರದಿಯಲ್ಲಿ ಮೇಲಾಧಿಕಾರಿಗಳ ಅನುಮತಿ ಪಡೆಯದೆ ಸಿಬ್ಬಂದಿ ನೇಮಕಾತಿಗೆ ಪ್ರಯತ್ನಿಸಿರುವುದು, ಸಭಾ ನಡವಳಿಗಳನ್ನು ಅನಧಿಕೃತವಾಗಿ ಪಂಚತಂತ್ರ 2.0 ತಂತ್ರಾಂಶಕ್ಕೆ ಅಪ್‌ಲೋಡ್ ಮಾಡಿರುವುದು ಸೇರಿದಂತೆ ಹಲವು ಅಕ್ರಮಗಳು ಕಂಡುಬಂದಿವೆ ಎಂದು ಉಲ್ಲೇಖಿಸಲಾಗಿದೆ.

ಜಂಟಿ ಪರಿಶೀಲನಾ ವರದಿಯನ್ನು ಆಧರಿಸಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗ್ರಾಮ ಪಂಚಾಯಿತಿಯ ಪಿಡಿಒ ರಘುನಾಥ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಜೂನ್ 12, 2026ರಂದು ಆದೇಶ ಹೊರಡಿಸಿದ್ದಾರೆ.

ಈ ಕುರಿತು ಬಹುಜನ ಯುವ ಪ್ಯಾಂಥರ್ ಜಿಲ್ಲಾ ಸಮಿತಿಯ ಜಿಲ್ಲಾಧ್ಯಕ್ಷರಾದ ಪುಟ್ಟರಾಜ ಜನಾರ್ಧನ ದೀನೆ ಅವರು, "ಸಾರ್ವಜನಿಕ ಹಿತಾಸಕ್ತಿಗಾಗಿ ಸಲ್ಲಿಸಿದ ದೂರಿಗೆ ನ್ಯಾಯ ದೊರೆತಿದ್ದು, ಬಹುಜನ ಯುವ ಪ್ಯಾಂಥರ್ ಸಂಘಟನೆಯ ಹೋರಾಟಕ್ಕೆ ಜಯ ಸಿಕ್ಕಿದೆ. ಪ್ರಕರಣದ ಸಂಪೂರ್ಣ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು" ಎಂದು ಆಗ್ರಹಿಸಿದ್ದಾರೆ.

# KVAFSU ನೇಮಕಾತಿಗೆ ತಡೆ ಕೋರಿ ಮನವಿ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಕರ್ನಾಟಕ ಪಶುವೈದ್ಯಕೀಯ, ಪಶು ಮತ್ತು ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ (KVAFSU) ಬೀದರದಲ್ಲಿ 96 ಖಾಯಂ ಬೋಧನಾ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ತಕ್ಷಣ ರದ್ದುಪಡಿಸುವಂತೆ ಇಂಡಿಯನ್ ನ್ಯಾಷನಲ್ ಭೀಮ ಆರ್ಮಿಯ ಸಂಸ್ಥಾಪಕ ಅಧ್ಯಕ್ಷ ದೀಲಿಪ್ ವರ್ಮಾ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.



ಉಪಕುಲಪತಿಗಳ ಅಧಿಕಾರಾವಧಿ ಮುಕ್ತಾಯಕ್ಕೆ ಕೇವಲ 52 ದಿನಗಳು ಬಾಕಿ ಇರುವಾಗ ನೇಮಕಾತಿ ಪ್ರಕ್ರಿಯೆ ನಡೆಸುತ್ತಿರುವುದು ಸರ್ಕಾರದ ನಿಯಮಗಳು ಹಾಗೂ ಆಡಳಿತಾತ್ಮಕ ಶಿಷ್ಟಾಚಾರಗಳಿಗೆ ವಿರುದ್ಧವಾಗಿದೆ ಎಂದು ಅವರು ಆರೋಪಿಸಿದ್ದಾರೆ. ಅಧಿಕಾರಾವಧಿಯ ಕೊನೆಯ 60 ದಿನಗಳಲ್ಲಿ ಪ್ರಮುಖ ಆಡಳಿತಾತ್ಮಕ ನಿರ್ಧಾರಗಳನ್ನು ಕೈಗೊಳ್ಳಬಾರದು ಎಂಬ ಆದೇಶವಿದ್ದರೂ, ಅರ್ಜಿ ಪರಿಶೀಲನೆ, ಶಾರ್ಟ್‌ಲಿಸ್ಟಿಂಗ್ ಹಾಗೂ ಸಂದರ್ಶನ ಪ್ರಕ್ರಿಯೆ ನಡೆಸಲು ಮುಂದಾಗಿರುವುದು ನಿಯಮ ಉಲ್ಲಂಘನೆಯಾಗಿದೆ ಎಂದು ತಿಳಿಸಿದ್ದಾರೆ.

ಹೊಸ ಕಾಯಂ ಉಪಕುಲಪತಿಗಳು ಅಧಿಕಾರ ವಹಿಸಿಕೊಳ್ಳುವವರೆಗೆ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಿ, ಮುಂದಿನ ಎಲ್ಲಾ ಹಂತಗಳನ್ನು ರದ್ದುಪಡಿಸುವಂತೆ ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಿಗೆ ಸಲ್ಲಿಸಿದ ಮನವಿಯಲ್ಲಿ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ಶಿವಕುಮಾರ್ ಮಂಗಲಗಿಕರ್ (ಮನ್ನಾಏಖೇಳ್ಳಿ), ಜಮೀಲ್ ಪಟೇಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಸಮಾಜದ ತ್ಯಾಗ–ಹೋರಾಟದ ಫಲವೇ ದೇವಸ್ಥಾನ ನಿರ್ಮಾಣ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಬಿಜೆಪಿ ಮುಖಂಡರಾದ ಈಶ್ವರಸಿಂಗ್ ಠಾಕೂರ್ ಅವರು ಮಾತನಾಡಿ "ಸುಮಾರು 25 ರಿಂದ 30 ವರ್ಷಗಳ ಕಾಲ ಸಮಾಜದ ಹಿರಿಯರು ದೇವಸ್ಥಾನ ಹಾಗೂ ಕಲ್ಯಾಣ ಮಂಟಪ ನಿರ್ಮಾಣಕ್ಕಾಗಿ ನಿರಂತರ ಹೋರಾಟ ನಡೆಸಿದ್ದಾರೆ. ಅನೇಕ ಹಿರಿಯರ ತ್ಯಾಗ, ಪರಿಶ್ರಮ ಮತ್ತು ಕನಸಿನ ಫಲವಾಗಿ ಇಂದು ದೇವಸ್ಥಾನ ನಿರ್ಮಾಣಗೊಂಡಿದೆ. ಈ ಹೋರಾಟದಲ್ಲಿ ಭಾಗಿಯಾಗಿದ್ದ ಹಲವರು ಇಂದು ನಮ್ಮ ನಡುವೆ ಇಲ್ಲದಿದ್ದರೂ ಅವರ ಕನಸು ನನಸಾಗಿದೆ" ಎಂದು ಭಾವುಕರಾಗಿ ಸ್ಮರಿಸಿದರು.



ಅವರು ನಗರದ ಶಾಹಗಂಜದ ಹೆಳವಗಲ್ಲಿಯಲ್ಲಿರುವ ಶ್ರೀ ವಿವೇಕ ಗಣೇಶ ದೇವಸ್ಥಾನದ ನೂತನ ಕಟ್ಟಡದಲ್ಲಿ ಶ್ರೀ ಗಣೇಶ, ಈಶ್ವರ ಹಾಗೂ ನಾಗರಾಜ ದೇವರ ಮೂರ್ತಿಗಳ ಪ್ರಾಣ ಪ್ರತಿಷ್ಠಾಪನೆ ಮತ್ತು ಕಳಸಾರೋಹಣ ಮಹೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದ್ದರು.

"ಅಯೋಧ್ಯೆಯ ರಾಮಮಂದಿರ ಮಾದರಿಯಲ್ಲಿ ಸಮಾಜದ ಪ್ರತಿಯೊಬ್ಬರ ಸಹಭಾಗಿತ್ವದಿಂದ ಈ ದೇವಸ್ಥಾನ ನಿರ್ಮಿಸಲಾಗಿದೆ. ಇದು ಯಾರೊಬ್ಬರ ಸ್ವತ್ತಲ್ಲ, ಇಡೀ ಸಮಾಜದ ಆಸ್ತಿಯಾಗಿದೆ. ಪ್ರತಿಯೊಬ್ಬರ ಶ್ರಮ, ತ್ಯಾಗ ಮತ್ತು ಭಾವನೆಗಳು ಇದರ ನಿರ್ಮಾಣದಲ್ಲಿ ಅಡಕವಾಗಿವೆ. ಮುಂದಿನ ದಿನಗಳಲ್ಲಿ ದೇವಸ್ಥಾನವು ಧಾರ್ಮಿಕ, ಆಧ್ಯಾತ್ಮಿಕ, ಶೈಕ್ಷಣಿಕ ಹಾಗೂ ಸಾಮಾಜಿಕ ಚಟುವಟಿಕೆಗಳ ಕೇಂದ್ರವಾಗಿ ಬೆಳೆಯಬೇಕು. ಯುವಜನರಲ್ಲಿ ಉತ್ತಮ ಸಂಸ್ಕಾರ ಬೆಳೆಸುವ ಕಾರ್ಯ ಇಲ್ಲಿ ನಡೆಯಬೇಕು" ಎಂದು ಅವರು ಆಶಯ ವ್ಯಕ್ತಪಡಿಸಿದರು.

ಮಹೋತ್ಸವದ ಅಂಗವಾಗಿ ಬೆಳಿಗ್ಗೆ ವೇದಪಂಡಿತರ ನೇತೃತ್ವದಲ್ಲಿ ಸಕಲ ದೇವತಾ ಪೂಜೆ, ಹೋಮ, ರುದ್ರಾಭಿಷೇಕ, ನವಗ್ರಹ ಪೂಜೆ ಸೇರಿದಂತೆ ವಿವಿಧ ವೈದಿಕ ವಿಧಿವಿಧಾನಗಳು ನಡೆದವು. ಬಳಿಕ ಮಹಾಪೂರ್ಣಾಹುತಿ ನೆರವೇರಿಸಿ, ವೈದಿಕ ಮಂತ್ರೋಚ್ಚಾರಗಳ ಮಧ್ಯೆ ಶ್ರೀ ಗಣೇಶ, ಈಶ್ವರ ಹಾಗೂ ನಾಗರಾಜ ದೇವರ ಮೂರ್ತಿಗಳಿಗೆ ಪ್ರಾಣ ಪ್ರತಿಷ್ಠಾಪನೆ ಮಾಡಲಾಯಿತು.

ಬೆಳಿಗ್ಗೆ ದೇವಸ್ಥಾನದ ಶಿಖರದ ಮೇಲೆ ಕಳಸಾರೋಹಣ ಕಾರ್ಯಕ್ರಮ ವೈಭವದಿಂದ ಜರುಗಿತು. ಕಳಸಾರೋಹಣದ ವೇಳೆ ಭಕ್ತರು ಹೂವಿನ ಮಳೆಗರೆದು ಜಯಘೋಷಗಳೊಂದಿಗೆ ಸಂಭ್ರಮಿಸಿದರು. ಮೂರು ದಿನಗಳಿಂದ ನಡೆದ ಮಹೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡು ದೇವರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಚಾಂಬೋಳ ಮಠದ ಪರಮಪೂಜ್ಯ ಶ್ರೀ ರುದ್ರಮಣಿ ಶಿವಾಚಾರ್ಯಮಣಿ, ಲಾಡಗೇರಿ ಮಠದ ಶ್ರೀ ಗಂಗಾದಶಿವಾಚಾರ್ಯರು ಆಶೀರ್ವಚನ ನೀಡಿದರು. ಕಾರ್ಯಕ್ರಮದಲ್ಲಿ ಬಾಬೂರಾವ್ ಮಲ್ಕಾಪೂರೆ, ಮುರಲೀಧರ ಏಕಲಾರಕರ್, ಸಮಾಜದ ಮುಖ್ಯಸ್ಥರಾದ ಬಾಬು, ಯುವ ನಾಯಕರಾದ ರಮೇಶ್ ಅಂದಕೂಳ, ಸಂಜು, ಅಶೋಕ್, ಮೇಘರಾಜ, ರಾಮಕೃಷ್ಣ, ಸೇರಿದಂತೆ ಅನೇಕ ಭಕ್ತರು ಹಾಗೂ ಸಮಾಜದ ಮುಖಂಡರು ಉಪಸ್ಥಿತರಿದ್ದರು.

ಮೂರು ದಿನಗಳ ಕಾಲ ನಡೆದ ಧಾರ್ಮಿಕ ಕಾರ್ಯಕ್ರಮಗಳು ರೋಕಡೆ ಹನುಮಾನ್ ಮಂದಿರದ ಪೂಜಾರಿಗಳಾದ ಕೇಶವ ಮಹಾರಾಜ್ ಹಾಗೂ ಕೃಷ್ಣ ಜೋಶಿ ಅವರ ನೇತೃತ್ವದಲ್ಲಿ ವಿವಿಧ ಪೂಜೆ, ಹೋಮ–ಹವನ, ಧಾರ್ಮಿಕ ಪ್ರವಚನ ಮತ್ತು ಪ್ರಸಾದ ವಿತರಣೆಯ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

# ಪರಿಸರ ರಕ್ಷಣೆಗೆ ಜಲಚರಗಳ ಕೊಡುಗೆ ಅಪಾರ



**ಬಾಗಲಕೋಟೆ:** ಮೊಸಳೆ ಸೇರಿದಂತೆ ಅನೇಕ ಜಲಚರ ಗಳಿಂದ ನಮ್ಮ ಪರಿಸರ ರಕ್ಷಣೆಯಾಗುತ್ತದೆ ಎಂದು ರಾಜ್ಯ ಪರಿಸರ ಪ್ರಶಸ್ತಿ ಪುರಸ್ಕೃತ ಡಾಕ್ಟರ್ ಎಂ ಆರ್ ದೇಸಾಯಿ ಹೇಳಿದರು.

ಅವರು ಬುಧವಾರ ನಗರದ ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಅರಣ್ಯ ಇಲಾಖೆ ಹಾಗೂ ಪ್ರಾದೇಶಿಕ ಅರಣ್ಯ ವಿಭಾಗದಿಂದ ಆಯೋಜಿಸಲಾದ ವಿಶ್ವಮೊಸಳೆ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಈ ಭೂಮಿಯ ಮೇಲೆ ಮಾನವನಿಗಿಂತ ಸಾವಿರಾರು ವರ್ಷಗಳ ಹಿಂದೆ ಮೊಸಳೆಗಳು ಇದ್ದು, ಅವು ನೀರಿನ ಕಲ್ಮಶ ನಾಶ ಮಾಡಿ ಶುದ್ಧ ನೀರು ಕೊಡುವುದಲ್ಲದೆ ಅವುಗಳು ಹೊರ ಹಾಕಿದ ಕಲ್ಬಶದಿಂದ ಮೀನುಗಳು ಬದುಕುತ್ತಿದ್ದು, ಮೊಸಳೆಗಳು ಹೆಚ್ಚಾಗಿ ಸಿಹಿ ನೀರಿನಲ್ಲಿ ವಾಶವಾಸವಾಗಿರುತ್ತವೆ. ಮಾನವ ಹಾಗೂ ಪ್ರಾಣಿಗಳ ಸಂಘರ್ಷ ನಿಲ್ಲಬೇಕು ಅಂದಾಗ ಮೊಸಳೆಗಳು ಮುಂದಿನ ಪೀಳಿಗೆಗೆ ನೋಡಲು ಸಿಗುತ್ತವೆ ಇಲ್ಲವಾದಲ್ಲಿ ಬರೀ ಚಿತ್ರದಲ್ಲಿ ಅವುಗಳನ್ನು ನೋಡುವ ಕಾಲ ಬಂದರೂ ಬರಬಹುದು ಎಂದರು.

ಡಿ.ಎಫ್ .ಓ . ಕೆ ಎಸ್ ಗೊರವರ್ ಮಾತನಾಡಿ ಇಂದು ಮೊಸಳೆಗಳ ರಕ್ಷಣೆ ಅವಶ್ಯವಾಗಿದ್ದು ನದಿ ಕೆರೆ ನೀರು ಬತ್ತಿದಾಗ ಹೊರಬರುವ ಮೊಸಳೆ ಗಳನ್ನು ಕಳ್ಳರು ಭೇಟಿಯಾಗುತ್ತಿದ್ದಾರೆ. ಕಾರಣ ಮೊಸಳೆಯ ಚರ್ಮಕ್ಕೆ ಹೆಚ್ಚಿನ ಬೇಡಿಕೆ ಇರುವುದರಿಂದ ಇಂತಹ ದುಷ್ಕೃತ್ಯಗಳು ನಡೆಯುತ್ತಿದ್ದು ಅವುಗಳನ್ನು ತಡೆಯುವ ಕಾರ್ಯವಾಗಬೇಕು ಎಂದರು.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ರೂಪ ವಿ. ಕೆ ಮಾತನಾಡಿ, ಪರಿಸರ ರಕ್ಷಣೆ .ಕಾಡು ಪ್ರಾಣಿಗಳ ರಕ್ಷಣೆ ನಮ್ಮೆಲ್ಲರ ಕರ್ತವ್ಯವಾಗಿದ್ದು ಶಾಲಾ ಮಕ್ಕಳು ಪ್ರತಿಯೊಬ್ಬರು ಒಂದು ಮರವನ್ನು ನೆಟ್ಟು ಶಾಲೆಗೆ ಬರುವಾಗ ಒಂದು ಚೆಂಬು ನೀರು ಹಾಕಿದರೆ ಸಾಕು ತನ್ನಿಂದ ತಾನೇ ಮರ ಬೆಳೆದು ಪರಿಸರಕ್ಕೆ ಸಹಕಾರಿಯಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಪರಿಸರ ಕುರಿತಾದ ಪ್ರಬಂಧ ಹಾಗೂ ಚಿತ್ರಕಲೆಯಲ್ಲಿ ಭಾಗವಹಿಸಿದ ಮಕ್ಕಳಿಗೆ ಪ್ರಶಸ್ತಿ ನೀಡಲಾಯಿತು ಮತ್ತು ಮೊಸಳೆ ರಕ್ಷಕರಿಗೆ ಹಾಗೂ ಹಾವು. ರಕ್ಷಕರಿಗೂ ಕೂಡ ಸತ್ಕಾರ ಮಾಡಲಾಯಿತು. ವಲಯ ಅರಣ್ಯ ಸಂರಕ್ಷಣಾಧಿಕಾರಿ ಮಹಾಂತೇಶ್ ಸಜ್ಜನ್ ಸ್ವಾಗತಿಸಿದರು ಹುನಗುಂದ ಆರ್.ಎಫ್..ಒ.. ಜಯವರ್ಧನ್ ತಳವಾರ್ ವಂದಿಸಿದರು.

# ಬುದ್ಧ–ಅಂಬೇಡ್ಕರ್ ಜಯಂತಿ: ವಿಚಾರ ಸಂಕಿರಣ, ಸಾಧಕರಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜ್ಞಾನಜ್ಯೋತಿ ಸಾವಿತ್ರಿಬಾಯಿ ಫುಲೆ ಅವರು ಮಹಿಳಾ ಶಿಕ್ಷಣಕ್ಕಾಗಿ ಹೋರಾಟ ನಡೆಸದೇ ಇದ್ದಿದ್ದರೆ ಭಾರತದ ಮಹಿಳೆಯರು ಇಂದಿಗೂ ಸ್ವತಂತ್ರ ಜೀವನ ನಡೆಸಲು ಸಾಧ್ಯವಾಗುತ್ತಿರಲಿಲ್ಲ ಎಂದು ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷೆ ಶ್ರೀಮತಿ ಗೀತಾ ಪಂಡಿತ ಚಿದ್ರಿ ಹೇಳಿದರು.



ನಗರದ ಚನ್ನಬಸವ ಪಟ್ಟದ್ದೇವರು ರಂಗಮಂದಿರದಲ್ಲಿ ಬುದ್ಧ, ಭೀಮ ಸಾಂಸ್ಕೃತಿಕ ಸಂಘ ಬೀದರ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಇವರ ಸಂಯುಕ್ತಾಶ್ರಯದಲ್ಲಿ ಜೂನ್ 15ರಂದು ಆಯೋಜಿಸಿದ್ದ ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಅಂಗವಾಗಿ ಸಾಂಸ್ಕೃತಿಕ ಉತ್ಸವ ಮತ್ತು "ಜ್ಞಾನಜ್ಯೋತಿ ಸಾವಿತ್ರಿಬಾಯಿ ಫುಲೆ" ಕುರಿತ ವಿಚಾರ ಸಂಕಿರಣವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತದಲ್ಲಿ ಜಾತಿ ವ್ಯವಸ್ಥೆ ಮತ್ತು ಅಸಮಾನತೆಯ ಕಾರಣದಿಂದ ಶಿಕ್ಷಣ ಕೆಲವೇ ವರ್ಗಗಳಿಗೆ ಸೀಮಿತವಾಗಿತ್ತು. ಮಹಿಳೆಯರಿಗೆ ಶಿಕ್ಷಣ ಪಡೆಯುವ ಅವಕಾಶವೇ ಇರಲಿಲ್ಲ. ಬಾಲ್ಯ ವಿವಾಹದ ಮೂಲಕ ಮಹಿಳೆಯರ ಬದುಕು ಕುಟುಂಬ ನಿರ್ವಹಣೆಗೆ ಮಾತ್ರ ಸೀಮಿತವಾಗುತ್ತಿತ್ತು. ಇಂತಹ ಪರಿಸ್ಥಿತಿಯಲ್ಲಿ ಸಾವಿತ್ರಿಬಾಯಿ ಫುಲೆ ಅವರು ಶಿಕ್ಷಣ ಪಡೆದು ಮಹಿಳೆಯರನ್ನು ನಾಲ್ಕು ಗೋಡೆಗಳ ಮಧ್ಯದಿಂದ ಹೊರತಂದು ಸಮಾಜದ ಮುಖ್ಯವಾಹಿನಿಗೆ ತಂದರು ಎಂದು ಹೇಳಿದರು.

ಮಹಿಳಾ ಶಿಕ್ಷಣಕ್ಕಾಗಿ ಶಾಲೆ ಆರಂಭಿಸಿದಾಗ ಸಂಪ್ರದಾಯವಾದಿಗಳ ತೀವ್ರ ವಿರೋಧ ಎದುರಿಸಿದ ಸಾವಿತ್ರಿಬಾಯಿ ಫುಲೆ ಅವರ ಮೇಲೆ ಸಗಣಿ ಎಸೆಯುವುದು, ನಿಂದಿಸುವುದು ಸೇರಿದಂತೆ ಹಲವು ರೀತಿಯ ಅವಮಾನಗಳು ನಡೆದರೂ ಅವರು ಹಿಂಜರಿಯದೆ ಶಿಕ್ಷಣದ ಜ್ಯೋತಿಯನ್ನು ಬೆಳಗಿಸಿದರು ಎಂದು ಗೀತಾ ಚಿದ್ರಿ ವಿವರಿಸಿದರು.

ಸಾವಿತ್ರಿಬಾಯಿ ಫುಲೆ ಹಾಗೂ ಜ್ಯೋತಿಬಾ ಫುಲೆ ಅವರ ಶಿಕ್ಷಣ ಕ್ರಾಂತಿಯಿಂದಲೇ ಡಾ. ಬಿ.ಆರ್. ಅಂಬೇಡ್ಕರ್ ಅವರು ಶಿಕ್ಷಣ ಪಡೆಯಲು ಸಾಧ್ಯವಾಯಿತು. ನಂತರ ಅಂಬೇಡ್ಕರ್ ಅವರು ಭಾರತದ ಸಂವಿಧಾನ ರಚಿಸಿ ಮಹಿಳೆಯರಿಗೆ ಸಮಾನ ಹಕ್ಕುಗಳು ಮತ್ತು ಅವಕಾಶಗಳನ್ನು ಕಲ್ಪಿಸಿದರು. ಆದ್ದರಿಂದ ದೇಶದ ಮಹಿಳೆಯರು ಸಾವಿತ್ರಿಬಾಯಿ ಫುಲೆ ಹಾಗೂ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಸದಾ ಋಣಿಯಾಗಿರಬೇಕು ಎಂದು ಅವರು ಹೇಳಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಬಸವಭೂಷಣ ಪ್ರಶಸ್ತಿ ಪುರಸ್ಕೃತ, ಬಸವ ಯೋಗಾಶ್ರಮ ಕೌಠಾ (ಬಿ)ಯ ಪೂಜ್ಯ ಡಾ. ಸಿದ್ದರಾಮ ಬೆಲ್ದಾಳ ಶರಣರು ಮಾತನಾಡಿ, ಮಹಿಳಾ ಶಿಕ್ಷಣಕ್ಕಾಗಿ ಸಾವಿತ್ರಿಬಾಯಿ ಫುಲೆ ಅನುಭವಿಸಿದ ಕಷ್ಟಗಳನ್ನು ಸ್ಮರಿಸಿದರು. ಇದೇ ವೇಳೆ ಸಂವಿಧಾನದ ಆಶಯಗಳು ಹಂತಹಂತವಾಗಿ ದುರ್ಬಲಗೊಳ್ಳುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಶಿಕ್ಷಣದ ಖಾಸಗೀಕರಣದಿಂದ ಬಡವರು, ದಲಿತರು ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ದುಸ್ತರವಾಗುತ್ತಿದೆ. ಶಿಕ್ಷಣ ಮತ್ತು ಮತದಾನದ ಹಕ್ಕುಗಳನ್ನು ಸಂರಕ್ಷಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ದಲಿತ ಸಂಘರ್ಷ ಸಮಿತಿ ರಾಜ್ಯ ಸಂಘಟನಾ ಸಂಚಾಲಕ ರಮೇಶ ಡಾಕುಳಗಿ ಹಾಗೂ ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ ವಿಚಾರ ಸಂಕಿರಣದಲ್ಲಿ ಮಾತನಾಡಿ ಸಾಮಾಜಿಕ ನ್ಯಾಯ, ಶಿಕ್ಷಣ ಮತ್ತು ಸಂವಿಧಾನದ ಮಹತ್ವ ಕುರಿತು ಅಭಿಪ್ರಾಯ ಹಂಚಿಕೊಂಡರು.

ಕಾರ್ಯಕ್ರಮದಲ್ಲಿ ನಿವೃತ್ತ ಪ್ರಾಂಶುಪಾಲ ತುಕಾರಾಮ ಹದನೂರೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ತಾಲೂಕು ವಿಸ್ತೀರ್ಣಾಧಿಕಾರಿ ಉಮೇಶ ಕರಡ್ಯಾಳ, ನಿವೃತ್ತ ಆರ್‌ಟಿಒ ಶಂಕರ ಭಯ್ಯಾ ಚಿಟಗುಪ್ಪಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿ ಕ್ಲಿಂಟನ್, ರಾಹುಲ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಧನರಾಜ ಎಸ್. ಬೆಳಕುಣಿಕರ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಸಾನಿಧ್ಯವನ್ನು ಅಮ್ರಪಾಲಿ ಬುದ್ಧವಿಹಾರ, ಕಲಬುರ್ಗಿಯ ಪೂಜ್ಯ ಭಂತೆ ಧಮ್ಮಜ್ಯೋತಿ ವಹಿಸಿದ್ದರು. ಶೇಷರಾವ ಬೆಳಕುಣಿಕರ್ ಅಧ್ಯಕ್ಷತೆ ವಹಿಸಿದ್ದರು. ಎಸ್.ಬಿ. ಕುಚಬಾಳ ಕಾರ್ಯಕ್ರಮ ನಿರ್ವಹಿಸಿದರು. ಇದೇ ಸಂದರ್ಭದಲ್ಲಿ ಬಸವಭೂಷಣ ಪ್ರಶಸ್ತಿ ಪುರಸ್ಕೃತ ಪೂಜ್ಯ ಡಾ. ಸಿದ್ದರಾಮ ಬೆಲ್ದಾಳ ಶರಣರು, ವಿಜಯಕುಮಾರ ಸೋನಾರೆ ಹಾಗೂ ಪ್ರೇಮಸಾಗರ ದಾಂಡೇಕರ್ ಅವರನ್ನು ವಿಶೇಷವಾಗಿ ಸನ್ಮಾನಿಸಲಾಯಿತು.

ವೇದಿಕೆ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಉತ್ಸವದಲ್ಲಿ 15ಕ್ಕೂ ಹೆಚ್ಚು ಕಲಾ ತಂಡಗಳು ಭಾಗವಹಿಸಿ, ಬುದ್ಧ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ವಿಚಾರಧಾರೆಗಳನ್ನು ಸಾರುವ ಭಜನೆಗಳು, ತತ್ವಪದಗಳು ಮತ್ತು ಕ್ರಾಂತಿ ಗೀತೆಗಳನ್ನು ಹಾಡಿ ಪ್ರೇಕ್ಷಕರ ಮನಸೂರೆಗೊಂಡವು. ಕಾರ್ಯಕ್ರಮದಲ್ಲಿ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸಿದ್ದ ನೂರಾರು ಜನರು ಪಾಲ್ಗೊಂಡಿದ್ದರು.

# ಶರಣಬಸವ ವಿವಿಯ ಬಿಬಿಎ ವಿಭಾಗದ 28 ವಿದ್ಯಾರ್ಥಿನಿಯರಿಗೆ ಆಕರ್ಷಕ ವೇತನದೊಂದಿಗೆ ಉದ್ಯೋಗಾವಕಾಶ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.17:ಶರಣಬಸವ ವಿಶ್ವವಿದ್ಯಾಲಯದ ವಿಶೇಷವಾಗಿ ಮಹಿಳೆಯರಿಗಾಗಿ ನಡೆಸಲಾಗುತ್ತಿರುವ ಬ್ಯಾಚುಲರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ (ಬಿಬಿಎ) ವಿಭಾಗದ ದಾಖಲೆಯ 28 ವಿದ್ಯಾರ್ಥಿನಿಯರು ವಿವಿಧ ಸಾಫ್ಟ್‌ವೇರ್ ಕಂಪನಿಗಳು ಹಾಗೂ ವಿವಿಧ ಕ್ಷೇತ್ರಗಳ ಪ್ರತಿಷ್ಠಿತ ಸಂಸ್ಥೆಗಳಲ್ಲಿ ಆಕರ್ಷಕ ವೇತನದೊಂದಿಗೆ ಉದ್ಯೋಗ ಪಡೆದಿದ್ದಾರೆ.

ವಿದ್ಯಾರ್ಥಿನಿಯರಾದ ಶಿವಾನಿ ಪಾಟೀಲ, ಸುಷ್ಮಾ ಹಾಗೂ ಫರಿಯಾ ಅಂಜುಮ್ ಅವರು ಜಾಗತಿಕ ಮಟ್ಟದ ಆನ್‌ಲೈನ್ ವೃತ್ತಿಪರ ತರಬೇತಿ ಸಂಸ್ಥೆಯಾದ ಇಂಟೆಲಿಪಾಟ್ ಸಾಫ್ಟ್‌ವೇರ್ ಸೊಲ್ಯೂಷನ್ಸ್‌ನಲ್ಲಿ ವಾರ್ಷಿಕ 8 ಲಕ್ಷ ರೂ. ವೇತನದೊಂದಿಗೆ ಉದ್ಯೋಗ ಪಡೆದಿದ್ದಾರೆ.

ಇನ್ನೂ ಐವರು ವಿದ್ಯಾರ್ಥಿನಿಯರು ವಿವಿಧ ಕಂಪನಿಗಳು ಹಾಗೂ ಶಿಕ್ಷಣ ಸಂಸ್ಥೆಗಳಲ್ಲಿ ತಲಾ ವಾರ್ಷಿಕ 3 ಲಕ್ಷ ರೂ. ವೇತನದೊಂದಿಗೆ ನೇಮಕಗೊಂಡಿದ್ದಾರೆ. ಆರು ವಿದ್ಯಾರ್ಥಿನಿಯರು ತಲಾ ವಾರ್ಷಿಕ 2.5 ಲಕ್ಷ ರೂ. ವೇತನದೊಂದಿಗೆ ವಿವಿಧ ಕಂಪನಿಗಳಲ್ಲಿ ಉದ್ಯೋಗ ಪಡೆದಿದ್ದು, ಹತ್ತು ವಿದ್ಯಾರ್ಥಿನಿಯರು ತಲಾ ವಾರ್ಷಿಕ 2 ಲಕ್ಷ ರೂ. ವೇತನದೊಂದಿಗೆ ವಿವಿಧ ಸಂಸ್ಥೆಗಳಲ್ಲಿ ನೇಮಕಗೊಂಡಿದ್ದಾರೆ.

ಉದ್ಯೋಗ ಪಡೆದ ವಿವಿಯ ಬಿಬಿಎ ವಿದ್ಯಾರ್ಥಿನಿಯರ ವಿವರ ಈ ಕೆಳಗಿನಂತಿದ್ದು, ಶಿವಾನಿ ಪಾಟೀಲ, ಸುಷ್ಮಾ ಹಾಗೂ ಫರಿಯಾ ಅಂಜುಮ್ (ಇಂಟೆಲಿಪಾಟ್ ಸಾಫ್ಟ್‌ವೇರ್ ಸೊಲ್ಯೂಷನ್ಸ್, ವಾರ್ಷಿಕ 8 ಲಕ್ಷ ರೂ.), ಶೀತಲ್ ಹಾಗೂ ಲಿಪ್ಸಿತಾ ದಾಸ್ (ಬೆಲ್‌ಫಾಸ್ಟ್ ಮ್ಯಾನೇಜ್‌ಮೆಂಟ್ ಲಿಮಿಟೆಡ್, ವಾರ್ಷಿಕ 3 ಲಕ್ಷ ರೂ.), ಶಾಂಭವಿ, ನಾಗರತ್ನ ಮತ್ತು ಸೋನಿಕಾ (ಮ್ಯಾಗ್ನಸ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ, ವಾರ್ಷಿಕ 3 ಲಕ್ಷ ರೂ.), ಸೃಷ್ಟಿ ಎಂ. ಪೊದ್ದಾರ್,



ಅಂಕಿತಾ ಹಾಗೂ ಲಕ್ಷ್ಮೀ ನಾಯಕ್ ಬುಪುರ (ಸ್ಕಿಲ್ ಆರ್ಬಿಟ್ ಪ್ರೈವೇಟ್ ಲಿಮಿಟೆಡ್, ವಾರ್ಷಿಕ 2.5 ಲಕ್ಷ ರೂ.), ಸಾಕ್ಷತಾ (ವಿಜೇಶಾ ಐಟಿ ಸರ್ವಿಸಸ್ ಎಲ್‌ಎಲ್‌ಪಿ, ವಾರ್ಷಿಕ 2.5 ಲಕ್ಷ ರೂ.), ಅರ್ಪಿತಾ ಸಿ. ಹಾಗೂ ಶ್ರೇಯಾ ವೈ. (ಮಥಿಸಿ ಎಡ್–ಟೆಕ್, ವಾರ್ಷಿಕ 2.5 ಲಕ್ಷ ರೂ.), ಸೌಜನ್ಯ ಗುತ್ತೇದಾರ ಮತ್ತು ಪ್ರಿಯಾಂಕಾ (ಕ್ವಾಂಟಮ್ ಪೋಡ ಟೆಕ್ನಾಲಜೀಸ್, ವಾರ್ಷಿಕ 2 ಲಕ್ಷ ರೂ.), ಪ್ರಭಾ, ಭಾಗ್ಯಶ್ರೀ ರಾಮಲಿಂಗ, ಸ್ನೇಹಾ ಚವಾಣ್ ಹಾಗೂ ಸಂಜನಾ (ಒರಲ್ಯಾನ್ ಗ್ರೂಪ್, ವಾರ್ಷಿಕ 2 ಲಕ್ಷ ರೂ.), ನಂದಿನಿ ಶ್ರೀಮನ್ ಹಾಗೂ ತೇಜಸ್ವಿನಿ ಎಂ. (ರಾಜ್ ಟೂಲ್ಸ್ ಅಂಡ್ ಸ್ಟ್ಯಾಂಪ್ಲಿಂಗ್, ಪುಣೆ, ವಾರ್ಷಿಕ 2 ಲಕ್ಷ ರೂ.), ಗೌರಿ ಎಂ.ಎಚ್. (ಮಹೀಂದ್ರ ರೈಜ ಶಹಾ ಮೋಟಾರ್ಸ್, ವಾರ್ಷಿಕ 2 ಲಕ್ಷ ರೂ.), ಭಾಗ್ಯಶ್ರೀ ನಿಗೂಡಿ (ಅರ್ವಾಡೆ ಇನ್‌ಫ್ರಾಸ್ಟ್ರಕ್ಚರ್, ಪುಣೆ, ವಾರ್ಷಿಕ 2 ಲಕ್ಷ ರೂ.), ಭುವನೇಶ್ವರಿ ಎಚ್. (ಗೌರನಿತಾಲ್ ಟೆಕ್ನಾಲಜೀಸ್, ವಾರ್ಷಿಕ 1.5 ಲಕ್ಷ ರೂ.), ಪ್ರಗತಿ (ದ್ವಾರಕಾ ಸ್ಕೈಲೈನ್ ಎಲ್‌ಎಲ್‌ಪಿ, ಹೈದರಾಬಾದ್, ವಾರ್ಷಿಕ 1.5 ಲಕ್ಷ ರೂ.), ಭವಾನಿ (ಸೆಕಪಾಡ್ ಟೆಕ್ನಾಲಜೀಸ್, ವಾರ್ಷಿಕ 1 ಲಕ್ಷ ರೂ.) ಹಾಗೂ ಪಿ. ಪಲ್ಲವಿ (ರಾಯರ್ ಇಂಟರ್‌ನ್ಯಾಷನಲ್ ಪ್ರೈವೇಟ್ ಲಿಮಿಟೆಡ್, ವಾರ್ಷಿಕ 1 ಲಕ್ಷ ರೂ.) ಈ ಎಲ್ಲರೂ ಉದ್ಯೋಗ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

ಈ ಮಹತ್ತರ ಸಾಧನೆಗಾಗಿ ವಿದ್ಯಾರ್ಥಿನಿಯರು, ಬೋಧಕ ಸಿಬ್ಬಂದಿಯವರನ್ನು ಹಾಗೂ ಬಿಬಿಎ ವಿಭಾಗದ ಚೇರಪರ್ಸನ್ ಪ್ರೊ. ಶಿಲ್ಪಾ ಕಂದಗೂಳ ಅವರನ್ನು ಸನ್ಮಾನಿಸಿದ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳು ಹಾಗೂ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮಾತೋಶ್ರೀ ಡಾ. ದಾಕ್ಷಾಯಿಣಿ ಅವ್ವಾಜಿಯವರು ವಿದ್ಯಾರ್ಥಿನಿಯರು ಮತ್ತು ಎಲ್ಲಾ ಶಿಕ್ಷಕರನ್ನು ಅಭಿನಂದಿಸಿ, ಇದು ಅತ್ಯಂತ ಶ್ಲಾಘನೀಯ ಹಾಗೂ ಮಾದರಿ ಸಾಧನೆಯಾಗಿದೆ ಎಂದು ಪ್ರಶಂಸಿಸಿದರು.ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ, ಉಪಕುಲಪತಿ ಪ್ರೊ. ಅನಿಲಕುಮಾರ ಬಿಡವೆ,

ಕುಲಸಚಿವರಾದ ಡಾ. ಲಕ್ಷ್ಮೀ ಪಾಟೀಲ ಮಕಾ, ಕುಲಸಚಿವ (ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ ಹಾಗೂ ಹಣಕಾಸು ಅಧಿಕಾರಿ ಡಾ. ಕಿರಣ್ ಮಕಾ ಸೇರಿದಂತೆ ಅನೇಕ ಗಣ್ಯರು ಬಿಬಿಎ ವಿಭಾಗದ ವಿದ್ಯಾರ್ಥಿನಿಯರು ಮತ್ತು ಸಿಬ್ಬಂದಿಯನ್ನು ಅಭಿನಂದಿಸಿದರು.

# ವೈಭವದ ಮಲ್ಲಣ್ಣನ ಪಲ್ಲಕ್ಕಿ ಉತ್ಸವ





• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ತಾಲ್ಲೂಕಿನ ಖಾನಾಪುರದ ಮೈಲಾರ ಮಲ್ಲಣ್ಣ ದೇವಸ್ಥಾನದಲ್ಲಿ ಸೋಮವತಿ ಅಮಾವಾಸ್ಯೆ ಅಂಗವಾಗಿ ಸೋಮವಾರ ರಾತ್ರಿ ಭವ್ಯ ಪಲ್ಲಕ್ಕಿ ಉತ್ಸವ ನಡೆಯಿತು.ಮಲ್ಲಣ್ಣನ ದರ್ಶನಕ್ಕಾಗಿ ಸಾವಿರಾರು ಭಕ್ತರು ದೇವಸ್ಥಾನಕ್ಕೆ ಆಗಮಿಸಿ ವಿಶೇಷ ಪೂಜೆ ಹಾಗೂ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಿದರು.ಅಲಂಕೃತ ಪಲ್ಲಕ್ಕಿಯಲ್ಲಿ ಮಲ್ಲಣ್ಣನ ಉತ್ಸವ ಮೂರ್ತಿಯನ್ನು ದೇವಸ್ಥಾನದ ಆವರಣದಲ್ಲಿ ಮೆರವಣಿಗೆ ನಡೆಸಲಾಯಿತು.

ಪಲ್ಲಕ್ಕಿ ಉತ್ಸವದ ವೇಳೆ ಭಕ್ತರು ಜಯಘೋಷಗಳನ್ನು ಕೂಗಿ ತಮ್ಮ ಭಕ್ತಿಭಾವವನ್ನು ಪ್ರದರ್ಶಿಸಿದರು.

# ವೇದವಟ್ಟಿಯ ಶ್ರೀಗಳು ನಾಡು ಕಂಡ ನಡೆದಾಡುವ ದೇವರು

• ಮಲ್ಲಮ್ಮ ನುಡಿ ವಾರ್ತೆ ಕುಕನೂರು



ತಾಲೂಕಿನ ಸುಕ್ಷೇತ್ರ ಬೆದವಟ್ಟಿ ಗ್ರಾಮದಲ್ಲಿ ಸಂಸ್ಥಾನ ಹಿರೇಮಠದ ಪಟ್ಟಾಧೀಶರಾಗಿದ್ದ ಲಿಂಗೈಕ್ಯ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಪ್ರಥಮ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮದಲ್ಲಿ 108 ಶ್ರೀ ವೀರ ಸಂಗಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಕುಷ್ಟಗಿ ಪೂಜ್ಯರು ಮಾತನಾಡುತ್ತಾ ಶ್ರೀ ಶಿವ ಸಂಗಮೇಶ್ವರ ಶಿವಾಚಾರ್ಯರು ನಾಡು ಕಂಡಂತಹ ನಡೆದಾಡುವ ದೇವರಾಗಿದ್ದರು ಅಂತವರ ಸ್ಮರಣೆಗಾಗಿ ಐದು ದಿನಗಳ ಕಾಲ ಶ್ರೀಮಠದಲ್ಲಿ ಧಾರ್ಮಿಕ ಕಾರ್ಯಕ್ರಮ ಯಶಸ್ವಿಯಾಗಿ ಜರುಗಿದ್ದು ಶ್ರೀಗಳು ಗುರು ಅನ್ನುವುದಕ್ಕಿಂತ ಧರ್ಮಗುರು ಎನಿಸಿಕೊಂಡು ಲಿಂಗ ಪೂಜೆ ಮಾಡುತ್ತ ಲಿಂಗ ಸ್ವರೂಪಿಗಳಾಗಿದ್ದರು ಅಂತವರ ಮಾರ್ಗದರ್ಶನ ಮತ್ತು ಜೀವನವನ್ನು ಪ್ರತಿಯೊಬ್ಬರು ಅಳವಡಿಸಿಕೊಂಡು ಸಾಗಬೇಕು ಎಂದು ಹೇಳಿದರು. ಕುಕನೂರಿನ ಅನ್ನದಾನಿಶ್ವರ ಶಾಖ ಮಠದ ಪೂಜ್ಯರಾದ ಶ್ರೀ ಮಹಾದೇವ ಮಹಾಸ್ವಾಮಿಗಳು ಮಾತನಾಡುತ್ತ ಗುರುವಿನ ಸ್ಮರಣೆ ಎಂದೆಂದಿಗೂ ಅವಿಸ್ಮರಣೀಯವಾಗಿದ್ದು, ಪೂಜ್ಯರು ಭಕ್ತರನ್ನು ಬಿಟ್ಟು ಬೇರೆ ಪ್ರಪಂಚವನ್ನೇ ಹೊಂದಿರಲಿಲ್ಲ. ಜೀವನದುದ್ದಕ್ಕೂ ಏನನ್ನು ಬೇಡದೆ ಜೀವನಪೂರ್ತಿ ನೀಡುವ ಕೈಗಳನ್ನು ಹೊಂದಿದ ಮಹಾನ್ ಗುರುಗಳಾಗಿದ್ದರು. ಅವರನ್ನು ಕಾಡುವವರನ್ನು ಸಹ ಕಾಪಾಡುವ ಮನೋಭಾವ ಅವರದ್ದಾಗಿದ್ದು ವೇದವಟಿಯ ಶ್ರೀಗಳು ಭಕ್ತರ ಹೃದಯದಲ್ಲಿ ಶಾಶ್ವತವಾಗಿ ನೆಲೆಸಿದ್ದಾರೆ. ದೈಹಿಕವಾಗಿ ನಮ್ಮಿಂದ ದೂರವಾಗಿದ್ದರೂ ಸಹ ಮಾನಸಿಕವಾಗಿ ನಮ್ಮೊಂದಿಗೆ ಸದಾ ಮಾರ್ಗದರ್ಶನ ನೀಡುತ್ತಾ ನಮ್ಮನ್ನು ಕೈ ಹಿಡಿದು ನಡೆಸುತ್ತಿದ್ದಾರೆ ಎಂದು ತಿಳಿಸಿದರು.

ಪ್ರಮುಖರಾದ ಯಂಕಣ್ಣ ಯರಾಶಿ ಮಾತನಾಡಿ ಶ್ರೀಗಳು ಕಷ್ಟ ಎಂದು ಬಂದ ಭಕ್ತರಿಗೆ ಧೈರ್ಯ ಹೇಳುತ್ತ ಭಕ್ತರ ಹೇಳಿಕೆಗೆ ಸದಾ ಶ್ರಮಿಸುತ್ತಿದ್ದರು. ಈ ಭಾಗದಲ್ಲಿ ಪ್ರತಿ ಗ್ರಾಮದಲ್ಲಿ ಅವರು ಪ್ರತಿಷ್ಠಾಪನೆ ಮಾಡಿರುವ ದೇವಾಲಯಗಳನ್ನು ಕಾಣಬಹುದಾಗಿದ್ದು ಜೀವನದ ಅಂತ್ಯದವರೆಗೂ ಭಕ್ತರ ಸೇವೆ ಹಾಗೂ ಮಾರ್ಗದರ್ಶನವನ್ನೇ ತಮ್ಮ ಜೀವನವನ್ನಾಗಿಸಿಕೊಂಡು ತಮ್ಮನ್ನು ತಾವು ಜಗತ್ತಿಗೆ ಸಮರ್ಪಿಸಿಕೊಂಡು ಸಾರ್ಥಕ ಜೀವನವನ್ನು ನಡೆಸಿ ತ್ಯಾಗದ ಪ್ರತಿರೂಪವಾಗಿದ್ದರು ಎಂದು ಹೇಳಿದರು. ವೇದಿಕೆ ಕಾರ್ಯಕ್ರಮಕ್ಕೆ ಮುನ್ನ ಶ್ರೀಮಠದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಯಿತು ಹಾಗೂ ಪೂಜ್ಯರ ಭಾವಚಿತ್ರವನ್ನು ಗ್ರಾಮದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಿ ಅನ್ನ ಸಂತರ್ಪಣೆ ಆಯೋಜಿಸಲಾಯಿತು.

ಕೊಪ್ಪಳ ನಗರದ ಅಗಸ್ತ್ಯ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಹಾಗೂ ಆಸ್ಪತ್ರೆ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಸಹ ಆಯೋಜಿಸಲಾಯಿತು. ಈ ವೇಳೆಯಲ್ಲಿ ಯಲಬುರ್ಗಾ ಸಂಸ್ಥಾನ ಹಿರೇಮಠದ ಪೂಜ್ಯರಾದ ಶ್ರೀ ಸಿದ್ಧರಾಮೇಶ್ವರ ಮಹಾಸ್ವಾಮಿಗಳು, ಕುಷ್ಟಗಿ ಪಟ್ಟಣದ ಮದ್ದಾನೇಶ್ವರ ಮಠದ ಕರಿಬಸವ ಮಹಾಸ್ವಾಮಿಗಳು, ಮೈನಹಳ್ಳಿ ಹಿರೇಮಠದ ಶ್ರೀ ಸಿದ್ದೇಶ್ವರ ಶಿವಾಚಾರ್ಯರು, ಕಂಪಸಾಗರ ನಾಗಭೂಷಣ ದೇಶಿಕರು, ಗಣ್ಯರು, ಹಲವಾರು ಗ್ರಾಮಗಳ ಸದ್ಭಕ್ತರು ಪ್ರಥಮ ಪುಣ್ಯ ಸ್ಮರಣೋತ್ಸವ ಸೇವಾ ಸಮಿತಿಯ ಸರ್ವ ಸದಸ್ಯರು ಪಾಲ್ಗೊಂಡಿದ್ದರು.

# ಸ್ವಾವಲಂಬಿ ಬದುಕಿಗೆ ಹೊಲಿಗೆ ಯಂತ್ರ ಪೂರಕ




• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಪಟ್ಟಣದ ಗುರುಕೃಪಾ ಕಲ್ಯಾಣ ಮಂಟಪದಲ್ಲಿ ರೋಟರಿ ಕ್ಲಬ್ ಆಫ್ ಭಾಲ್ಕಿ ಪೋರ್ಟ್‌ನವರು (ಆರ್‌ಆಯ್ 3160) ಬಡ ಮಹಿಳೆಯರಿಗೆ ಹೊಲಿಗೆ ಯಂತ್ರ ವಿತರಿಸಿದರು.ಬಳಿಕ ಮಾತನಾಡಿದ ತಾಲೂಕು ರೋಟರಿ ಅಧ್ಯಕ್ಷ ಅಶ್ವಿನ ಭೋಸ್ಲೆ ಅವರು,ರೋಟರಿ ಕ್ಲಬ್‌ನವರು ಪ್ರತಿ ವರ್ಷ ರಕ್ತದಾನ,ಕಣ್ಣಿನ ತಪಾಸಣೆ ,ಚಿತ್ರಕಲೆ ಸ್ಪರ್ಧೆ,ವಾಕ್ ಫಾರ್ ಹಾರ್ಟ್ ಕಾರ್ಯಕ್ರಮ ಆಯೋಜಿಸಿ ರೇಲ್ವೆ ನಿಲ್ದಾಣ, ಗ್ರಂಥಾಲಯ, ಚರ್ಚ್,ಮಂದಿರಗಳು ಸೇರಿದಂತೆ ಸಾರ್ವಜನಿಕ ಸ್ಥಳಗಳಲ್ಲಿ ಬೆಂಚ್‌ಗಳನ್ನು (ಕೂಡುವ ಆಸನಗಳು) ಅಳವಡಿಸಿ, ಜನಪರ ,ಜನಪಯೋಗಿ ಕಾರ್ಯಗಳ ಮೂಲಕ ಸರ್ವತೋಮುಖ ಬೆಳವಣಿಗೆಗಾಗಿ ಶ್ರಮಿಸುತ್ತಿದ್ದಾರೆ.ವಿಶೇಷವಾಗಿ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಯಾಗಿ ಕಾರ್ಯನಿರ್ವಹಿಸಲು ಹೊಲಿಗೆ ಯಂತ್ರಗಳು ಉಚಿತವಾಗಿ ನೀಡಲಾಗುತ್ತಿದೆ.ಅರ್ಹರು ಅದರ ಲಾಭ ಪಡೆದುಕೊಂಡು ತಮ್ಮ ಆರ್ಥಿಕ ಪರಿಸ್ಥಿತಿ ಸುಧಾರಿಸಿಕೊಳ್ಳಬೇಕು ಎಂದು ಹೇಳಿದರು. ಈ ಸಂದರ್ಭದಲ್ಲಿ ರೋಟರಿ ಕಾರ್ಯದರ್ಶಿ ಬಸವ ಪಾಟೀಲ,ಖಜಾಂಚಿ ಸೌರಭ ನಾಯಕ್ ಮತ್ತು ಪ್ರಮುಖರಾದ ಡಾ. ಅಮೀತ ಅಷ್ಟೂರೆ,ಡಾ. ವಸಂತ ಪವಾರ, ನ್ಯಾಯವಾದಿಗಳಾದ ಸಾಗರ ನಾಯಕ್, ಶಾಂತನು ಕುಲಕರ್ಣಿ,ಡಾ.ನಿತೀನ ಪಾಟೀಲ್,ಡಾ.ವಿಲಾಸ ಕನಸೆ,ಅವಿನಾಶ ಮಾಳಗೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗ್ಯಾರಂಟಿ ಯೋಜನೆಗಳ ಜಿಲ್ಲಾ ಸಮಿತಿ ಭೇಟಿ ಶಕ್ತಿ ಯೋಜನೆ ಅನುಷ್ಠಾನ ಕುರಿತು ಪರಿಶೀಲನೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಜೂ 17: ನಗರದ ಕೇಂದ್ರ ಬಸ್ ನಿಲ್ದಾಣ ಹಾಗೂ ಸೂಪರ್ ಮಾರ್ಕೆಟ್ ಬಸ್ ನಿಲ್ದಾಣಗಳಿಗೆ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷೆ ಚಂದ್ರಿಕಾ ಪರಮೇಶ್ವರ ಹಾಗೂ ಉಪಾಧ್ಯಕ್ಷ ವಿಜಯಕುಮಾರ ಕಟ್ಟಿಮನಿ ಮತ್ತು ಸದಸ್ಯರ ತಂಡ ಇಂದು ಜಂಟಿಯಾಗಿ ಭೇಟಿ ನೀಡಿ, ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ 'ಶಕ್ತಿ' ಯೋಜನೆಯ ಜಾರಿ ಹಾಗೂ ಪ್ರಯಾಣಿಕರ ಮೂಲಭೂತ ಸೌಲಭ್ಯಗಳನ್ನು ಸಮಗ್ರವಾಗಿ ಪರಿಶೀಲಿಸಿದರು.ಬುಧುವಾರದಂದು ಕೇಂದ್ರ ಬಸ್ ನಿಲ್ದಾಣದ ಆವರಣದಲ್ಲಿ ಭದ್ರತೆಗಾಗಿ ಅಳವಡಿಸಲಾಗಿರುವ ಸಿಸಿಟಿವಿ ಕ್ಯಾಮೆರಾಗಳ ಕಾರ್ಯನಿರ್ವಹಣೆ,ಮಹಿಳೆಯರ ವಿಶ್ರಾಂತಿ ಕೊಠಡಿಗಳು, ಶಿಶುಗಳಿಗೆ ಹಾಲುಣಿಸುವ ಕೊಠಡಿ (ಫೀಡಿಂಗ್ ರೂಮ್) ಹಾಗೂ ಮಹಿಳಾ ಶೌಚಾಲಯಗಳ ವ್ಯವಸ್ಥೆಯನ್ನು ಸಮಿತಿಯು ಸೂಕ್ಷ್ಮವಾಗಿ ಅವಲೋಕಿಸಿತು. ಅಲ್ಲದೆ, ನಿಲ್ದಾಣದ ಕ್ಯಾಂಟೀನ್ ಮತ್ತು ಬೇಕರಿ ಮಳಿಗೆಗಳಿಗೆ ಭೇಟಿ ನೀಡಿ ಆಹಾರ ಪದಾರ್ಥಗಳ ಗುಣಮಟ್ಟ, ಸ್ವಚ್ಛತೆ ಹಾಗೂ ನೈರ್ಮಲ್ಯದ ಮಾನದಂಡಗಳನ್ನು ಪರಿಶೀಲಿಸಲಾಯಿತು.ಇದೇ ಸಂದರ್ಭದಲ್ಲಿ ಶಕ್ತಿ ಯೋಜನೆಯಡಿ ಉಚಿತ ಪ್ರಯಾಣದ ಸೌಲಭ್ಯ ಪಡೆಯುತ್ತಿರುವ ಮಹಿಳಾ ಪ್ರಯಾಣಿಕರೊಂದಿಗೆ ಸಮಿತಿಯ ಪದಾಧಿಕಾರಿಗಳು ನೇರ ಸಂವಾದ ನಡೆಸಿ, ಯೋಜನೆಯ ಉಪಯುಕ್ತತೆಯ ಕುರಿತು ಅಭಿಪ್ರಾಯ ಆಲಿಸಿದರು. ಸಂವಾದದಲ್ಲಿ ಭಾಗವಹಿಸಿದ ಮಹಿಳೆಯರು, "ಶಕ್ತಿ ಯೋಜನೆಯಿಂದ ನಮ್ಮ ದೈನಂದಿನ ಸಂಚಾರ ಸುಗಮಗೊಂಡಿದ್ದು, ಆರ್ಥಿಕವಾಗಿ ದೊಡ್ಡ ಮಟ್ಟದ ಉಳಿತಾಯವಾಗುತ್ತಿದೆ" ಎಂದು ಸರ್ಕಾರದ ಜನಪರ ಯೋಜನೆಯ ಬಗ್ಗೆ ತೀವ್ರ ಮೆಚ್ಚುಗೆ ಹಾಗೂ ಸಂತೋಷ ವ್ಯಕ್ತಪಡಿಸಿದರು.ಬಳಿಕ ಮಾತನಾಡಿದ ಸಮಿತಿಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರು, ಸಾರ್ವಜನಿಕರಿಗೆ ಗುಣಮಟ್ಟದ ಹಾಗೂ ಸಮರ್ಪಕ ಮೂಲಭೂತ ಸೌಲಭ್ಯಗಳನ್ನು ನಿರಂತರವಾಗಿ ಒದಗಿಸಲು ಮತ್ತು ಅಗತ್ಯ ಸುಧಾರಣೆಗಳನ್ನು ಕಾಲಮಿತಿಯೊಳಗೆ ಅಳವಡಿಸಿಕೊಳ್ಳಲು ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಶಕ್ತಿ ಯೋಜನೆಯು ಇನ್ನಷ್ಟು ಪರಿಣಾಮಕಾರಿಯಾಗಿ ಜಾ–ರಿಯಾಗಿ, ಅರ್ಹ ಫಲಾನುಭವಿಗಳಿಗೆ ಯಾವುದೇ ತೊಂದರೆಯಾಗದಂತೆ ಸುಗಮವಾಗಿ ತಲುಪಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಿದರು.ಈ ಸಂದರ್ಭದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ (ಕೆಕೆಆರ್‌ಟಿಸಿ) ಕಲಬುರಗಿ ವಿಭಾಗ–1ರ ವಿಭಾಗೀಯ ನಿಯಂತ್ರಣಾಧಿಕಾರಿ ಎಸ್.ಜಿ.ಗಂಗಾಧರ, ವಿಭಾಗ–2ರ ವಿಭಾಗೀಯ ನಿಯಂತ್ರಣಾಧಿಕಾರಿ ಬಸವಂತಪ್ಪ ಎಮ್.,ವಿಭಾಗೀಯ ಸಂಚಾರ ಅಧಿಕಾರಿಗಳಾದ ಸಿ.ಎಸ್. ಹೊಸಮನಿ ಮತ್ತು ಶಾರದಾದೇವಿ, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶಮೀಯುದ್ದಿನ್ ಶಾಹೀನ್, ಘಟಕ ವ್ಯವಸ್ಥಾಪಕರಾದ ಅನಿಲಕುಮಾರ ಹಾಗೂ ನಿಲ್ದಾಣದ ಮೇಲ್ವಿಚಾರಕರಾದ ಗಿರೀಶ ಸೇರಿದಂತೆ ಸಂಸ್ಥೆಯ ಪ್ರಮುಖ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಾಹಿತಿ ಜಿ.ಆರ್.ನಾಯಕ ದಂಪತಿಗಳಿಗೆ ಕಸಾಪದಿಂದ ಸನ್ಮಾನ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಕಳೆದ ಡಿಸೆಂಬರ್‌ನಲ್ಲಿ ದಾಂಡೇಲಿಯಲ್ಲಿ 25ನೇ ಜಿಲ್ಲಾ ಸಾಹಿತ್ಯ ಸಮ್ಮೇಳನ ಹಮ್ಮಿಕೊಳ್ಳಲಾಗಿತ್ತು. ಆ ಸಮಯದಲ್ಲಿ ಪ್ರತಿಯೊಂದು ತಾಲೂಕಿನಿಂದ ಒಬ್ಬ ಪ್ರತಿನಿಧಿಗೆ ಸನ್ಮಾನ ಇಟ್ಟುಕೊಳ್ಳಲಾಗಿತ್ತು. ಆದರೆ ಅಂಕೋಲಾದಿಂದ ಆಯ್ಕೆಯಾಗಿದ್ದ ಸಾಹಿತಿ ಜಿ.ಆರ್.ನಾಯಕ ಅನಾರೋಗ್ಯದಿಂದ ತೆರಳಲು ಸಾಧ್ಯವಾಗದ ಹಿನ್ನೆಲೆಯಲ್ಲಿ ಈಗ ಅವರ ಮನೆಗೆ ಬಂದು ಸನ್ಮಾನಿಸುತ್ತಿದ್ದೇವೆ ಎಂದು ಕಸಾಪ ಜಿಲ್ಲಾಧ್ಯಕ್ಷ ಬಿ.ಎನ್.ವಾಸರೆ ಹೇಳಿದರು. ಬುಧವಾರ ವಂದಿಗೆಯ ಜಿ.ಆರ್.ನಾಯಕ ಅವರ ಮನೆಗೆ ತೆರಳಿ ಕಸಾಪ ವತಿಯಿಂದ ಹಮ್ಮಿಕೊಂಡ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಕಸಾಪ ತಾಲೂಕು ಅಧ್ಯಕ್ಷ ಗೋಪಾಲಕೃಷ್ಣನಾಯಕ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ ಹಿರಿಯರಾದ ಜಿ.ಆರ್.ನಾಯಕ ಅವರು ಪ್ರತಿ ಕಾರ್ಯಕ್ರಮದಲ್ಲಿಯೂ ಉಪಸ್ಥಿತರಿರುತ್ತಿದ್ದರು. ಆದರೆ ಈಗ ಅನಾರೋಗ್ಯದ ನಿಮಿತ್ತ ಮನೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದು, ದೇವರು ಇನ್ನಷ್ಟು ಶಕ್ತಿಯನ್ನು ಕೊಡುವಂತಾಗಲಿ ಎಂದರು. ಈ ಸಂದರ್ಭದಲ್ಲಿ ಸಾಹಿತಿ ಡಾ. ರಾಮಕೃಷ್ಣ ಗುಂದಿ, ಪದಾಧಿಕಾರಿಗಳಾದ ಮಹಾಂತೇಶ ರೇವಡಿ, ನಾಗೇಂದ್ರ ನಾಯಕ ತೊರ್ಕೆ, ರಫೀಕ್ ಶೇಖ್, ನಾಗರಾಜ ಮಂಜಗುಣಿ, ಸುಜೀತ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಿಥಿಲಾವಸ್ಥೆಯಲ್ಲಿರುವ ಕಟ್ಟಡದಲ್ಲಿ ಅಂಗನವಾಡಿ ಶಾಲೆ ನಡೆಸಬೇಡಿ: ತಾಪಂ ಇಓ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ



ರೈತ ಸಮುದಾಯಕ್ಕೆ ಕೃಷಿ ಇಲಾಖೆ ಬೆಳೆ ವಿಮೆ ಕುರಿತು ವ್ಯಾಪಕವಾಗಿ ಅರಿವು ಮೂಡಿಸಿದ್ದಲ್ಲಿ, ಬೆಳೆ ಹಾನಿಯಾದ ಸಂದರ್ಭದಲ್ಲಿ ರೈತರಿಗೆ ಕನಿಷ್ಟ ಖರ್ಚು ಮಾಡಿದ್ದಷ್ಟು ಹಣ ಮರಳಿ ಬರಲು ಸಾಧ್ಯವಾಗುತ್ತದೆ ಎಂದು ತಾಪಂ ಇಓ ವೆಂಕಟೇಶ ವಂದಾಲ ಕೃಷಿ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ತಾಪಂ ಸಭಾಭವನದಲ್ಲಿ ಬುಧುವಾರ ಆಯೋಜಿಸಿದ್ಧ ಸಾಮಾನ್ಯ ಸಭೆಯಲ್ಲಿ ಸಹಾಯಕ ಕೃಷಿ ನಿರ್ದೇಶಕ ಎ.ಪಿ ಬಿರಾದಾರ ಹಾಗೂ ತೋಟಗಾರಿಕೆ ಇಲಾಖೆಯ ಸಿಬ್ಬಂದಿ ರಾಘವೇಂದ್ರ ಬಗಲಿ ಅವರಿಗೆ ಈ ವಿಷಯ ತಿಳಿಸಿದರು.ಮೂರು ತಿಂಗಳಿನಿಂದ ಯೂ–ರಿಯಾ ಬೇಡಿಕೆ ಜಾಸ್ತಿ ಇದೆ. ಕಡಿಮೆ ಸರಬರಾಜು ಸರಬರಾಜು ಮಾಡಲಾಗುತ್ತಿದೆ. ಬರುವ ದಿನಗಳಲ್ಲಿ ಸಹಕಾರ ಸಂಘಗಳಲ್ಲಿ ಸರಬರಾಜು ಮಾಡಲಾಗುವುದು ಎಂದರು ಸಹಾಯಕ ಕೃಷಿ ನಿರ್ದೇಶಕ ಎಪಿ ಬಿರಾದಾರರು. 129 ಶಾಲಾ ಕೊಠಡಿಗಳ ಮೇಲ್ಛಾವಣಿ ತೆರವುಗೊಳಿಸುವುದು, 110 ಸಣ್ಣಪುಟ್ಟ ಹಾಗೂ 105 ಕೊಠಡಿಗಳ ದುರಸ್ತಿಗೆ ಕೂಡಲೇ ಮಾಡಲಾಗುವುದು ಎಂದು ಬಿಇಓ ತಿಳಿಸಿದರು. ಪ್ರಾಥಮಿಕ ಶಿಕ್ಷಣ ಭದ್ರ ಬುನಾದಿಯಾಗಿದೆ ಈ ಕುರಿತು ಹೆಚ್ಚಿನ ಗಮನ ನಿಮ್ಮದಿರಲಿ ಎಂದು ಬಿಇಓ ವಸಂತ ರಾಠೋಡರಿಗೆ ವಂದಾಲ ಅವರು ತಿಳಿಸಿದರು. ಶಾಲೆ ಹಾಗೂ ಅಂಗನವಾಡಿಗಳ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದು ಕಂಡು ಬಂದಲ್ಲಿ ಕೂಡಲೇ ಬೇರೆ ಕಡೆ ಸ್ಥಳಾಂತರವಾಗಿರಿ. ಅದರಲ್ಲೇ ಶಾಲೆ ನಡೆಸಬೇಡಿ ಎಂದರು.ಈ ಬಾರಿ ಎಸ್ಸಎಸ್‌ಲ್ಸಿ ಪರೀಕ್ಷೆಯಲ್ಲಿ ತಾಲೂಕು ಜಿಲ್ಲೆಯಲ್ಲಿ ಮೂರನೇ ಸ್ಥಾನಕ್ಕಿಳಿದರೂ 31 ಸರ್ಕಾರಿ ಪ್ರೌಢಶಾಲೆಗಳು ನೂರಕ್ಕೆ ನೂರು ಸಾಧನೆ ಮಾಡಿವೆ ಎಂದು ಬಿಇಓ ತಿಳಿಸಿದರು.ಬಾಲಕಿಯರ ವಸತಿ ನಿಲಯಗಳಲ್ಲಿ ನಿಲಯ ಮೇಲ್ವಿಚಾಕರ ಹಾಗೂ ರಾತ್ರಿ ಕಾವಲುಕಾರರ ಪಾತ್ರ ತುಂಬಾ ಮುಖ್ಯವಾಗಿದೆ. ಯಾವುದೇ ಸಂದರ್ಭದಲ್ಲೂ ಅವಘಡ ಸಂಭವಿಸದಂತೆ ಹಿಂದುಳಿದ ಅಧಿಕಾರಿ ಎಂ.ವಿ ನಿಂಬಾಳ, ಎಸ್.ಜಿ ಬಿರಾದಾರ ಹಾಗೂ ಸಮಾಜ ಕಲ್ಯಾಣಾಧಿಕಾರಿ ಮಂಜುಳಾ ಹಿರೇಮನಿ ಅವರಿಗೆ ಸೂಚಿಸಲಾಯಿತು.

ಕ್ಷಯ ರೋಗದ ಕುರಿತು ಅರಿವು ಮೂಡಿಸಿ. ಗ್ರಾಪಂ ಮಟ್ಟದಲ್ಲಿ ತಪಾಸಣೆ ಸಂಖ್ಯೆ ಹೆಚ್ಚಾಗಲಿ ಎಂದು ಆರೋಗ್ಯ ಇಲಾಖೆಗೆ ತಿಳಿಸಿದರು.22 ವಾರಗಳ ಕಾಲ ಯಾವುದೇ ರೀತಿಯಲ್ಲಿ ಮೇವಿನ ಕೊರತೆಯಾಗಿಲ್ಲ. ನಾಯಿ ಕಡಿತಕ್ಕೆ ಸೂಕ್ತ ಚುಚ್ಚುಮದ್ದು ಹಾಗೂ ಕರುಳ ಬೇನೆ ಲಸಿಕೆ ಕುರಿತಾಗಿ ಅಗತ್ಯ ಮಾಹಿತಿ ನೀಡಿ ಎಂದು ಪಶು ಅಧಿಕಾರಿ ಡಾ. ಪಿ.ಎಸ್ ಸಂಖ ಅವರಿಗೆ ಸೂಚಿಸಲಾಯಿತು.ಅಂಗನವಾಡಿ ಕಟ್ಟಡಗಳು ಪೂರ್ಣಗೊಂಡಿದ್ದರೂ ಇಲಾಖೆಗೆ ಹಸ್ತಾಂತರ ಮಾಡತಾ ಇಲ್ಲ ಎಂದು ಎಸಿಡಿಪಿಓ ಬಿ ಎಸ್ ನಿಲೊಗಲ್ ಸಭೆಯ ಮುಂದಿಟ್ಟರು.ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿದ್ದು ಈ ಕುರಿತು ತಿಳುವಳಿಕೆ ನೀಡುವಂತೆ ತಿಳಿಸಲಾಯಿತು.ಎಸ್ ಎಸ್ ಎಲ್ ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಕಡಿಮೆ ಅಂಕ ಹಾಗೂ ಫೇಲ್ ಆದ ವಸತಿ ನಿಲಯ ಪಾಲಕರಿಗೆ ಸೂಕ್ತ ನಿರ್ದೇಶನ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಲಾಯಿತು.ಬರೀ ಸಸಿಗಳನ್ನು ನೆಡುವುದು ಮುಖ್ಯವಲ್ಲ. ಅವುಗಳ ಪಾಲನೆ ತುಂಬಾ ಇದೆ ಎಂದು ಅರಣ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.ರೇಷ್ಮೆ ವಿಸ್ತರಣಾಧಿಕಾರಿ ಸುರೇಶ ಗೊಲಗೊಂಡ, ಹೆಸ್ಕಾಂ ಎಇಇ ಆರ್.ವಿ ಶಹಾ, ಪುರಸಭೆ ವ್ಯವಸ್ಥಾಪಕ ಸುರೇಶ ಬಾಗೇವಾಡಿ, ಕಾಮ,ಇಕ ಇಲಾಖಾ ಸಿಬ್ಬಂದಿ ಮಿರಾಜುದ್ದೀನ್ ಮೈತ್ರಿ ಎಂ.ವಿ ನಿಂಬಾಳ, ಎಸ್,ಜಿ ಬಿರಾದಾರ, ರಾಜಶೇಖರ ಚಿಂಚೊಳ್ಳಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಪ್ರಗತಿಯನ್ನು ಸಭೆಗೆ ತೆರೆದಿಟ್ಟರು. ವೇದಿಕೆಯ ಮೇಲೆ ಕೊಲ್ಹಾರ ತಾಪಂ ಇಓ ಸುನೀಲ ಮದ್ದಿನ್ ಹಾಜರಿದ್ದರು. ಎಂ ಎಂ ದಫೇದಾರ ವಂದಿಸಿದರು.

# ಮೂಲ ಸೌಕರ್ಯಗಳಿಂದ ವಂಚಿತ ಮರಂಕಲ ಗ್ರಾಮಕ್ಕೆ ಮೂಲಸೌಕರ್ಯ ಒದಗಿಸಲು ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಶಹಾಪುರ ತಾಲ್ಲೂಕಿನ ಚಟ್ನಳ್ಳಿ ಗ್ರಾಮ ಪಂಚಾಯಿತಿ ಮುಂದೆ ಕರ್ನಾಟಕ ಪ್ರಾಂತ ರೈತ ಸಂಘ ತಾಲೂಕ ಸಮಿತಿ ಶಹಪುರ್ ವತಿಯಿಂದ ಪ್ರತಿಭಟನೆ ಚಟ್ನಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಗ್ರಾಮದಲ್ಲಿ ಸಿಸಿ ರಸ್ತೆ ಒಳಚರಂಡಿ ವ್ಯವಸ್ಥೆ ತಕ್ಷಣ ಕ್ರಮ ಕೈಗೊಳ್ಳಬೇಕು. ರೈತರು ಮಹಿಳೆಯರು ಮುದ್ದು ಮಕ್ಕಳು ರಸ್ತೆಯ ಮೇಲೆ ತೆಗ್ಗು ಮತ್ತು ಕೊಳಚಿ ನೀರಿನಲ್ಲಿ ಜೀವ ಕೈಯಲ್ಲಿ ಹಿಡಿದು ಓಡಾಡುವ ಅಂತ ಪರಿಸ್ಥಿತಿ ನಿರ್ಮಾಣವಾಗಿದೆ. ತಕ್ಷಣ ತಾತ್ಕಾಲಿಕ ಮರಮ್ ಹಾಕಿ ಸುಗಮವಾಗಿ ಸಂಚಾರ ಮಾಡಲು ಅನುಕೂಲ ಮಾಡಿಕೊಡಬೇಕು.

ಮರಂಕಲ್ ಗ್ರಾಮದಲ್ಲಿ ಸಾಮೂಹಿಕ ಶೌಚಾಲಯ ನಿರ್ಮಿಸಿ ಮತ್ತು ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಳ್ಳಲು ಗ್ರಾಮ ಪಂಚಾಯಿತಿ ವತಿಯಿಂದ ಡಂಗೂರ ಹಾಕಿ ಅರ್ಜಿಗಳು ಪಡಿಯಬೇಕು. ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿಯಲ್ಲಿ ಕೆಲಸ ಮಾಡಿದ ಬಡ ರೈತ ಕೂಲಿ ಕಾರ್ಮಿಕರಿಗೆ ಆರು ತಿಂಗಳ ಕಳೆದರೂ ಪೇಮೆಂಟ್ ಬಂದಿಲ್ಲ ತಕ್ಷಣ ದುಡಿದ ಬಡ ರೈತ ಕೂಲಿ ಕಾರ್ಮಿಕರಿಗೆ ಕೂಲಿ ಜಮಾ ಮಾಡಬೇಕು.ಫಾರಂ ನಂಬರ್ 6 ಕೊಟ್ಟರು ಕೆಲಸ ಕೊಡದೆ ಸತಾಯಿಸುತ್ತಿರುವುದು. ತಕ್ಷಣ ಬಡ ರೈತ ಕೂಲಿ ಕಾರ್ಮಿಕರಿಗೆ ಎಂಆರ್ ತೆಗೆದುಕೊಟ್ಟು ಕೆಲಸಕ್ಕೆ ಕಳಿಸಬೇಕು. ಬಡ ರೈತ ಕೂಲಿ ಕಾರ್ಮಿಕರಿಗೆ ಮನೆ ನಿವೇಶನ. ನೀಡಬೇಕು. ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ , ಭೀಮರಾಯ ಪೂಜಾರಿ ಆಗ್ರಹಿಸಿದ್ದಾರೆ.

ಈ ಸಂದರ್ಭದಲ್ಲಿ ತಕ್ಷಣ ಒಂದು ವಾರದ NMR ಡಿಮ್ಯಾಂಡ್ ಮಾಡಿಸಿ ಮತ್ತು ಉಳಿದ ಬೇಡಿಕೆಗಳು ಒಂದು ವಾರದಲ್ಲಿ ಇತ್ಯರ್ಥ ಮಾಡುತ್ತೇನೆ ಎಂದು ಲಿಖಿತ ಜ್ಞಾಪನ ಪತ್ರ ಬರೆದು ಕೊಟ್ಟಿದ್ದಾರೆ. ತಾಲೂಕ ಅಧ್ಯಕ್ಷರಾದ ತಮ್ಮಣ್ಣ ಜಾಗೀರ್ದಾರ್. ಕಾರ್ಯದರ್ಶಿಗಳಾದ ಭೀಮಣ್ಣ ತಪ್ಪೇದರ್. ವಿಜಯಕುಮಾರ್ ದೊಡ್ಡಮನಿ. ಯಲ್ಲಪ್ಪ ನಾಯ್ಕೋಡಿ. ಭಾಗಣ್ಣ ಪೂಜಾರಿ. ಕಾರ್ಮಿಕ ಮುಖಂಡ ದೇವೇಂದ್ರಕುಮಾರ್. ಭೀಮಣ್ಣ ಮೆಕ್ಯಾನಿಕ್ ರಸ್ತಾಪುರ್. ಮರಂಕಲ ಗ್ರಾಮದ ಸಂಘದ ಮುಖಂಡರಾದ ರೇಣುಕಾ ಮಲ್ಲಿಕಾರ್ಜುನ್ ಪೋಲೀಸ್ ಪಾಟೀಲ್. ಮತ್ತು ರೈತ ಮಹಿಳೆಯರು ಇದ್ದರು.

# ಅಧಿಕಾರಿಗಳು ಓಡಾಡುವ ರಸ್ತೆಯಲ್ಲೇ ನೀರಿನ ಹಾಹಾಕಾರ ವಡಗೇರಾ ಜನರ ಗೋಳು ಕೇಳುವವರು ಯಾರು?



• ಮಲ್ಲಮ್ಮ ನುಡಿ ವಾರ್ತೆವಡಗೇರಾ

ಯಾದಗಿರಿ ಜಿಲ್ಲೆಯ ವಡಗೇರಾ ತಾಲೂಕಿನ ಹಲವು ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರ ಸ್ವರೂಪ ಪಡೆದುಕೊಂಡಿದ್ದು, ಜನರು ಒಂದು ಹನಿ ನೀರಿಗಾಗಿ ಕಿಲೋಮೀಟರ್‌ಗಟ್ಟಲೆ ಅಲೆದಾಡುವ ದುಸ್ಥಿತಿ ನಿರ್ಮಾಣವಾಗಿದೆ. ತಾಲೂಕು ಕೇಂದ್ರದ ವ್ಯಾಪ್ತಿಯಲ್ಲೇ ಇಂತಹ ಪರಿಸ್ಥಿತಿ ಎದುರಾಗಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ.ಪ್ರತಿದಿನ ಕೂಲಿ ಕೆಲಸ, ಕೃಷಿ ಚಟುವಟಿಕೆಗಳು ಹಾಗೂ ಇತರೆ ದೈನಂದಿನ ಕಾರ್ಯಗಳನ್ನು ಮುಗಿಸಿದ ಬಳಿಕ ವಡಗೇರಾ ಪಟ್ಟಣದ ಸ್ವಾಮಿ ವಿವೇಕಾನಂದ ಶಾಲೆ ಹತ್ತಿರದ ಜನರು ಗಂಟೆಗಟ್ಟಲೆ ಸಮಯ ವ್ಯಯಿಸಿ ದೂರದ ಪ್ರದೇಶಗಳಿಗೆ ತೆರಳಿ ನೀರು ತಂದು ಜೀವನ ಸಾಗಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಮಹಿಳೆಯರು, ವೃದ್ಧರು ಹಾಗೂ ಯುವಕರು ನೀರಿಗಾಗಿ ಪರದಾಡುತ್ತಿರುವ ದೃಶ್ಯಗಳು ಸಾಮಾನ್ಯವಾಗಿವೆ. ಆಶ್ಚರ್ಯದ ಸಂಗತಿಯೆಂದರೆ, ತಹಶೀಲ್ದಾರ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಪ್ರತಿನಿತ್ಯ ಇದೇ ಮುಖ್ಯರಸ್ತೆಯಲ್ಲಿ ಸಂಚರಿಸುತ್ತಿದ್ದರೂ ಜನರ ಸಂಕಷ್ಟವನ್ನು ಗಮನಿಸುತ್ತಿಲ್ಲ ಎಂಬ ಆರೋಪಗಳು ಕೇಳಿಬಂದಿವೆ. ಸಮಸ್ಯೆ ದಿನೇ ದಿನೇ ಉಲ್ಬಣಗೊಳ್ಳುತ್ತಿದ್ದರೂ ಶಾಶ್ವತ ಪರಿಹಾರದ ಯಾವುದೇ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ."ನೀರು ಎಂಬುದು ಮೂಲಭೂತ ಹಕ್ಕು. ಆದರೆ ನಮ್ಮ ಹಳ್ಳಿಗಳಲ್ಲಿ ಇಂದಿಗೂ ಕುಡಿಯುವ ನೀರಿಗಾಗಿ ಅಲೆದಾಡುವ ಪರಿಸ್ಥಿತಿ ಇದೆ. ಅಭಿವೃದ್ಧಿಯ ಮಾತುಗಳು ಕೇವಲ ಭಾಷಣಗಳಿಗೆ ಮಾತ್ರ ಸೀಮಿತವಾಗಿವೆ" ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.ಗಡ್ಡೆಪ್ಪ ಗಡ್ಡೆಪ್ಪನೋರ್, ಸಾಬಣ್ಣ ಮುನಮುಟಗಿ, ಶಿವಪ್ಪ ಬೊಮ್ಮನಳ್ಳಿ ಹಾಗೂ ಭೀಮಾಶಂಕರ ನಾಟೇಕರ್ ಅವರು ಮಾತನಾಡಿ, "ಜನರ ಸಮಸ್ಯೆಗಳನ್ನು ಪರಿಹರಿಸುವ ಜವಾಬ್ದಾರಿ ಹೊಂದಿರುವ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ನಮ್ಮ ಸಂಕಷ್ಟವನ್ನು ನಿರ್ಲಕ್ಷ್ಯ ಮಾಡುತ್ತಿದ್ದಾರೆ. ಕುಡಿಯುವ ನೀರಿಗಾಗಿ ಪ್ರತಿದಿನ ಗಂಟೆಗಟ್ಟಲೆ ಸಮಯ ವ್ಯಯಿಸುವ ಅನಿವಾರ್ಯತೆ ಎದುರಾಗಿದೆ. ಕೂಡಲೇ ಸೂಕ್ತ ಕ್ರಮ ಕೈಗೊಂಡು ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸಬೇಕು" ಎಂದು ಆಕ್ರೋಶ ವ್ಯಕ್ತಪಡಿಸಿದರು. ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಟ್ಯಾಂಕರ್ ಮೂಲಕ ನೀರು ಪೂರೈಸುವುದು, ಕೆಟ್ಟಿರುವ ಕೊಳವೆಬಾವಿಗಳನ್ನು ದುರಸ್ತಿಗೊಳಿಸುವುದು ಹಾಗೂ ಶಾಶ್ವತ ಕುಡಿಯುವ ನೀರಿನ ಯೋಜನೆಗಳನ್ನು ಜಾರಿಗೊಳಿಸುವ ಮೂಲಕ ಜನರ ಸಂಕಷ್ಟಕ್ಕೆ ಸ್ಪಂದಿಸಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

# ಲಿಂಗೈಕ್ಯ ಚನ್ನಮಲ್ಲೇಶ್ವರ ತ್ಯಾಗಿಗಳ ಕೊಡುಗೆ ಅಪಾರ: ಸೋಮೇಶ್ವರ ಶಿವಾಚಾರ್ಯರು

• ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ



ಚನ್ನಮಲ್ಲೇಶ್ವರ ತ್ಯಾಗಿಗಳು ಘೋರ ತಪಸ್ಸು ಮಾಡಿ ದಿವ್ಯ ಶಕ್ತಿ ಸಂಪಾದನೆ ಮಾಡಿದಂತಹ ಮಹಾನ ತ್ಯಾಗಿಯೆಂದು ತಾಲೂಕಿನ ಇಟಗಾ ಗ್ರಾಮದ ಶಿವಸಿದ್ದಯೋಗಾಶ್ರಮದ ಶಾಖಾ ಮುಕ್ತಿ ಮಠದ ಪೀಠಾಧಿಪತಿಗಳಾದ ಶಿವಸಿದ್ದ ಸೋಮೇಶ್ವರ ಶಿವಾಚಾರ್ಯರು ಲಿಂಗೈಕ್ಯ ಚನ್ನಮಲ್ಲೇಶ್ವರತ್ಯಾಗಿಗಳ 3ನೇಯ ಪುಣ್ಯಾರಾಧನೆ ಹಾಗೂ ಹಸಿರು ಹಬ್ಬ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ಚನ್ನಮಲ್ಲೇಶ್ವರ ತ್ಯಾಗಿಗಳು ಧಾರ್ಮಿಕ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ, ಸರ್ವ ಧರ್ಮ ಜನತೆಯ ಪ್ರೀತಿಯ ಸ್ವಾಮಿಗಳಾಗಿದ್ದರು. ಪ್ರತಿ ವರ್ಷ ತಮ್ಮ ಹುಟ್ಟು ಹಬ್ಬವನ್ನು ಹಸಿರು ಹಬ್ಬವನ್ನಾಗಿ ಆಚರಿಸಲು ಅದೇಶಿದಂತೆ ಪ್ರತಿ ವರ್ಷ ಪರಿಸರವಾದಿ ಶೈಲೇಂದ್ರ ಕಾವಡಿ ಅವರ ನೇತೃತ್ವದಲ್ಲಿ ಆಚರಿಸಲಾಗುತ್ತಿದೆ. ಸ್ವಾಮಿಜಿಗಳು ಪರಿಸರ ಸಂರಕ್ಷಣೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ.

ಶ್ರೀಮಠದಲ್ಲಿ 12 ಜ್ಯೋತಿರ್ಲಿಂಗ ಸ್ಥಾಪಿಸಿ ಭಕ್ತರಿಗೆ 12 ಜ್ಯೋತಿರ್ಲಿಂಗಗಳ ದರ್ಶನಕ್ಕೆ ಸಹಾಯವಾಗಿದೆ. ಆಶ್ರಮದಲ್ಲಿ ಹಗಲಿರಳು ಎನ್ನದೇ ಭಕ್ತರಿಗೆ ದಾಸೋಹ ವ್ಯವಸ್ಥೆ ಶ್ರೀ ಮಠದಿಂದ ಮಾಡುತ್ತಿದ್ದರು. ಇಲ್ಲಿನ ಭಕ್ತಾಧಿಗಳು ಲಿಂಗೈಕ್ಯ ಸ್ವಾಮೀಜಿಯವರಿಗೆ ದಾಸೋಹ ಮೂರ್ತಿ ಎಂದು ಹೆಸರು ಇಟ್ಟರು. ಪಂಚ ಪೀಠಾಧೀಶರನ್ನು ಶ್ರೀ ಮಠಕ್ಕೆ ಆಮಂತ್ರಿಸಿ ಅಡ್ಡ ಪಲ್ಲಕ್ಕಿ ಉತ್ಸವ ಮಾಡಿ, ಆಚಾರ್ಯ ತತ್ವಗಳನ್ನು ಪ್ರಚಾರ ಮಾಡಲು ಸಹಾಯವಾಗಿದೆ ಎಂದರು. ಈ ಸಂದರ್ಭದಲ್ಲಿ ಹಿರೇಮುನಳ್ಳಿ ಶ್ರೀ ಶಂಭುಲಿಂಗ

ಶಿವಾಚಾರ್ಯರು, ಸಿದ್ದಯ್ಯಾ ಸ್ವಾಮಿ, ಪ್ರಭಯ್ಯಾ ಸ್ವಾಮಿ, ಶಾಂತವೀರಯ್ಯಾ ಸ್ವಾಮಿ, ಮಲ್ಲಯ್ಯಾ ಶಾಸ್ತ್ರಿ, ಸೋಮಯ್ಯಾ ಶಾಸ್ತ್ರಿ, ಸಂಗಯ್ಯಾ ಶಾಸ್ತ್ರಿ, ಪರಿಸರವಾದಿ ಶೈಲೇಂದ್ರ ಕಾವಡಿ, ಇಂದ್ರಣ್ಣ ಮೈಲುರ್, ರೇವಪ್ಪ ಪಾಟೀಲ್, ಉಮೇಶ ಸೋಲಾಪುರೇ, ವಿಜಯಕುಮಾರ್ ಖೇಣಿ, ಶಿವರಾಜ ಬಸನಾಳ, ಪ್ರಭು ರೆಡ್ಡಿ, ದಿಗಂಬರ ರೆಡ್ಡಿ, ಹಾಗೂ ಸಮಿತಿಯ ಪದಾಧಿಕಾರಿಗಳು ಸೇರಿದಂತೆ ಅಪಾರ ಸಂಖ್ಯೆಯ ಭಕ್ತಾಧಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ನೀಲಕಂಠರಾವ ಇಸ್ಲಾಂಪುರ್ ನಿರೂಪಿಸಿ, ವಂದಿಸಿದರು. *ಪುಣ್ಯಾರಾಧನೆ ಕಾರ್ಯಕ್ರಮ ಅಂಗವಾಗಿ ವಿಶೇಷ ಅನ್ನ ದಾಸೋಹ ಜರುಗಿತ್ತು.

# ನೀರಿನ ಸಂಗ್ರಹ, ನೀರಿನ ಮೂಲಗಳ ಸ್ವಚ್ಛತೆಗೆ ಕ್ರಮ ಕೈಗೊಳ್ಳಿ: ಸಿಇಒ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಜಿಲ್ಲೆಯ ಎಲ್ಲಾ ಗ್ರಾಮಗಳಲ್ಲಿನ ನೀರು ಸಂಗ್ರಹ ಮತ್ತು ನೀರಿನ ಮೂಲಗಳ ಸ್ವಚ್ಛತೆಗೆ ಕೂಡಲೇ ಕ್ರಮ ಕೈಗೊಳ್ಳಬೇಕೆಂದು ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಸಂಬಧಿಂಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕೊಪ್ಪಳ ವಿಭಾಗದ ಕಾರ್ಯಪಾಲಕ ಅಭಿಯಂತರರ ಕಛೇರಿ ಸಭಾಂಗಣದಲ್ಲಿ ಮಂಗಳವಾರ (ಜೂ. 16ರಂದು) ಹಮ್ಮಿಕೊಂಡಿದ್ದ ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯು.ಎಸ್.ಎಂ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಪ್ರಸ್ತುತ ಮಳೆಗಾಲ ಆರಂಭವಾಗಿದ್ದು, ಈ ಅವಧಿಯಲ್ಲಿ ಸಾಂಕ್ರಾಮಿಕ ರೋಗಗಳು ಹರಡುವ ಸಂಭವ ಹೆಚ್ಚಿರುತ್ತದೆ. ಹಾಗಾಗಿ ನೀರಿನ ಮೂಲಗಳ ಸ್ವಚ್ಛ ಮತ್ತು ಶುಚಿತ್ವ ಕಾಪಾಡಿಕೊಳ್ಳಬೇಕು. ಜಿಲ್ಲೆಯಾದ್ಯಂತ ಎಲ್ಲಾ ಹಳ್ಳಿಗಳಲ್ಲಿನ ಕುಡಿಯುವ ನೀರಿನ ಸಂಗ್ರಹಣೆ ಮೂಲಗಳಾದ ಓ.ಹೆಚ್.ಟಿ ಟ್ಯಾಂಕ್, ಸಣ್ಣ ನೀರಿನ ಟ್ಯಾಂಕ್ ಸೇರಿದಂತೆ ಇತರ ಕುಡಿಯುವ ನೀರು ಸಂಗ್ರಹಗಳ ಸ್ವಚ್ಛತೆಗೆ ಒತ್ತು ಕೊಡಬೇಕು. ಯಾವುದೇ ಪೈಪ್ ಲೈನ್ ಹೊಡೆದು ಹೋಗಿದ್ದಲ್ಲಿ, ಅದನ್ನು ಸರಿಪಡಿಸಲು ಕೂಡಲೇ ಕ್ರಮ ಕೈಗೊಳ್ಳಬೇಕು. ಬೋರ್ ವೆಲ್ ಗಳಲ್ಲಿ ಅಥವಾ ನೀರು ಪೂರೈಕೆ ಪೈಪುಗಳಲ್ಲಿ ಕಲುಷಿತ ನೀರು ಸೇರಿದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರನ್ನು ಕಡ್ಡಾಯವಾಗಿ ಪರೀಕ್ಷಿಸಿದ ಬಳಿಕವೇ ಪೂರೈಸಲು ಕ್ರಮ ವಹಿಸಬೇಕು. ಪರೀಕ್ಷೆಯಲ್ಲಿ ನೀರು ಕುಡಿಯಲು ಯೋಗ್ಯವಿಲ್ಲವೆಂದು ಕಂಡುಬಂದಲ್ಲಿ ತಕ್ಷಣ ಅಂತಹ ನೀರು ಪೂರೈಕೆಯನ್ನು ತಡೆಯಲು ತ್ವರಿತ ಕ್ರಮವಹಿಸಬೇಕು. ಕುಡಿಯಲು ಯೋಗ್ಯವಿಲ್ಲದ ಬೋರ್ ವೆಲ್ ಗಳನ್ನು ಸ್ಥಗಿತಗೊಳಿಸಬೇಕು. ಅಂತಹ ಗ್ರಾಮಗಳಿಗೆ ಟ್ಯಾಂಕರ್ ಮುಖಾಂತರವೇ ನಿರಂತರ ನೀರು ಸರಬರಾಜು ಮಾಡಲು ಕ್ರಮ ಕೈಗೊಳ್ಳಬೇಕು ಎಂದರು.ಜಲ ಜೀವನ್ ಮಿಷನ್ ಯೋಜನೆಯಡಿ ಪ್ರತಿ ಮನೆಗೆ ನಳದ ಸಂಪರ್ಕ ಕಲ್ಪಿಸುವ ನೀರು ಪೂ–ರೈಕೆ ಮಾಡಲಾಗುತ್ತದೆ. ವಿವಿಧ ತಾಂತ್ರಿಕ ಕಾರಣಗಳಿಂದ ಕಾಮಗಾರಿ ಅಪೂರ್ಣಗೊಂಡಿದ್ದಲ್ಲಿ ತ್ವರಿತವಾಗಿ ಪೂರ್ಣಗೊಳಿಸಲು ಕ್ರಮ ವಹಿಸಿ. ಜಿಲ್ಲೆಯಲ್ಲಿ ಯಾವುದೇ ರೀತಿಯ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ನೋಡಿಕೊಂಡು, ಸಮರ್ಪಕವಾಗಿ ನೀರು ಸರಬರಾಜು ಮಾಡಬೇಕು. ಕುಡಿಯುವ ನೀರು ಯೋಜನೆಗಳಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಕಾಮಗಾರಿಗಳ ಪೈಕಿ ಬಾಕಿ ಇರುವ ಟ್ಯಾಂಕ್ ನಿರ್ಮಾಣ, ಪೈಪ್‌ಲೈನ್ ಅಳವಡಿಕೆ, ವಿದ್ಯುತ್ ಸಂಪರ್ಕ ಸೇರಿದಂತೆ ಇತರೆ ಮುಕ್ತಾಯ ಹಂತದ ಕಾರ್ಯವನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಿ, ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕೊಪ್ಪಳ ವಿಭಾಗದ ಕಾರ್ಯಪಾಲಕ ಅಭಿಯಂತರರಾದ ಮಹೇಶ ಶಾಸ್ತ್ರೀ ಸೇರಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ವಿಭಾಗಗಳ ಎಇಇಗಳು, ಜಿಲ್ಲಾ ನೀರು ಮತ್ತು ನೈರ್ಮಲ್ಯ ಮಿಷನ್ (ಡಿ.ಡಬ್ಲ್ಯು.ಎಸ್.ಎಂ) ಸಮಿತಿಯ ಸದಸ್ಯರು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಬಿಜೆಪಿ ಸುಳ್ಳು ವದಂತಿಗೆ ಕಿವಿಗೊಡಬೇಡಿ ಪಂಚ ಗ್ಯಾರಂಟಿ ನಿಲ್ಲಿಸಲ್ಲ: ಡಾ.ಕಾಮರೆಡ್ಡಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



:ಇನ್ನು ಕೆಲವು ತಿಂಗಳು ಕಳೆದ ಬಳಿಕ ರಾಜ್ಯ ಸರ್ಕಾರ ನೀಡಿರುವ ಪಂಚ ಗ್ಯಾರಂಟಿಗಳು ಬಂದ್ ಆಗಲಿವೆ ಎಂದು ಶಾಸಕ ಗಾಲಿ ಜನಾರ್ದನ್ ರೆಡ್ಡಿ ನೀಡಿರುವ ಹೇಳಿಕೆ ಸತ್ಯಕ್ಕೆ ದೂರವಾದದ್ದು ಎಂದು ಕಾಂಗ್ರೆಸ್ ಹಿರಿಯ ಮುಖಂಡ ಡಾ.ಎಸ್.ಬಿ ಕಾಮರೆಡ್ಡಿ ಬೆಂಡೆಬೆಂಬಳಿ ತಿರುಗೇಟು ನೀಡಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಬಿಜೆಪಿಯ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ ಎಂದಿದ್ದಾರೆ ಯಾವುದೇ ಕಾರಣಕ್ಕೂ ಪಂಚ ಗ್ಯಾರಂಟಿ ಯೊಜನೆಗಳು ನಿಲ್ಲಿಸುವುದಿಲ್ಲ ಎಂದು ಈಗಾಗಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹಾಗೂ ರಾಜ್ಯ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಮ್ ರೇವಣ್ಣ ಭರವಸೆ ನೀಡಿದ್ದಾರೆ.ಕಾಂಗ್ರೆಸ್ ಪಕ್ಷ ಕೊಟ್ಟ ಮಾತಿಗೆ ಎಂದು ತಪ್ಪುವುದಿಲ್ಲ ರಾಜ್ಯದ ಜನತೆಗೆ ಗೊತ್ತು ಆದರೆ ಬಿಜೆಪಿಯ ಕೆಲ ನಾಯಕರು ಕಾಂಗ್ರೆಸ್ ಪಕ್ಷದ ಸಾಧನೆ ಮತ್ತು ಏಳಿಗೆಯನ್ನು ಸಹಿಸದೆ ಇಲ್ಲಸಲ್ಲದ ಹೇಳಿಕೆಗಳನ್ನು ನೀಡಿ ಸಾರ್ವಜನಿಕರಲ್ಲಿ ಗೊಂದಲ ಮೂಡಿಸುತ್ತಿರುವುದು ಸರಿಯಲ್ಲ ರಾಜ್ಯದ ಜನತೆ ಕಾಂಗ್ರೆಸ್ ಪಕ್ಷಕ್ಕೆ ಸಂಪೂರ್ಣವಾಗಿ ಬೆಂಬಲಿಸಿ ಐದು ವರ್ಷಗಳ ಕಾಲ ಉತ್ತಮ ಆಡಳಿ ನಡೆಸಲು ಆಶೀರ್ವದಿಸಿದ್ದಾರೆ.ನಮ್ಮ ಸರ್ಕಾರ ಕೊಟ್ಟ ಮಾತಿನಂತೆ ನಡೆದುಕೊಳ್ಳುತ್ತದೆ ಜನರಲ್ಲಿ ಯಾವುದೇ ಆತಂಕ ಬೇಡ ನೂತನ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ಅಧಿಕಾರ ವಹಿಸಿಕೊಂಡ ನಂತರ ಗ್ರಹಲಕ್ಷ್ಮಿ,ಗೃಹಜೋತಿ ಹಾಗೂ ಇನ್ನಿತರ ಗ್ಯಾರಂಟಿ ಯೋಜನೆಗಳಿಂದ ಪೋಲಾಗುತ್ತಿರುವ ಹಣವನ್ನು ಉಳಿತಾಯ ಮಾಡಲು ಮತ್ತು ಮೃತರು ಹಾಗೂ ಇನ್ನಿತರರ ದಾಖಲೆಗಳು ಇಲ್ಲದವರ ಕುರಿತು ಮತ್ತೊಮ್ಮೆ ಪರಿಶೀಲನೆ ಮಾಡಲು ಹೊಸ ಅರ್ಜಿಗಳನ್ನು ಹಾಕಲು ತಿಳಿಸಿದ್ದಾರೆ ಅಷ್ಟೇ ಪಂಚ ಗ್ಯಾರಂಟಿ ಯೊಜನೆ ಬಂದು ಮಾಡುತ್ತಾರೆ ಎಂದು ಸಾರ್ವಜನಿಕರಲ್ಲಿ ಅಪಪ್ರಚಾರ ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ ಬಿಜೆಪಿ ಆಡಳಿತ ರಾಜ್ಯಗಳಲ್ಲಿ ನಮ್ಮ ಕಾಂಗ್ರೆಸ್ ಪಕ್ಷದ ಪಂಚ ಗ್ಯಾರಂಟಿ ಇನ್ನಿತರ ಜನಪರ ಯೋಜನೆಗಳನ್ನು ನಕಲು ಮಾಡಿದ್ದಾರೆ ಎಂದು ವ್ಯಂಗ್ಯವಾಡಿದ್ದಾರೆ.ಬಿಜೆಪಿ ಪಕ್ಷದವರು ಹತಾಶರಾಗಿ ಪಂಚ ಗ್ಯಾರಂಟಿಗಳು ಬಂದು ಮಾಡುತ್ತಾರೆ ಎಂದು ಸಾರ್ವಜನಿಕರಲ್ಲಿ ಸುಳ್ಳು ವದಂತಿ ಹರಡುಸುತ್ತಿರುವುದು ಸರಿಯಲ್ಲ ಸುಳ್ಳು ಪ್ರಚಾರ ಹಬ್ಬಿಸುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಗುವುದು ಇನ್ನು ಮುಂದೆ ಸಾರ್ವಜನಿಕರು ಯಾವುದೇ ಕಾರಣಕ್ಕೂ ಸುಳ್ಳು ವದಂತಿಗಳಿಗೆ ಕಿವಿಗೂಡಬೇಡಿ ಎಂದು ಕಾಂಗ್ರೆಸ್ ಹಿರಿಯ ಮುಖಂಡ ಡಾ.ಎಸ್.ಬಿ ಕಾಮರೆಡ್ಡಿ ಬೆಂಡೆಬೆಂಬಳಿ ಪತ್ರಿಕಾ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಜೂ 21ರಂದು ಸಾಂವಿಧಾನಿಕ ಮೌಲ್ಯಗಳು, ಭ್ರಾತೃತ್ವ ಕುರಿತು ಯುವಜನ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ ಕುಕನೂರ



ವಿದ್ಯಾರ್ಥಿಗಳು ಹಾಗೂ ಯುವಜನರಲ್ಲಿ ಭಾರತದ ಸಂವಿಧಾನದ ಆಶಯಗಳು, ಸಾಂವಿಧಾನಿಕ ಮೌಲ್ಯಗಳು, ಭ್ರಾತೃತ್ವ, ಸಾಮಾಜಿಕ ನ್ಯಾಯ ಮತ್ತು ವೈಜ್ಞಾನಿಕ ಮನೋಭಾವ ಬೆಳೆಸುವ ಉದ್ದೇಶದಿಂದ "ಸಾಂವಿಧಾನಿಕ ಮೌಲ್ಯಗಳ ಅನುಷ್ಠಾನ ಮತ್ತು ಭ್ರಾತೃತ್ವ ಕುರಿತು ಯುವಕ–ಯುವತಿಯರಿಗಾಗಿ ಯುವಜನ ಶಿಬಿರ" ವನ್ನು ಜೂನ್ 21ರಂದು ಬೆಳಿಗ್ಗೆ 10 ಗಂಟೆಗೆ ತಾಲೂಕಿನ ಕಕ್ಕಿಹಳ್ಳಿ ಗ್ರಾಮದ ಸಾರ್ವಜನಿಕ ಗ್ರಂಥಾಲಯದಲ್ಲಿ ಆಯೋಜಿಸಲಾಗಿದೆ ಎಂದು ಕಾರ್ಯಕ್ರಮದ ಆಯೋಜಕ ಹಾಗೂ ಸಂವಿಧಾನ ಸಂರಕ್ಷಣಾ ವೇದಿಕೆಯ ಸಂಚಾಲಕ ಭೀಮಾಶಂಕರ ಪಾಣೇಗಾಂವ ಅವರು ತಿಳಿಸಿದ್ದಾರೆ.

ಈ ಸಂಬಂಧ ಬುಧವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಎಐಡಿವೈಒ (ಅಖಿಲ ಭಾರತ ಪ್ರಜಾಸತ್ತಾತ್ಮಕ ಯುವಜನ ಸಂಘಟನೆ) ಆಶ್ರಯದಲ್ಲಿ ಹಾಗೂ ಸಂವಿಧಾನ ಸಂರಕ್ಷಣಾ ವೇದಿಕೆ ವತಿಯಿಂದ, ಬಳಗೇರಿ ಗ್ರಾಮ ಪಂಚಾಯತ್ ಸಹಯೋಗದಲ್ಲಿ ಶಿಬಿರ ನಡೆಯಲಿದ್ದು, ಯುವಜನರಲ್ಲಿ ಸಂವಿಧಾನಿಕ ಮೌಲ್ಯಗಳು, ಪ್ರಜಾಸತ್ತಾತ್ಮಕ ಚಿಂತನೆ, ಭ್ರಾತೃತ್ವ ಹಾಗೂ ವೈಜ್ಞಾನಿಕ ಮನೋಭಾವ ಬೆಳೆಸುವ ಉದ್ದೇಶದಿಂದ ವಿವಿಧ ಉಪನ್ಯಾಸಗಳು, ಸಂವಾದಗಳು ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ತಿರುಪತಿ ತಲ್ಲೂರ ಅವರು ಸ್ವಾಗತ ಭಾಷಣ ಮಾಡಲಿದ್ದು, ಬಳಗೇರಿ ಗ್ರಾಮ ಆಡಳಿತ ಅಧಿಕಾರಿ ರಾಣಿ ಹಳ್ಳಿ ಅವರು ನಿರೂಪಣೆ ಮಾಡಲಿದ್ದಾರೆ. ಭೀಮಾಶಂಕರ ಪಾಣೇಗಾಂವ ಅವರು ಪ್ರಾಸ್ತಾವಿಕ ನುಡಿ ಆಡಲಿದ್ದು, ಪತ್ರಕರ್ತ ಚಂದ್ರು ಆರ್. ಭಾನಾಪುರ ಅವರು ಭಾರತದ ಸಂವಿಧಾನದ ಪೀಠಿಕೆಯ ಸಾಮೂಹಿಕ ವಾಚನಕ್ಕೆ ನೇತೃತ್ವ ವಹಿಸಲಿದ್ದಾರೆ.

ಜಾನಪದ ಗಾಯಕಿ ಗೌರಿ ಗೋನಾಳ ಹಾಗೂ ಕೊಪ್ಪಳ ತಂಡದಿಂದ ಸಂವಿಧಾನ ಜಾಗೃತಿ ಗೀತೆಗಳ ಗಾಯನ ನಡೆಯಲಿದೆ. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಡಾ.ಜೀವನ್ ಸಾಬ್ ವಾಲಿಕಾರ (ಬಿನ್ನಾಳ) ಅವರು ಭ್ರಾತೃತ್ವ ಕುರಿತು ಸಂವಾದ ಹಾಗೂ ಗುಂಪು ಚಟುವಟಿಕೆಗಳನ್ನು ನಡೆಸಿಕೊಡಲಿದ್ದಾರೆ.

ಎಐಡಿವೈಒ ಜಿಲ್ಲಾ ಕಾರ್ಯದರ್ಶಿ ಶರಣು ಪಾಟೀಲ್ ಅವರು ಯುವಜನರ ಸಮಸ್ಯೆಗಳು, ಸವಾಲುಗಳು ಮತ್ತು ಪರಿಹಾರಗಳ ಕುರಿತು ಮುಕ್ತ ಚರ್ಚೆ ನಡೆಸಲಿದ್ದಾರೆ. ವೈಜ್ಞಾನಿಕ ಚಿಂತಕರಾದ ಆರ್.ವಿ. ಕಾಮನೂರ ಅವರು "ಪವಾಡ ಬಯಲು–ರಹಸ್ಯ" ಕಾರ್ಯಕ್ರಮದ ಮೂಲಕ ವೈಜ್ಞಾನಿಕ ಮನೋಭಾವದ ಕುರಿತು ಜಾಗೃತಿ ಮೂಡಿಸಲಿದ್ದಾರೆ. ಬಳಿಕ

"ಮಾರ್ಚ್ 22" ಚಲನಚಿತ್ರ ಪ್ರದರ್ಶನ ಹಾಗೂ ಕೋಮು ಸೌಹಾರ್ದತೆ ಕುರಿತು ಸಂವಾದ ನಡೆಯಲಿದೆ.

ಈಗಾಗಲೇ ಶಿಬಿರದಲ್ಲಿ ಭಾಗವಹಿಸಲು 40 ರಿಂದ 50 ಯುವಕ–ಯುವತಿಯರು ನೋಂದಣಿ ಮಾಡಿಕೊಂಡಿದ್ದು, ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ನಡೆಯುತ್ತಿದೆ. ಶಿಬಿರದಲ್ಲಿ ಭಾಗವಹಿಸುವ ಎಲ್ಲರಿಗೂ ಭಾಗವಹಿಸುವಿಕೆಯ ಪ್ರಮಾಣ ಪತ್ರ ವಿತರಿಸಲಾಗುವುದು ಎಂದು ಅವರು ತಿಳಿಸಿದರು.

ಬಳಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಕಕ್ಕಿಹಳ್ಳಿ, ಬಳಗೇರಿ, ಕೋನಾಪುರ, ಹರಿಶಂಕರ ಬಂಡಿ ಹಾಗೂ ಚನ್ನಪ್ಪನಹಳ್ಳಿ ಗ್ರಾಮಗಳ ವಿದ್ಯಾರ್ಥಿಗಳು, ಯುವಕರು, ಯುವತಿಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಶಿಬಿರವನ್ನು ಯಶಸ್ವಿಗೊಳಿಸಬೇಕೆಂದು ಪ್ರಕಟಣೆ ಮೂಲಕ ಅವರು ಮನವಿ ಮಾಡಿದ್ದಾರೆ.

# ಗೋಕರ್ಣದಲ್ಲಿ ತ್ಯಾಜ್ಯ, ಗಟಾರದ ಅವ್ಯವಸ್ಥೆ : ಕುರುಡಾದ ಆಡಳಿತವರ್ಗ

• ಮಲ್ಲಮ್ಮ ನುಡಿ ವಾರ್ತೆಗೋಕರ್ಣ



ದಕ್ಷಿಣದ ಕಾಶಿ ಎಂದೇ ಖ್ಯಾತವಾಗಿರುವ ಶ್ರೀ ಕ್ಷೇತ್ರ ಗೋಕರ್ಣದಲ್ಲಿ ಎಲ್ಲೆಂದರಲ್ಲಿ ಹಸಿರು ತ್ಯಾಜ್ಯಗಳು ಕಂಡುಬರುತ್ತವೆ. ಹಾಗೇ ಗಟಾರ ಕೂಡ ಕುಸಿದು ಹೋಗಿದ್ದರು ಅದನ್ನು ದುರಸ್ಥಿಗೊಳಿಸುವ ಪ್ರಯತ್ನ ಆಗುತ್ತಿಲ್ಲ. ಒಮ್ಮೆ ಜೋರಾಗಿ ಮಳೆ ಬಂದರೆ ನೀರು ಸರಾಗವಾಗಿ ಹರಿದುಹೋಗಲಾರದೇ ರಸ್ತೆಯ ಮೇಲೆ ನಿಲ್ಲುತ್ತದೆ. ಈಗ ಪ್ರಥಮ ಮಳೆಯಲ್ಲಿಯೇ ಕೊಳಚೆ ನೀರು ಶ್ರೀ ಮಹಾಬಲೇಶ್ವರನ ಆತ್ಮಲಿಂಗದವರೆಗೆ ನುಗ್ಗಿರುವುದು ಖೇದಕರ ಸಂಗತಿ.ಈ ಸಮಸ್ಯೆ ಇಂದು ನಿನ್ನೆಯದಲ್ಲ, ಹಲವು ದಶಕಗಳಿಂದ ನಡೆದುಕೊಂಡು ಬಂದಿದೆ. ಗೋಕರ್ಣವೆಂದರೆ ಹೊರಗಿನವರಿಗೆ ಧಾರ್ಮಿಕ ಕ್ಷೇತ್ರ, ಪ್ರವಾಸಿ ತಾಣ ಎಂದು ಕಣ್ಮುಂದೆ ಬರುತ್ತದೆ. ಆದರೆ ಇಲ್ಲಿ ಬಂದು ನೋಡಿದರೆ ಎಲ್ಲೆಂದರಲ್ಲಿ ಕಸದ ತ್ಯಾಜ್ಯಗಳು ನೀರು ಹರಿಯಲಾಗದೇ ಚರಂಡಿಗಳು, ಗಬ್ಬುವಾಸನೆ ಬರುವ ಕೋಣೆನಾಲ ಹೀಗೆ ಹತ್ತು ಹಲವು ಸಮಸ್ಯೆಗಳು ಎದ್ದು ಕಾಣುತ್ತವೆ.

ಬಸ್ ನಿಲ್ದಾಣದ ಆವರಣದಲ್ಲಿಯೇ ಸ್ನಾನಗೃಹವಿದ್ದು, ಹಣ ಪಡೆದು ಸ್ನಾನ ಮಾಡಬೇಕು. ಆದರೆ ಬಸ್ ನಿಲ್ದಾಣದ ಆವರಣದಲ್ಲಿ ಇರುವ ಬಾವಿಯಲ್ಲಿ ಪ್ಲಾಸ್ಟಿಕ್ ತ್ಯಾಜ್ಯದ ರಾಶಿ ಕಂಡುಬರುತ್ತದೆ. ಅಲ್ಲಿಂದಲೇ ಪಂಪ್ ಮೂಲಕ ನೀರನ್ನು ಸ್ನಾನಗೃಹಕ್ಕೆ, ಶೌಚಾಲಯಕ್ಕೆ ಬಿಡಲಾಗುತ್ತದೆ. ಇಲ್ಲಿ ಸ್ನಾನ ಮಾಡಿದವರ ಪರಿಸ್ಥಿತಿ ಮುಂದೇನಾಗಲಿದೆಯೋ ಎಂದು ಶ್ರೀ ಮಹಾಬಲನೇ ಹೇಳಬೇಕು. ಗೋಕರ್ಣದಲ್ಲಿ ಇಂತು ಹತ್ತು ಹಲವರು ಸಮಸ್ಯೆಗಳು ತಾಂಡವವಾಡುತ್ತಿದ್ದರು ಕೂಡ ಯಾವೊಬ್ಬ ಅಧಿಕಾರಿಯೂ ಇತ್ತ ತಲೆ ಹಾಕುತ್ತಿಲ್ಲ. ಜಿಲ್ಲಾಡಳಿತ, ತಾಲೂಕು ಆಡಳಿತ, ಸ್ಥಳೀಯ ಗ್ರಾಮ ಪಂಚಾಯತವರೆಗೆ ಇಲ್ಲಿಯ ಸ್ಥಿತಿಗತಿಗಳು ತಿಳಿದಿದೆ. ಈ ಭಾಗದ ಶಾಸಕ ದಿನಕರ ಶೆಟ್ಟಿ ಕೂಡ ಈ ಬಗ್ಗೆ ಗಂಭೀರವಾಗಿ ಇದನ್ನು ಪರಿಗಣಿಸುತ್ತಿಲ್ಲ ಎಂಬ ಆರೋಪ ಕೇಳಿಬರುತ್ತಿದೆ. ಗೋಕರ್ಣಕ್ಕೆ ಪ್ರಾಧಿಕಾರ ರಕ್ಷಣೆಯಾಗಬೇಕು ಎಂಬ ಬೇಡಿಕೆ ಸ್ಥಳೀಯರದ್ದಾಗಿ. ಆದರೆ ಅದು ಇನ್ನುವರೆಗೂ ಜಾರಿಗೊಂಡಿಲ್ಲ. ಗೋಕರ್ಣಕ್ಕೆ ಪ್ರತಿದಿನ ಸಾವಿರಾರು ಭಕ್ತರು ಹಾಗೂ ಪ್ರವಾಸಿಗರು ಆಗಮಿಸುತ್ತಲೇ ಇರುತ್ತಾರೆ. ಆದರೆ ಇಲ್ಲಿ ಮೂಲ ಸೌಕರ್ಯ ಎನ್ನುವುದು ಕೈಕಾಲು ಮುರಿದುಕೊಂಡು ಬಿದ್ದಿದೆ. ಇಲ್ಲಿಗೆ ಬರುವವರು ಬಹುತೇಕ ಇಲ್ಲಿಯ ನೀರಿಗಿಂತ ಹಣ ಕೊಟ್ಟು ಬಾಟಲಿ ನೀರನ್ನು ಖರೀದಿಸುವಂತಾಗಿದೆ. ಒಟ್ಟಿನಲ್ಲಿ ಗೋಕರ್ಣದ ಅಭಿವೃದ್ಧಿ ಮಾತ್ರ ಶೂನ್ಯ ಎನ್ನುವಂತಾಗಿದೆ.

# 29 ಗ್ರಾಮಗಳಲ್ಲಿ ಮೊಹರಂ ಹಬ್ಬ ಸಾರ್ವಜನಿಕವಾಗಿ ಗುಂಪು ಗುಂಪಾಗಿ ಆಚರಣೆ ನಿಷೇಧ: ಪೂವಿತಾ ಎಸ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 17 : ರಾಯಚೂರು ಜಿಲ್ಲೆಯ ಸಿಂಧನೂರು, ಮಾನವಿ, ಸಿರವಾರ, ದೇವದುರ್ಗ ಹಾಗೂ ಮಸ್ಕಿ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪು ಗುಂಪಾಗಿ ಆಚರಿಸುವುದು ಹಾಗೂ ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ಕರ್ನಾಟಕ ಪೋಲೀಸ್ ಕಾಯ್ದೆ 1963ರ ಕಲಂ 35ರನ್ವಯ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಪೂವಿತಾ ಎಸ್. ಅವರು ಆದೇಶ ಹೊರಡಿಸಿದ್ದಾರೆ.



ಜಿಲ್ಲೆಯ ಸಿಂಧನೂರು ಪೊಲೀಸ್ ಠಾಣೆ ವ್ಯಾಪ್ತಿಯ ಗಿಣಿವಾರ, ಉಪ್ಪಳ, ತುರ್ವಿಹಾಳ ಪೊಲೀಸ್ ಠಾಣೆ ವ್ಯಾಪ್ತಿಯ ನಿಡಿಗೋಳ-ತಿಡಿಗೋಳ, ಹತ್ತಿಗುಡ್ಡ, ಕುರಕುಂದಾ, ಚಿಕ್ಕಬೇರ್ಗಿ, ಬಳಗಾನೂರು ಪೊಲೀಸ್ ಠಾಣೆ ವ್ಯಾಪ್ತಿಯ ಉದ್ಬಳ್ (ಯು), ರಾಗಲಪರ್ವಿ, ಮಾನವಿ ಪೊಲೀಸ್ ಠಾಣೆ ವ್ಯಾಪ್ತಿಯ ನಂದಿಹಾಳ, ಜಾನೇಕಲ್, ಮದ್ಲಾಪೂರು, ಜಾಗೀರ ಪನ್ನೂರು, ಮಲ್ಲಿನ ಮಡಗು, ಸಿರವಾರ ಪೊಲೀಸ್ ಠಾಣೆ ವ್ಯಾಪ್ತಿಯ ಸಿರವಾರ ಪಟ್ಟಣ, ಕಡದಿನ್ನಿ, ಬೊಮ್ಮನಾಳ, ಕವಿತಾಳ ಪೊಲೀಸ್ ಠಾಣೆ ವ್ಯಾಪ್ತಿಯ ಕವಿತಾಳ ಪಟ್ಟಣ, ಹಿರೆಬಾದರದಿನ್ನಿ, ಬಾಗಲವಾಡ, ಅಮೀನಗಡ, ಗೂಗೆಬಾಳ, ಮಸ್ಕಿ ಪೊಲೀಸ್ ಠಾಣೆ ವ್ಯಾಪ್ತಿಯ ತಲೇಖಾನ್, ಸಂತೆಕಲ್ಲೂರು, ಮುಸಲಿ ಕಾರಲಕುಂಟೆ, ಜಾಲಹಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯ ಚಿಂಚೋಡಿ, ಗಬ್ಬೂರು ಪೊಲೀಸ್ ಠಾಣೆ ವ್ಯಾಪ್ತಿಯ ಖಾನಾಪೂರು, ಬುದ್ದಿನ್ನಿ, ರಾಮದುರ್ಗ, ಹಿರೇಬೂದೂರು ಸೇರಿದಂತೆ ಒಟ್ಟು 29 ಗ್ರಾಮಗಳಲ್ಲಿ ಸಾರ್ವಜನಿಕರ ಶಾಂತಿ, ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ ದಿನಾಂಕ:17-06-2026 ರಿಂದ 26-06-2026ರವರೆಗೆ ಆಚರಿಸಲಿರುವ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಗುಂಪು ಗುಂಪಾಗಿ ಆಚರಿಸುವುದು ಹಾಗೂ ಈ ಗ್ರಾಮಗಳಲ್ಲಿ ಸಾರ್ವಜನಿಕವಾಗಿ ಮೆರವಣಿಗೆಯನ್ನು ನಡೆಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾದಂಡಾಧಿಕಾರಿಗಳಾದ ಪೂವಿತಾ ಎಸ್. ಅವರು ಆದೇಶದಲ್ಲಿ ತಿಳಿಸಿದ್ದಾರೆ.

# ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ ಸಿಂಗ್ ರಾಯಚೂರು ಜಿಲ್ಲಾ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು



ಜೂ 17 : ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ.ವೆಂಕಟ್ ಸಿಂಗ್ ಅವರು ಜೂನ್ 19 ಹಾಗೂ 20ರಂದು ರಾಯಚೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದಾರೆ.ಜೂನ್ 19ರ ಸಂಜೆ ಕಲಬುರಗಿಯಿಂದ ನಿರ್ಗಮಿಸಿ ರಾತ್ರಿ ರಾಯಚೂರಿಗೆ ಆಗಮಿಸಿ ವಾಸ್ತವ್ಯ ಮಾಡಲಿದ್ದಾರೆ. ಜೂನ್ 20ರ ಬೆಳಿಗ್ಗೆ 10ಗಂಟೆಗೆ ರಾಯಚೂರು ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾದ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಆಯೋಜಿಸಿರುವ ಕಾರ್ಯಗಾರದಲ್ಲಿ ಆಯಾ ಇಲಾಖೆ ಅಧಿಕಾರಿ/ಸಿಬ್ಬಂದಿಯವರೊಂದಿಗೆ ಚರ್ಚಿಸುವ ಸಂವಾದ ಕಾರ್ಯಗಾರದಲ್ಲಿ ಭಾಗವಹಿಸುವರು.ಅಂದು ಮಧ್ಯಾಹ್ನ 1.30ಗಂಟೆಗೆ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸುವರು. ನಂತರ ರಾಯಚೂರಿನಲ್ಲಿ ವಾಸ್ತವ್ಯ ಮಾಡಲಿದ್ದಾರೆ.ಜೂನ್ 21ರ ಬೆಳಿಗ್ಗೆ 10ಗಂಟೆಗೆ ರಾಯಚೂರಿನಿಂದ ನಿರ್ಗಮಿಸಿ, ಕೇಂದ್ರ ಸ್ಥಾನ ಕಲಬುರಗಿಗೆ ಮರು ಪ್ರಯಾಣ ಬೆಳೆಸುವರು ಎಂದು ಆಯುಕ್ತರ ಆಪ್ತ ಸಹಾಯಕರಾದ ಶಿವಾನಂದ ಗು.ಬಿರಾದಾರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಕ್ಕಳನ್ನು ಮೊಬೈಲ್‌ನಿಂದ ದೂರವಿಡಿ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 17 : ಮೊಬೈಲ್ ಬಳಕೆಯ ಅಭ್ಯಾಸದಿಂದ ಸಮಯ ಮತ್ತು ಸೃಜನಶೀಲ ಸಾಮರ್ಥ್ಯವನ್ನು ಹಾಳು ಮಾಡುತ್ತಿದ್ದು, ಮೊಬೈಲ್ ಬಳಕೆಯ ಅಭ್ಯಾಸದಿಂದ ಮಕ್ಕಳನ್ನು ದೂರ ಇಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕಿ ಶರಣಮ್ಮ ಆರ್. ಕಾರಕನೂರು ಅವರು ಹೇಳಿದರು.

ಜೂನ್ 16ರ ಮಂಗಳವಾರ ದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ರಾಯಚೂರು, ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ, ಶಿಶು ಅಭಿವೃದ್ಧಿ ಯೋಜನೆ ರಾಯಚೂರು ಹಾಗೂ ಶಾಲಾ ಮತ್ತು ಶಿಕ್ಷಣ ಇಲಾಖೆ ರಾಯಚೂರು ಇವರ ಸಹಯೋಗದಲ್ಲಿ ಬಾಲವಿಕಾಸ ನಡಿಗೆ ಪಾಲಕರ ಕಡೆಗೆ ಒಂದು ದಿನ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ, ಅವರು ಮಾತನಾಡಿದರು.

ಮೊಬೈಲ್‌ನ ಅತಿಯಾದ ಬಳಕೆಯಿಂದ ಕಣ್ಣು ಮತ್ತು ಮಿದುಳಿನ ಮೇಲೆ ವ್ಯತಿರಿಕ್ತ ಪರಿಣಾಮ ಉಂಟಾಗುತ್ತಿದೆ. ಎಂದು ತಜ್ಞರ ವರದಿಗಳು ಹೇಳುತ್ತಿವೆ. ದೈಹಿಕ ಮತ್ತು ಮಾನಸಿಕ ಸಮತೋಲನಕ್ಕೆ ಮೊಬೈಲ್ ಬಳಕೆ ಅಡ್ಡಿಯಾಗುತ್ತಿದೆ. ಹಾಗಾಗಿ ಪೋಷಕರು ಮಕ್ಕಳ ಕೈಗೆ ಸಿಗದಂತೆ ನೋಡಿಕೊಳ್ಳಬೇಕು. ವಯಸ್ಕರು ಕೂಡ ಅಗತ್ಯ ಮೀರಿ ಮೊಬೈಲ್ ಬಳಸಬಾರದು ಎಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ರಾಯಚೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಂಜುನಾಥ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧೀಕ್ಷರು ದರ್ಜೆ-2ರ ಚಾಮರಾಜ, ಸಂಪನ್ಮೂಲ ವ್ಯಕ್ತಿಗಳಾದ ಭರತ್ ಕುಮಾರ್ ಚಂದನಕರ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಸುದರ್ಶನ, ಸಕಲ ಕೌಶಲ್ಯ ಅಧಿಕಾರಿ ಶಾಂತಾ, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ಯೋಜನಾ ಸಂಯೋಜಕ ಮೋಹನ ಕುಮಾರ್, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಜಂಡರ್ ತಜ್ಞ ಗಿರಿಜವ್ವ ರಾಯಚೂರು, ಜಿಲ್ಲಾ ಬಾಲ ಭವನ ಕಛೇರಿ ಸಹಾಯಕಿ ತಾರಾ ಅವರು ಸೇರಿದಂತೆ ಇತರರು ಇದ್ದರು.ರಾಯಚೂರಿನ ಶಿಶು ಅಭಿವೃದ್ಧಿ ಯೋಜನೆಯ ಮೇಲ್ವಿಚಾರಕಿ ಮಲ್ಲಮ್ಮ ಅವರು ಪ್ರಾರ್ಥನೆ ಗೀತೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಕಾರ್ಯಕ್ರಮದ ಜಿಲ್ಲಾ ಸಂಯೋಜಕರಾದ ದೀಪಾ ಅವರು ನಿರೂಪಣೆಯನ್ನು ನೇರವೇರಿಸಿದರು.



ರಾಯಚೂರು: ಬೆಂಗಳೂರಿನ ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ದೀಪಾಶ್ರೀ ಕೆ. ಅವರು ಇತ್ತೀಚಿಗೆ ರಾಯಚೂರು ಜಿಲ್ಲೆಗೆ ಅಗಮಿಸಿ ಜಿಲ್ಲೆಯಲ್ಲಿ ನಿಗಮದಿಂದ ಸಾಲ ಸೌಲಭ್ಯ ಪಡೆದ ಫಲಾನುಭವಿಗಳ ಘಟಕಗಳನ್ನು ಪರಿಶೀಲನೆ ಮಾಡಿ, ಫಲಾನುಭವಿಗಳಿಗೆ ಪಡೆದ ಸಾಲವನ್ನು ಸದುಪಯೋಗಪಡಿಸಿಕೊಂಡು ನಿಯಮಿತವಾಗಿ ಸಾಲದ ಮರು ಪಾವತಿಯನ್ನು ಮಾಡುವಂತೆ ಸೂಚಿಸಿದರು.ಇದೇ ಸಂದರ್ಭದಲ್ಲಿ ರಾಯಚೂರು ತಾಲೂಕು ಎಡಿಓ ಸುಧಾಕರ್, ರಮೇಶ ಸೇರಿದಂತೆ ಇತರರು ಇದ್ದರು.

# ಮೊಹರಂ ಹರಾಜು ಪ್ರಕ್ರಿಯೆ ನೆಲ ಬಾಡಿಗೆ ಯಶಸ್ವಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಇಲ್ಲಿನ ಮೊಹರಂ ಆಚರಣೆಯ ಅಂಗಡಿ-ಮುಂಗಟ್ಟು,ಭೂ ಬಾಡಿಗೆ ಹರಾಜು ಪ್ರಕ್ರಿಯೆಯು ಪುರಸಭೆ ಮುಖ್ಯಾಧಿಕಾರಿ ಪ್ರವೀಣಕುಮಾರ ಬೋಗಾರ್ ನೇತೃತ್ವದಲ್ಲಿ ಯಶಸ್ವಿಯಾಗಿ ಮಂಗಳವಾರ ಜರುಗಿತು.ಪುರಸಭೆ ಸಭಾಭವನದಲ್ಲಿ ಜರುಗಿದ ಹರಾಜು ಪ್ರಕ್ರಿಯೆಯಲ್ಲಿ ಒಟ್ಟು 12 ಬಿಡ್‌ದಾರರು ಭಾಗವಹಿಸಿದ್ದರು. ಕಳೆದ ಎರಡು ಬಾರಿ ಬಿಡ್‌ದಾರರ ಅಸಹಕಾರದಿಂದ ನಿಗದಿತ ಮೊತ್ತ ತಲುಪದ ಕಾರಣ ಹರಾಜು ಪ್ರಕ್ರಿಯೆ ಸ್ಥಗಿತಗೊಂಡಿತ್ತು. ಈ ಬಾರಿ ಸ್ಪರ್ಧಾತ್ಮಕ ಬಿಡ್‌ನೊಂದಿಗೆ ಹರಾಜು ಯಶಸ್ವಿಯಾಗಿ ಪೂರ್ಣಗೊಂಡಿತು. ಹರಜು ಪ್ರಕ್ರಿಯೆ ರೂ. 2ಲಕ್ಷ 50ಸಾವಿರ ಪ್ರಾರಂಭಗೊಂಡಿತು. ಮೊಹಮ್ಮದ ರಸೂಸಾಬ್ ಎಂಬುವರಿಗೆ ಹಚ್ಚಿನ ಮೊತ್ತ ರೂ. 5 ಲಕ್ಷಕ್ಕೆ ಕೈ ಸೇರಿತು. ಬಳಿಕ ಸಭೆಯಲ್ಲಿ ಮುಖ್ಯಾಧಿಕಾರಿ ಪ್ರವೀಣ್ ಕುಮಾರ ಬೋಗಾರ ಮಾತನಾಡಿ ಬಿಡ್ದ್ ದಾರರು ಸಾರ್ವಜನಿಕರಿಗೆ ಹೆಚ್ಚಿನ ದರ ವಸೂಲಿ ಮಾಡಬಾರದು. ಪ್ರತಿ ಅಂಗಡಿಯಲ್ಲಿ ದರ ಪಟ್ಟಿಗಳನ್ನು ಹಾಕಬೇಕು. ಎಲ್ಲಾ ಅಂಗಡಿ ಮುಗ್ಗಟ್ಟುದಾರರು ಕಡ್ಡಾಯವಾಗಿ ನಿಯಮಗಳನ್ನು ಪಾಲಿಸಬೇಕು ಹಾಗೂ ಜೋಕಾಲಿ ಕಡಿಮೆ ದರದ ಬಿಡ್ ವಿಷಯವನ್ನು ಸಹಾಯಕ ಆಯುಕ್ತರ ಗಮನಕ್ಕೆ ತರಲಾಯಿತು. ಮುಂದಿನ ದಿನ ತಿಳಿಸಲಾಗುವುದು ಎಂದು ತಿಳಿಸಿದರು. ಜೋಕಾಲಿ ಹರಾಜಿನಲ್ಲಿ ಇಬ್ಬರು ಭಾಗವಹಿಸಿದ್ದರು. ನಿಗದಿತ ದರಕ್ಕಿಂತ ಕಡಿಮೆ ಮೊತ್ತಕ್ಕೆ ಬಿಡ್ ಹರಾಜು ಕೇಳಿದ್ದರಿಂದ, ಜೋಕಾಲಿ ಹರಾಜು ಮತ್ತೆ ಮುಂದೂಡಲಾಯಿತು. ಕೋಟೆ ಗೋಡೆ ಪಕ್ಕದಲ್ಲಿ ಜೋಕಾಲಿಗಳ ಬದಲಾಗಿ ವಾಣಿಜ್ಯ ಮಳಿಗೆಗಳು ಹಾಗೂ ಸ್ತ್ರೀಶಕ್ತಿ ಸಂಘಗಳ ಉತ್ಪನ್ನಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಿದರೆ ಸಾರ್ವಜನಿಕರಿಗೆ ಅನುಕೂಲವಾಗುವುದರ ಜೊತೆಗೆ ಪುರಸಭೆಗೆ ಹೆಚ್ಚಿನ ಆದಾಯವೂ ಲಭಿಸಲಿದೆ ಎಂಬ ಅಭಿಪ್ರಾಯಗಳು ಸಾರ್ವಜನಿಕ ವಲಯದಲ್ಲಿ ಕೇಳಿಬಂದಿವೆ. ಈ ಕುರಿತು ಅಧಿಕಾರಿಗಳ ನಿರ್ಧಾರದತ್ತ ಇದೀಗ ಎಲ್ಲರ ಚಿತ್ತ ನೆಟ್ಟಿದೆ. ಹರಾಜು ಪ್ರಕ್ರಿಯೆ ಪುರಸಭೆ ಸಿಬ್ಬಂದಿ ನಿಸಾರ್ ಅಹಮದ್ ಸಭೆಯಲ್ಲಿ ಓದಿ ಹೇಳಿದರು. ವ್ಯವಸ್ಥಾಪ ಜಗದೀಶ ಎ. ಬಿರಾದಾರ, ಇಂಜಿನಿಯರ ಪ್ರಿಯಾಂಕ, ಕಂದಾಯ ವಿಭಾಗ ಅಂಥೋನಿರಾಜ, ಸಂಪತ್ತ ಕುಮಾರ, ವಿರೇಶ, ಮಹ್ಮದ ಜಿಲಾನಿ, ಬಾಬಾ, ವೆಂಕಟೇಶ, ಶಿವು ಸೇರಿದಂತೆ ಇತರರಿದ್ದರು.

# ಪರ್ಯಾಯ ರಸಗೊಬ್ಬರ ಬಳಕೆಗೆ ಸಲಹೆ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಜೂ 17 : ಡಿಎಪಿ ಮತ್ತು ಯೂರಿಯಾ ರಸಗೊಬ್ಬರಗಳಿಗೆ ಪರ್ಯಾಯವಾಗಿ ರೈತರು ಸಂಯುಕ್ತ ಗೊಬ್ಬರಗಳನ್ನು ಬಳಸಬೇಕು ಎಂದು ರಾಯಚೂರು ಕೃಷಿ ಇಲಾಖೆ ಉಪ ನಿರ್ದೇಶಕರಾದ ನಹೀಂ ಹುಸೇನ್ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.




ಜೂನ್ 17ರ ಬುಧವಾರ ದಂದು ನಗರದ ದಿ ರಾಯಚೂರು ಬಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರಿ ಸಂಘ ನಿಯಮಿತ ರಾಯಚೂರಿಗೆ ಭೇಟಿ ನೀಡಿ, ರೈರಿಗೆ ಮಾಹಿತಿ ನೀಡಿದರು.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೆಂಟು ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ ಜಲಜನಕ ಮತ್ತು ಆಮ್ಲಜನಕ ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು ಕರೆಯಲಾಗುತ್ತದೆ. ಕ್ಯಾಲ್ಸಿಯಂ, ಮೆಗ್ನಿಷಿಯಂ, ಗಂಧಕ, ಕಬ್ಬಿಣ, ಜಿಂಕ್ ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಬ್ಡಿನಂ, ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು. ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶ ಕೊರತೆಯಾದರೂ ಸಸ್ಯಗಳು ಸಮೃದ್ಧಿಯಾಗಿ ಬೆಳೆಯಲಾರವು. ಇದರಿಂದ ನೀರಿಕ್ಷಿತ ಇಳುವರಿ ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ರೈತರು ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿಎಪಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿದ್ದು, ಪೊಟ್ಯಾಷ್ ಲಭ್ಯವಿರುವುದಿಲ್ಲ. ಪೊಟ್ಯಾಷ್ ಅಂಶವು ಬೆಳೆಗಳಿಗೆ ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿದೆ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ ಸಾರಜನಕ, ರಂಜಕ ಮತ್ತು ಪೊಟ್ಯಾಶ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬೇಕು ಎಂದು ಸಲಹೆ ನೀಡಿದ್ದಾರೆ.

ಯೂರಿಯಾ ಗೊಬ್ಬರಕ್ಕೆ ಪರ್ಯಾಯವಾಗಿ ಸಾರಜನಿಕ ಯುಕ್ತ ಗೊಬ್ಬರಗಳಾದ ಅಮೋನಿಯಂ ಸಲ್ಫೇಟ್, ನೈಟ್ರೇಟ್ ಮತ್ತು ಕ್ಯಾಲ್ಸಿಯಂ ಅಮೋನಿಯಂ ನೈಟ್ರೇಟ್ ಅನ್ನು ಬಳಸಬಹುದು ಹಾಗೂ ಆಂಕ ರಸಗೊಬ್ಬರ ಪರ್ಯಾಯಾಗಿ ಸಂಯುಕ್ತ ರಸಗೊಬ್ಬರ ಗಳಾದ 10.26.26, 14.34.14, 20.20.0.13, 15.15.15 ಗಳನ್ನು ಬಳಕೆ ಮಾಡಲು ನೆರೆದಿದ್ದ ರೈತರಿಗೆ ಸಲಹೆ ನೀಡಿದರು.

ನ್ಯಾನೊ ಯೂರಿಯಾ ಮತ್ತು ನ್ಯಾನೊ ಯೂರಿಯಾ ಪ್ಲಸ್ ಅನ್ನು ಎಲೆಗಳ ಮೇಲೆ ಸಿಂಪಡಣೆ ಕೂಡ ಮಾಡಬಹುದಾಗಿದೆ ಎಂದರು.

ಇಲಾಖೆಯಲ್ಲಿ ವಿವಿಧ ಹಂತಗಳಲ್ಲಿ ಜರುಗುವ ತರಬೇತಿಗಳಲ್ಲಿ ಹಾಗೂ ಕಾರ್ಯಾಗಾರಗಳಲ್ಲಿ ರೈತರಿಗೆ ಹಾಗೂ ರಸಗೊಬ್ಬರ ಮಾರಾಟಗಾರರಿಗೆ ಅರಿವು ಮೂಡಿಸಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರಾಯಚೂರು ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ದೀಪಾ ಕುಲಕರ್ಣಿ ಸೇರಿದಂತೆ ಕೃಷಿ ಇಲಾಖೆಯ ವಿವಿಧ ಅಧಿಕಾರಿಗಳು, ದಿ ರಾಯಚೂರು ಬಕ್ಕಲುತನ ಹುಟ್ಟುವಳಿ ಮಾರಾಟ ಹಾಗೂ ಸಂಸ್ಕರಣ ಸಹಕಾರಿ ಸಂಘ ನಿಯಮಿತದ ಅಧಿಕಾರಿ, ಸಿಬ್ಬಂದಿಗಳು ಹಾಗೂ ರೈತರು ಇದ್ದರು.

# ಪಂಚಮಸಾಲಿ ಸಮಾಜಕ್ಕೆ ಸಚಿವ ಸ್ಥಾನದ ಬದಲಿಗೆ 2ಎ ಮೀಸಲಾತಿ ನೀಡಿ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ




ಜೂ.17: ಪಂಚಮಸಾಲಿ ಲಿಂಗಾಯತ ಸಮುದಾಯದ ಬಹುದಿನಗಳ ಪ್ರಮುಖ ಬೇಡಿಕೆಯಾದ 2ಎ ಮೀಸಲಾತಿಯನ್ನು ರಾಜ್ಯ ಸರ್ಕಾರ ತಕ್ಷಣ ಜಾರಿಗೊಳಿಸಬೇಕು ಎಂದು ಪಂಚಮಸಾಲಿ ಮುಖಂಡರು ಹಾಗೂ ಎಪಿಎಂಸಿ ನಿರ್ದೇಶಕರಾದ ರುದ್ರಗೌಡ ಪಾಟೀಲ್ ಪಟ್ಟಣದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿರು ಪಂಚಮಸಾಲಿ ಸಮುದಾಯಕ್ಕೆ ಸಚಿವ ಸ್ಥಾನ ಅಥವಾ ಯಾವುದೇ ರಾಜಕೀಯ ಹುದ್ದೆಗಳ ಅವಶ್ಯಕತೆ ಇಲ್ಲ. ಸಮಾಜದ ಶೈಕ್ಷಣಿಕ, ಸಾಮಾಜಿಕ ಮತ್ತು ಆರ್ಥಿಕ ಅಭಿವೃದ್ಧಿಗೆ ಅಗತ್ಯವಿರುವ 2ಎ ಮೀಸಲಾತಿಯೇ ಸಮುದಾಯದ ನ್ಯಾಯಸಮ್ಮತ ಹಕ್ಕು ಎಂದು ಹೇಳಿದರು.ವೀರಶೈವ ಲಿಂಗಾಯತ ಸಮುದಾಯದಲ್ಲಿ ಸುಮಾರು 90 ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಪಂಚಮಸಾಲಿ ಸಮುದಾಯವು ಹಲವು ವರ್ಷಗಳಿಂದ 2ಎ ಮೀಸಲಾತಿಗಾಗಿ ಹೋರಾಟ ನಡೆಸುತ್ತಿದೆ. ಈ ಹಿಂದೆ ಬಸವ ಜಯ ಮೃತಾಂಜಯ ಸ್ವಾಮೀಜಿ ಅವರ ನೇತೃತ್ವದಲ್ಲಿ ಕೂಡಲಸಂಗಮದಿಂದ ಬೆಂಗಳೂರುವರೆಗೆ ಸುಮಾರು 740 ಕಿಲೋಮೀಟರ್ ಪಾದಯಾತ್ರೆ ನಡೆಸಿದರೂ ಸರ್ಕಾರ ನೀಡಿದ ಭರವಸೆಗಳು ಇನ್ನೂ ಸಂಪೂರ್ಣ ಜಾರಿಯಾಗಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಪ್ರಸ್ತುತ ರಾಜ್ಯ ಸಚಿವ ಸಂಪುಟದಲ್ಲಿ ಪಂಚಮಸಾಲಿ ಸಮುದಾಯದ ಯಾರಿಗೂ ಸಚಿವ ಸ್ಥಾನ ನೀಡಬೇಕೆಂಬ ಬೇಡಿಕೆ ಇಲ್ಲ. ಸಮಾಜದ ಹಿಂದುಳಿದ ಸ್ಥಿತಿಯನ್ನು ಪರಿಗಣಿಸಿ 2ಎ ಮೀಸಲಾತಿ ನೀಡುವುದು ಸರ್ಕಾರದ ಆದ್ಯ ಕರ್ತವ್ಯವಾಗಬೇಕು ಎಂದು ಒತ್ತಾಯಿಸಿದರು.ರಾಜ್ಯದ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರದಲ್ಲಿ ಪಂಚಮಸಾಲಿ ಸಮುದಾಯದ 11 ಶಾಸಕರು ಇದ್ದು, ಕಳೆದ 18 ವರ್ಷಗಳಿಂದ ಕಾಂಗ್ರೆಸ್ ಪಕ್ಷಕ್ಕೆ ಸಮಾಜ ಹೆಚ್ಚಿನ ಬೆಂಬಲ ನೀಡುತ್ತಿದೆ. ಸಚಿವ ಸಂಪುಟ ವಿಸ್ತರಣೆ ಅಥವಾ ರಾಜಕೀಯ ಸಮೀಕರಣಗಳಿಗಿಂತ ಸಾಮಾಜಿಕ ನ್ಯಾಯ ಮತ್ತು ಸಮುದಾಯದ ಹಕ್ಕು ಮುಖ್ಯ ಎಂದು ಹೇಳಿದರು.

ಪಂಚಮಸಾಲಿ ಸಮಾಜದ ಜನರು ಹುದ್ದೆಗಳಿಗಿಂತ ತಮ್ಮ ಮಕ್ಕಳ ಭವಿಷ್ಯಕ್ಕಾಗಿ 2ಎ ಮೀಸಲಾತಿಯನ್ನು ಬಯಸುತ್ತಿದ್ದಾರೆ. ಸರ್ಕಾರ ಯಾವುದೇ ವಿಳಂಬ ಮಾಡದೆ ಪಂಚಮಸಾಲಿ ಸಮುದಾಯವನ್ನು 2ಎ ಮೀಸಲಾತಿ ವ್ಯಾಪ್ತಿಗೆ ಸೇರಿಸಿ ಆದೇಶ ಹೊರಡಿಸಬೇಕು ಎಂದು ಆಗ್ರಹಿಸಿದರು.ಸರ್ಕಾರ ಶೀಘ್ರದಲ್ಲಿ ಸ್ಪಷ್ಟ ನಿರ್ಧಾರ ಕೈಗೊಳ್ಳದಿದ್ದಲ್ಲಿ, ಸಮಾಜದ ಸ್ವಾಮೀಜಿಗಳು ಹಾಗೂ ಹಿರಿಯರ ಮಾರ್ಗದರ್ಶನದಲ್ಲಿ ರಾಜ್ಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಈ ಸಂದರ್ಭದಲ್ಲಿ ಸಮಾಜದ ಯುವ ಮುಖಂಡರಾದ ಅಮರೇಶ್ ಗುಂಡಸಾಗರ, ವೀರೇಶ್ ತುಪ್ಪದ ಖೈರವಾಡಗಿ, ಬಸವರಾಜ್, ಶರಣಬಸವ ಕಾಳಾಪುರ ಹಾಗೂ ಶರಣಬಸವ ಮೇಟಿ (ಚಿಕ್ಕ ಹೆಸರೂರು) ಉಪಸ್ಥಿತರಿದ್ದರು

# ಗೊಬ್ಬರ ಕೃತಕ ಅಭಾವ, ಕಳಪೆ ಬೀಜ ಮಾರಾಟಗಾರರ ವಿರುದ್ಧ ಕ್ರಮಕ್ಕೆ ಕರವೇ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜೂ.17: ತಾಲೂಕಿನಾದ್ಯಂತ ರಸಗೊಬ್ಬರಗಳ ಕೃತಕ ಅಭಾವ ಸೃಷ್ಟಿಸಿ, ಸರ್ಕಾರ ನಿಗದಿಪಡಿಸಿರುವ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಹಾಗೂ ಕಳಪೆ ಗುಣಮಟ್ಟದ ಬಿತ್ತನೆ ಬೀಜಗಳನ್ನು ರೈತರಿಗೆ ಮಾರಾಟ ಮಾಡಿ ವಂಚಿಸುತ್ತಿರುವ ರಸಗೊಬ್ಬರ ಅಂಗಡಿಗಳ ವಿರುದ್ಧ ತಕ್ಷಣ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಜಯ ಕರ್ನಾಟಕ ರಕ್ಷಣಾ ಸೇನೆ ಸಹಾಯಕ ಆಯುಕ್ತರಿಗೆ ಮನವಿಯನ್ನು ಸಲ್ಲಿಸಿದರು



ಪಟ್ಟಣ ಸೇರಿದಂತೆ ತಾಲೂಕಿನ ಹಲವು ಭಾಗಗಳಲ್ಲಿ ರಸಗೊಬ್ಬರ ಮಾರಾಟಗಾರರು ಕೃತಕ ಅಭಾವ ಸೃಷ್ಟಿಸಿ ಸರ್ಕಾರ ನಿಗದಿಪಡಿಸಿದ ದರಕ್ಕಿಂತ ದುಪ್ಪಟ್ಟು ಬೆಲೆಗೆ ಗೊಬ್ಬರ ಮಾರಾಟ ಮಾಡುತ್ತಿದ್ದಾರೆ ಎಂದು ಆರೋಪಿಸಲಾಗಿದೆ.

ಅಲ್ಲದೆ ರೈತರಿಗೆ ರಸಗೊಬ್ಬರ ಖರೀದಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಇತರೆ ಉತ್ಪನ್ನಗಳನ್ನು ಖರೀದಿಸುವಂತೆ ಒತ್ತಡ ಹೇರುತ್ತಿದ್ದು, ಕಳಪೆ ಗುಣಮಟ್ಟದ ಬೀಜಗಳನ್ನು ಮಾರಾಟ ಮಾಡುತ್ತಿರುವ ಬಗ್ಗೆ ವ್ಯಾಪಕ ದೂರುಗಳು ಕೇಳಿಬರುತ್ತಿವೆ ಎಂದು ತಿಳಿಸಲಾಗಿದೆ.

ಪ್ರಸ್ತುತ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆಗಳು ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರು ಖಾಸಗಿ ರಸಗೊಬ್ಬರ ಅಂಗಡಿಗಳನ್ನು ಅವಲಂಬಿಸಿದ್ದು, ಈ ಪರಿಸ್ಥಿತಿಯನ್ನು ದುರುಪಯೋಗಪಡಿಸಿಕೊಂಡು ಕೆಲ ವ್ಯಾಪಾರಿಗಳು ಅಕ್ರಮ ಲಾಭ ಗಳಿಸುತ್ತಿದ್ದಾರೆ. ಇದರಿಂದ ರೈತರಿಗೆ ಆರ್ಥಿಕ ನಷ್ಟ ಉಂಟಾಗುತ್ತಿದೆ ಎಂದು ದೂರಲಾಗಿದೆ.

ವಿಶೇಷವಾಗಿ ತಾಲೂಕಿನ ಗುರುಗುಂಟಾ ಹೋಬಳಿ ಹಾಗೂ ಆನೆಹೊಸೂರು ಭಾಗದಲ್ಲಿ ಕಳಪೆ ಗುಣಮಟ್ಟದ ಬೀಜ ಬಿತ್ತನೆ ಮಾಡಿದ ಪರಿಣಾಮ ಬೀಜಗಳು ಮೊಳಕೆಯೊಡೆಯದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದರೆ

ಕೆಲ ಅಂಗಡಿಗಳಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಾಡುವಾಗ ರೈತರಿಗೆ ಸರಿಯಾದ ಬಿಲ್ ನೀಡದೆ, ಬಿಳಿ ಚೀಟಿ ವ್ಯವಹಾರ ನಡೆಸುವ ಮೂಲಕ ರೈತರು ಹಾಗೂ ಸರ್ಕಾರಕ್ಕೆ ವಂಚನೆ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪ ಕೇಳಿಬಂದಿದೆ.

ಸರ್ಕಾರದ ಮಾರ್ಗಸೂಚಿ ಹಾಗೂ ನಿಗದಿತ ದರಗಳನ್ನು ಉಲ್ಲಂಘಿಸಿ ದುಪ್ಪಟ್ಟು ದರಕ್ಕೆ ಗೊಬ್ಬರ ಮಾರಾಟ ಮಾಡುತ್ತಿರುವ ಅಂಗಡಿಗಳ ವಿರುದ್ಧ ಕೃಷಿ ಇಲಾಖೆ ಹಾಗೂ ಸಂಬಂಧಿಸಿದ ಅಧಿಕಾರಿಗಳ ವಿಶೇಷ ತಂಡ ರಚಿಸಿ ದಾಳಿ ನಡೆಸಿ ಪರಿಶೀಲನೆ ಮಾಡಬೇಕು ಎಂದು ಒತ್ತಾಯಿಸಲಾಗಿದೆ.

ರೈತರ ಹಿತದೃಷ್ಟಿಯಿಂದ ಹೆಚ್ಚಿನ ಬೆಲೆಗೆ ಗೊಬ್ಬರ ಮಾರಾಟ ಮಾಡುತ್ತಿರುವ ಹಾಗೂ ಕಳಪೆ ಬಿತ್ತನೆ ಬೀಜಗಳನ್ನು ಮಾರಾಟ ಮಾಡುತ್ತಿರುವ ಅಂಗಡಿಗಳ ಪರವಾನಗಿ (ಲೈಸೆನ್ಸ್) ರದ್ದುಪಡಿಸಿ ಕಠಿಣ ಶಿಕ್ಷೆ ವಿಧಿಸಬೇಕು ಎಂದು ಆಗ್ರಹಿಸಲಾಗಿದೆ.

ಒಂದು ವೇಳೆ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳದಿದ್ದಲ್ಲಿ, ರೈತರೊಂದಿಗೆ ಸೇರಿ ಸಹಾಯಕ ಆಯುಕ್ತರ ಕಚೇರಿ ಎದುರು ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಈ ಸಂದರ್ಭದಲ್ಲಿ ತಾಲೂಕು ಅಧ್ಯಕ್ಷ ಹನುಮಂತ ನಾಯಕ ಪ್ರಧಾನ ಕಾರ್ಯದರ್ಶಿ ನಿಂಗಪ್ಪ ರಾಮಲೂಟಿ ಹಾಗೂ ಕರವೇ ಕಾರ್ಯಕರ್ತರು ಉಪಸ್ಥಿತರಿದ್ದರು.

# 11 ಸೂಕ್ಷ್ಮ ಪ್ರದೇಶಗಳಲ್ಲಿ ಸಾರ್ವಜನಿಕ ಮೊಹರಂ ಆಚರಣೆ ಸಂಪೂರ್ಣ ನಿಷೇಧ: ನಾಗೇಂದ್ರ ಪ್ರಸಾದ್ ಆದೇಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯ ವಿವಿಧ ಗ್ರಾಮ ಹಾಗೂ ನಗರ ಪ್ರದೇಶಗಳಲ್ಲಿ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತದೃಷ್ಟಿಯಿಂದ 2026ರ ಮೊಹರಂ ಹಬ್ಬವನ್ನು ಸಾರ್ವಜನಿಕವಾಗಿ ಆಚರಿಸುವುದನ್ನು ಸಂಪೂರ್ಣವಾಗಿ ನಿಷೇಧಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಾಗೇಂದ್ರ ಪ್ರಸಾದ್ ಕೆ. ಅವರು ಆದೇಶಿಸಿದ್ದಾರೆ.

ಜಿಲ್ಲಾ ಪೊಲೀಸ್ ಅಧೀಕ್ಷಕರು ನೀಡಿದ ವರದಿಯನ್ವಯ, ಹಳೆಯ ವೈಷಮ್ಯಗಳ ಕಾರಣದಿಂದಾಗಿ ಹಬ್ಬದ ಸಂದರ್ಭದಲ್ಲಿ ಶಾಂತಿ ಭಂಗ ಉಂಟಾಗುವ ಸಾಧ್ಯತೆಗಳಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಜೂ.17 ರಿಂದ 26 ರವರೆಗೆ ಒಟ್ಟು 10 ದಿನಗಳ ಕಾಲ ಈ ನಿಷೇಧಾಜ್ಞೆ ಜಾರಿಯಲ್ಲಿರಲಿದೆ.

ನಿಷೇಧಾಜ್ಞೆ ಅನ್ವಯವಾಗುವ 11 ಗ್ರಾಮಗಳ ವಿವರ:

ಜಿಲ್ಲೆಯ ಒಟ್ಟು 7 ಪೊಲೀಸ್ ಠಾಣಾ ವ್ಯಾಪ್ತಿಯ 11 ಸೂಕ್ಷ ?? ಗ್ರಾಮ/ಪ್ರದೇಶಗಳಲ್ಲಿ ಜನರು ಗುಂಪು ಸೇರುವುದು, ಮೆರವಣಿಗೆ ನಡೆಸುವುದು ಮತ್ತು ಪಂಜಾಗಳನ್ನು ಪ್ರತಿಷ್ಠಾಪಿಸುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ.



ಸಿರುಗುಪ್ಪ ವ್ಯಾಪ್ತಿ (04 ಗ್ರಾಮಗಳು): ನಾಡಂಗ, ಕೆ.ಸೂಗೂರು, ದೇಶನೂರು, ಅಲಬನೂರು.

ಪಿ.ಡಿ. ಹಳ್ಳಿ ವ್ಯಾಪ್ತಿ (01 ಗ್ರಾಮ): ಅಸುಂಡಿ.

ಕಂಪ್ಲಿ ವ್ಯಾಪ್ತಿ (02 ಗ್ರಾಮಗಳು): ನಂ.15–ಗೋನಾಳ್, ನಂ–10 ಮುದ್ದಾಪುರ.ಬಳ್ಳಾರಿ ಗಾಂಧಿನಗರ ವ್ಯಾಪ್ತಿ (01 ಸ್ಥಳ): ಮಹಾನಂದಿಕೊಟ್ಟಂ ಒಳಗಡೆ ತಾಳೂರು ರಸ್ತೆಯ ಕನ್ನಡ ನಗರ ಮುಖ್ಯರಸ್ತೆ (ನ್ಯಾಯಾಧೀಶರ ವಸತಿ ಗೃಹ ಕಾಂಪೌಂಡ್ ಪಕ್ಕದಲ್ಲಿ).ಕುಡತಿನಿ ವ್ಯಾಪ್ತಿ (01 ಗ್ರಾಮ): ಹೊನ್ನಳ್ಳಿ.

ತೋರಣಗಲ್ಲು ವ್ಯಾಪ್ತಿ (01 ಗ್ರಾಮ): ವಿ.ನಾಗಲಾಪುರ.

ಬಳ್ಳಾರಿ ಗ್ರಾಮೀಣ ವ್ಯಾಪ್ತಿ (01 ಗ್ರಾಮ): ಕೊಳಗಲ್ಲು ಗ್ರಾಮ.

ಕರ್ನಾಟಕ ಪೊಲೀಸ್ ಕಾಯ್ದೆ 1963 ರ ಕಲಂ 35 (ಎ) (ಬಿ) (ಡಿ) (ಇ) ಅಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಜಿಲ್ಲಾಧಿಕಾರಿಯವರು ಈ ಕೆಳಗಿನ ನಿಯಮಗಳನ್ನು ಜಾರಿಗೊಳಿಸಿದ್ದಾರೆ.ಶಸ್ತ್ರಾಸ್ತ್ರಗಳ ನಿಷೇಧ: ಶಸ್ತ್ರ, ಬಡಿಗೆ, ಬರ್ಚಿ, ಗದೆ, ಬಂದೂಕು, ಚೂರಿ, ಕೋಲು, ಲಾಠಿ ಅಥವಾ ಶರೀರಕ್ಕೆ ಗಾಯ ಮಾಡಬಹುದಾದ ಯಾವುದೇ ವಸ್ತುಗಳನ್ನು ಒಯ್ಯುವುದನ್ನು ನಿಷೇಧಿಸಲಾಗಿದೆ.ಸ್ಫೋಟಕಗಳ ನಿಷೇಧ: ಯಾವುದೇ ತರಹದ ದಾಹಕ (ನಾಶಕಾರಿ) ಪದಾರ್ಥ ಇಲ್ಲವೇ ಸ್ಫೋಟಕ ವಸ್ತುಗಳನ್ನು ಸಾಗಿಸುವಂತಿಲ್ಲ.ನಿಂದನೆಗೆ ತಡೆ: ಯಾವುದೇ ವ್ಯಕ್ತಿಗಳ ಭಾವಚಿತ್ರಗಳನ್ನು ಅವಮಾನಕಾರಿಯಾದ ರೀತಿಯಲ್ಲಿ ಪ್ರದರ್ಶಿಸುವಂತಿಲ್ಲ.

ಪ್ರಚೋದನೆಗೆ ನಿರ್ಬಂಧ: ಬಹಿರಂಗವಾಗಿ ಪ್ರಚೋದನಾಕಾರಿ ಘೋಷಣೆ ಕೂಗುವುದು, ಪದ ಹಾಡುವುದು, ವಾದ್ಯ ಬಾರಿಸುವುದು, ಸಭ್ಯತೆ ಅಥವಾ ನೀತಿಯನ್ನು ಉಲ್ಲಂಘಿಸುವ ಯಾವುದೇ ಸನ್ನೆ ಅಥವಾ ವಸ್ತುಗಳ ಪ್ರದರ್ಶನವನ್ನು ನಿರ್ಬಂಧಿಸಲಾಗಿದೆ.

ಸಾರ್ವಜನಿಕ ಸಂಚಾರ: ಗುಂಪುಗೂಡಿ ಸಾರ್ವಜನಿಕವಾಗಿ ಮೆರವಣಿಗೆ ಮಾಡುವುದನ್ನು ಸಂಪೂರ್ಣ ನಿಷೇಧಿಸಲಾಗಿದೆ.

ಈ ಆದೇಶವನ್ನು ಉಲ್ಲಂಘಿಸಿ ಕಾನೂನು ಕೈಗೆತ್ತಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು. ನಿಯಮ ಮೀರಿ ಬಳಸುವ ವಸ್ತುಗಳನ್ನು ಪೊಲೀಸ್ ಅಧಿಕಾರಿಗಳು ಜಪ್ತಿ ಮಾಡಿ ಸರ್ಕಾರಕ್ಕೆ ಜಮಾ ಮಾಡಲಿದ್ದಾರೆ ಎಂದು ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಿದ್ದಾರೆ.

# ವಿಕಸಿತ್ ಭಾರತ್ ರೋಜಗಾರ್ ಯೋಜನೆ ಯುವಶಕ್ತಿಗೆ ಉದ್ಯೋಗದ ಆಸರೆ: ಕೆ.ವಿ. ಪ್ರವೀಣ್

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕೇಂದ್ರ ಸರ್ಕಾರದ 'ಪ್ರಧಾನಮಂತ್ರಿ ವಿಕಸಿತ್ ಭಾರತ್ ರೋಜಗಾರ್ ಯೋಜನೆ' ದೇಶದಲ್ಲಿ ಉದ್ಯೋಗ ಸೃಷ್ಟಿ ಮತ್ತು ಯುವಕರಿಗೆ ಆರ್ಥಿಕ ಭದ್ರತೆ ನೀಡುವ ನಿಟ್ಟಿನಲ್ಲಿ ಜಾರಿಗೆ ತಂದಿರುವ ಅತ್ಯಂತ ಪ್ರಮುಖ ಯೋಜನೆಯಾಗಿದ್ದು, ಉದ್ಯೋಗದಾತರು ಮತ್ತು ಮೊದಲ ಬಾರಿಗೆ ಕೆಲಸಕ್ಕೆ ಸೇರುವ ಯುವಕರಿಗೆ ಉತ್ತೇಜನ ನೀಡಲು ಆಸರೆಯಾಗಲಿದೆ ಎಂದು ಬಳ್ಳಾರಿ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯ ಆಯುಕ್ತ ಕೆ.ವಿ. ಪ್ರವೀಣ್ ಅವರು ಹೇಳಿದರು.ಬುಧವಾರ, ನಗರದ ರಾಘವೇಂದ್ರ ಕಾಲೋನಿಯ ಎರಡನೇ ಹಂತದಲ್ಲಿರುವ ಪಿಎಫ್ ಪ್ರಾದೇಶಿಕ ಕಚೇರಿ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ 'ಪ್ರಧಾನಮಂತ್ರಿ ವಿಕಸಿತ್ ಭಾರತ್ ರೋಜಗಾರ್ ಯೋಜನೆ' ಕುರಿತು ಸುದ್ದಿಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.ಹೊಸ ಉದ್ಯೋಗ ಸೃಷ್ಟಿ ಹಾಗೂ ದೇಶದ ಆರ್ಥಿಕತೆಗೆ ಚೇತರಿಕೆ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಈ ಯೋಜನೆ ಅತ್ಯಂತ ನಿರ್ಣಾಯಕ ಹೆಜ್ಜೆಯಾಗಿದೆ. ಈ ಯೋಜನೆಯ ಪ್ರಮುಖ ಗುರಿ ದೇಶದಲ್ಲಿ ಬರೋಬ್ಬರಿ 3.5 ಕೋಟಿ ಹೊಸ ಉದ್ಯೋಗಗಳನ್ನು ಸೃಷ್ಟಿಸುವುದು ಮತ್ತು ಸೃಷ್ಟಿಯಾದ ಉದ್ಯೋಗಗಳಲ್ಲಿ ಉದ್ಯೋಗಿಗಳು ಸ್ಥಿರವಾಗಿ ಮುಂದುವರಿಯುವಂತೆ ಪ್ರೋತ್ಸಾಹಿಸುವುದಾಗಿದೆ ಎಂದರು.



ಈ ಯೋಜನೆಯು ಆಗಸ್ಟ್ 1, 2025 ರಿಂದ ಅಧಿಕೃತವಾಗಿ ಅನುಷ್ಠಾನಕ್ಕೆ ಬಂದಿದ್ದು, ಜುಲೈ 31, 2027 ರವರೆಗೆ ಒಟ್ಟು ಎರಡು ವರ್ಷಗಳ ಕಾಲ ಚಾಲ್ತಿಯಲ್ಲಿರಲಿದೆ. ದೇಶಾದ್ಯಂತ ಈ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರವು ರೂ. 1 ಲಕ್ಷ ಕೋಟಿ ಮೊತ್ತದ ಬಜೆಟ್ ಅನ್ನು ಮೀಸಲಿಟ್ಟಿದೆ ಎಂದು ವಿವರಿಸಿದರು.

ಭಾರತ ಸರ್ಕಾರದ ಭವಿಷ್ಯನಿಧಿ ಸಂಸ್ಥೆಯ ವ್ಯಾಪ್ತಿಗೆ ಒಳಪಡುವ (ಪಿಎಫ್ ಕವರ್ ಆಗಿರುವ) ಎಲ್ಲಾ ಖಾಸಗಿ ಸಂಸ್ಥೆಗಳು, ಸೇವಾ ವಲಯದ ಕಂಪನಿಗಳು, ಉತ್ಪಾದನಾ ವಲಯ, ಸೆಕ್ಯೂರಿಟಿ ಏಜೆನ್ಸಿಗಳು ಹಾಗೂ ಮ್ಯಾನ್‌ಪವರ್ ಏಜೆನ್ಸಿಗಳು ಈ ಯೋಜನೆಗೆ ಅರ್ಹವಾಗಿವೆ. ಮುಖ್ಯವಾಗಿ ಇದು ಕೇವಲ ಹೊಸದಾಗಿ ಉದ್ಯೋಗಕ್ಕೆ ಸೇರುವವರಿಗೆ ಮಾತ್ರ ಅನ್ವಯಿಸುತ್ತದೆ. ಈಗಾಗಲೇ ಕೆಲಸದಲ್ಲಿರುವ ಹಳೇ ಉದ್ಯೋಗಿಗಳಿಗೆ ಇದು ಅನ್ವಯಿಸುವುದಿಲ್ಲ. ಹೊಸ ಉದ್ಯೋಗಿ ಕನಿಷ್ಠ 6 ತಿಂಗಳು ಅದೇ ಸಂಸ್ಥೆಯಲ್ಲಿ ಕೆಲಸ ಮುಂದುವರಿಸುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು.ಈ ಯೋಜನೆಗಾಗಿ ಪ್ರತ್ಯೇಕ ಅಧಿಕೃತ ಪೋರ್ಟಲ್ (https://pmvbry.labour.gov.in) ಆರಂಭಿಸಲಾಗಿದ್ದು, ಉದ್ಯೋಗದಾತರು ಇಲ್ಲಿ ಸುಲಭವಾಗಿ ಒನ್–ಟೈಮ್ ನೋಂದಣಿ ಮಾಡಿಕೊಳ್ಳಬಹುದು. ನೌಕರರು ಇದಕ್ಕೆ ಪ್ರತ್ಯೇಕವಾಗಿ ಅರ್ಜಿ ಸಲ್ಲಿಸುವ ಅಗತ್ಯವಿಲ್ಲ. ಕಂಪನಿಗಳು ಹೊಸ ನೌಕರರ ಪಿಎಫ್ ಖಾತೆಯನ್ನು ಆಧಾರ್ ಕಾರ್ಡ್‌ಗೆ ಲಿಂಕ್ ಮಾಡಿದಾಗ ಸಿಸ್ಟಮ್ ಸ್ವಯಂಚಾಲಿತವಾಗಿ ಅರ್ಹತೆಯನ್ನು ಪರಿಶೀಲಿಸಿ ಹಣವನ್ನು ಬ್ಯಾಂಕ್ ಖಾತೆಗೆ ಜಮಾ ಮಾಡುತ್ತದೆ ಎಂದರು.ಪಿಎಫ್ ವ್ಯಾಪ್ತಿಯಲ್ಲಿ ಬರುವ ಸಂಸ್ಥೆಗಳಿಗೆ ಅವರು ನೇಮಿಸಿಕೊಳ್ಳುವ ಹೊಸ ಉದ್ಯೋಗಿಗಳ ಸಂಬಳದ ಆಧಾರದ ಮೇಲೆ ಪ್ರತಿ ತಿಂಗಳು ಕೇಂದ್ರ ಸರ್ಕಾರದಿಂದ ಇನ್ಸೆಂಟಿವ್ (ಪ್ರೋತ್ಸಾಹಧನ) ಸಿಗಲಿದೆ. ಸೇವಾ ವಲಯದ ಕಂಪನಿಗಳಿಗೆ 2 ವರ್ಷಗಳ ಕಾಲ (24 ತಿಂಗಳು) ಈ ಇನ್ಸೆಂಟಿವ್ ಸಿಗಲಿದೆ. ಉತ್ಪಾದನಾ ವಲಯದ ಕಂಪನಿಗಳಿಗೆ ವಿಶೇಷ ಉತ್ತೇಜನ ನೀಡಲು 4 ವರ್ಷಗಳ ಕಾಲ (48 ತಿಂಗಳು) ಇನ್ಸೆಂಟಿವ್ ಅವಧಿಯನ್ನು ವಿಸ್ತರಿಸಲಾಗಿದೆ. ಹೊಸದಾಗಿ ಸೇರ್ಪಡೆಯಾಗುವ ಉದ್ಯೋಗಿಗಳಿಗೆ ಗರಿಷ್ಠ ರೂ.15,000 ವರೆಗೆ ಒಮ್ಮೆಯ ಇನ್ಸೆಂಟಿವ್ ಸಿಗಲಿದ್ದು, ಇದನ್ನು ಎರಡು ಕಂತುಗಳಲ್ಲಿ ನೀಡಲಾಗುತ್ತದೆ ಎಂದು ಹೇಳಿದರು. ಮೊದಲ ಬಾರಿಗೆ ಉದ್ಯೋಗಕ್ಕೆ ಸೇರಿ ಭವಿಷ್ಯನಿಧಿ ಖಾತೆ ಪಡೆಯುತ್ತಿರುವ ಹೊಸ ಉದ್ಯೋಗಿಗಳಿಗೆ ಇದು ಅನ್ವಯಿಸುತ್ತದೆ. ಬಳ್ಳಾರಿ ವಲಯದಲ್ಲಿ ಇದುವರೆಗೆ ಇಂತಹ 1,374 ಹೊಸ ಕಾರ್ಮಿಕರು ಈ ಯೋಜನೆಯಡಿ ನೇರ ಹಣಕಾಸು ನೆರವು ಪಡೆಯಲು ಅರ್ಹರಾಗಿದ್ದಾರೆ. ಈ ಭಾಗದಡಿ ಉದ್ಯೋಗಿಗಳಿಗೆ ನೇರ ಲಾಭ ಸಿಗದಿದ್ದರೂ, ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕ ನೆರವು ಸಿಗುತ್ತದೆ. ಉದಾಹರಣೆಗೆ, ಒಬ್ಬ ಉದ್ಯೋಗಿ ಈ ಹಿಂದೆ ಬೇರೆ ಸಂಸ್ಥೆಯಲ್ಲಿ ಕೆಲಸ ಮಾಡಿ ಯುಎಎನ್ ಸಂಖ್ಯೆ ಹೊಂದಿದ್ದು, ಈಗ ಹೊಸ ಸಂಸ್ಥೆಗೆ ಸೇರಿದರೆ ಆತನಿಗೆ ಭಾಗ 'ಎ' ಲಾಭ ಸಿಗುವುದಿಲ್ಲ. ಆದರೆ, ಆತನನ್ನು ಕೆಲಸಕ್ಕೆ ಸೇರಿಸಿಕೊಂಡ ಹೊಸ ಸಂಸ್ಥೆಗೆ ಸರ್ಕಾರದಿಂದ ಭಾಗ 'ಬಿ' ಅಡಿಯಲ್ಲಿ ಪ್ರೋತ್ಸಾಹ ಧನ ಸಿಗುತ್ತದೆ ಎಂದರು.

ಬಳ್ಳಾರಿ ವಲಯದಲ್ಲಿ ಇಂತಹ 248 ಉದ್ಯೋಗದಾತ ಸಂಸ್ಥೆಗಳು ಈ ಸೌಲಭ್ಯ ಪಡೆದುಕೊಂಡಿವೆ. ಕೇಂದ್ರ ಸರ್ಕಾರದ ಈ ವಿನೂತನ ಯೋಜನೆಯು ಬಳ್ಳಾರಿ ಭಾಗದ ಸಾವಿರಾರು ಉದ್ಯೋಗಿಗಳಿಗೆ ಮತ್ತು ಉದ್ಯೋಗದಾತ ಸಂಸ್ಥೆಗಳಿಗೆ ಆರ್ಥಿಕವಾಗಿ ದೊಡ್ಡ ಆಸರೆಯಾಗಿದೆ ಎಂದು ತಿಳಿಸಿದರು.ಈ ವೇಳೆ ಬಳ್ಳಾರಿ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯ ಜಾರಿ ಅಧಿಕಾರಿ ಅಬ್ದುಲ್ ಹಫೀಜ್, ಮೇಲ್ವಿಚಾರಕ ಜಡೇಶ್ ಹಾಗೂ ಇತರರಿದ್ದರು.

# ಮೊಹರಂ ಹಬ್ಬದ ಹಿನ್ನೆಲೆ: ಹಸಿರು ಮರ ಕಡಿಯದಂತೆ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಹಿಂದೂ–ಮುಸ್ಲಿಂ ಭಾವೈಕ್ಯತೆಯ ಸಂಕೇತವಾಗಿರುವ ಮೊಹರಂ ಹಬ್ಬದ ಆಚರಣೆಯ ಸಂದರ್ಭದಲ್ಲಿ ಪರಿಸರ ಸಂರಕ್ಷಣೆಗೆ ಧಕ್ಕೆ ಬರದಂತೆ ಸಾರ್ವಜನಿಕರು ಸಹಕರಿಸಬೇಕು ಎಂದು ಬಳ್ಳಾರಿ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿ ಡಾ.ಕೆ.ಎನ್. ಬಸವರಾಜ ಅವರು ತಿಳಿಸಿದ್ದಾರೆ.ಬಳ್ಳಾರಿ ಜಿಲ್ಲಾ ವ್ಯಾಪ್ತಿಯ ತಾಲ್ಲೂಕು ಹಾಗೂ ಗ್ರಾಮಾಂತರ ಪ್ರದೇಶಗಳಲ್ಲಿ ಮೊಹರಂ ಹಬ್ಬವನ್ನು ಸೌಹಾರ್ದತೆಯಿಂದ ಆಚರಿಸಲಾಗುತ್ತದೆ. ಆದರೆ, ಈ ಹಬ್ಬದ ಪ್ರಯುಕ್ತ ರಾತ್ರಿ ಸಮಯದಲ್ಲಿ ನಡೆಸಲಾಗುವ 'ಅಲಾಯಿ ಕುಣಿತ' ಮತ್ತು 'ಬೆಂಕಿ ಹಾಕುವ' ಕಾರ್ಯಕ್ರಮಗಳಿಗಾಗಿ ಗ್ರಾಮೀಣ ಪ್ರದೇಶಗಳಲ್ಲಿ ಹಸಿರು ಮರಗಳನ್ನು ಕಡಿದು ಕುಣಿಗೆ ಹಾಕುವ ಪರಿಪಾಠವಿದೆ. ಇದರಿಂದಾಗಿ ಪರಿಸರ ಸಂರಕ್ಷಣೆಗೆ ಭಾರಿ ಧಕ್ಕೆ ಉಂಟಾಗುತ್ತಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.ಜಿಲ್ಲೆಯಲ್ಲಿ ವರ್ಷದಿಂದ ವರ್ಷಕ್ಕೆ ಬಿಸಿಲಿನ ಧಗೆ ಹೆಚ್ಚಾಗುತ್ತಿದ್ದು, ಇಂತಹ ಸಂದರ್ಭದಲ್ಲಿ ಮರ–ಗಿಡಗಳನ್ನು ಕಟಾವು ಮಾಡುವುದು ಸಾರ್ವಜನಿಕ ಹಿತದೃಷ್ಟಿಯಿಂದ ಒಳಿತಲ್ಲ. ಹಸಿರು ಮರಗಳನ್ನು ಕಡಿಯುವುದು ಕರ್ನಾಟಕ ಅರಣ್ಯ ಕಾಯ್ದೆ ಮತ್ತು ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆಯ ಉಲ್ಲಂಘನೆಯಾಗಿದ್ದು, ಇದು ಶಿಕ್ಷಾರ್ಹ ಅಪರಾಧವಾಗಿದೆ. ಇಂತಹ ಪ್ರಕರಣಗಳು ಕಂಡುಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಾನೂನಾತ್ಮಕ ಕ್ರಮ ಜರುಗಿಸಲಾಗುವುದು ಎಂದು ಅವರು ಎಚ್ಚರಿಸಿದ್ದಾರೆ.ಮೊಹರಂ ಹಬ್ಬದ ಸಲುವಾಗಿ ಯಾವುದೇ ಹಸಿರು ಮರಗಳನ್ನು ಕಡಿಯದೇ, ಹಬ್ಬವನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದ್ದು, ಸಾರ್ವಜನಿಕರು ಅರಣ್ಯ ಇಲಾಖೆಯೊಂದಿಗೆ ಕೈಜೋಡಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಕುರುಗೋಡಿನಲ್ಲಿ ಉದ್ದಿಮೆಗಳ ಮೇಲೆ ದಾಳಿ - ಬಾಲಕನ ರಕ್ಷಣೆ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಕುರುಗೋಡು ತಾಲೂಕು ಮಟ್ಟದಲ್ಲಿ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಅಂಗವಾಗಿ ಶಾಲಾ ಮಕ್ಕಳಿಂದ ಬೃಹತ್ ಜಾಗೃತಿ ಜಾಥಾ ಮತ್ತು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಕುರುಗೋಡು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಹಮ್ಮಿಕೊಳ್ಳಲಾಗಿದ್ದ ಶಾಲಾ ಮಕ್ಕಳ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಗ್ರೇಡ್–2 ತಹಶೀಲ್ದಾರ ಮಲ್ಲೇಶಪ್ಪ ಅವರು ಹಸಿರು ನಿಶಾನೆ ತೋರುವುದರ ಮೂಲಕ ಚಾಲನೆ ನೀಡಿದರು.

ಜಾಥಾದ ನಂತರ ಹಮ್ಮಿಕೊಳ್ಳಲಾಗಿದ್ದ ವೇದಿಕೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದ ತಾಪಂ ಸಹಾಯಕ ನಿರ್ದೇಶಕ ಶಿವರಾಮ ರೆಡ್ಡಿ ಅವರು, ಮಕ್ಕಳು ಸಮಾಜಮುಖಿ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರ ಜೊತೆಗೆ ತಮ್ಮಲ್ಲಿರುವ ಸುಪ್ತ ಪ್ರತಿಭೆಗಳನ್ನು ಪ್ರದರ್ಶಿಸಬೇಕು. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ಜೀವನವನ್ನು ಉತ್ತಮಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಮಿಕ ನಿರೀಕ್ಷಕ ಪರಶುರಾಮ್ ಅವರು ಮಾತನಾಡಿ, ಕುರುಗೋಡು ತಾಲೂಕಿನಲ್ಲಿ ಎಲ್ಲಾದರೂ ಶಾಲೆ ಬಿಟ್ಟ ಮಕ್ಕಳು ಅಥವಾ ಬಾಲಕಾರ್ಮಿಕರಾಗಿ ದುಡಿಯುತ್ತಿರುವ ಮಕ್ಕಳು ಕಂಡುಬಂದಲ್ಲಿ ತಕ್ಷಣವೇ 1098 ಉಚಿತ ಸಹಾಯವಾಣಿಗೆ ಮಾಹಿತಿ ನೀಡಬೇಕು. ಇದರಿಂದ ಅಂತಹ ಮಕ್ಕಳನ್ನು ರಕ್ಷಿಸಿ, ಅವರಿಗೆ ಮರುಶಿಕ್ಷಣ ನೀಡಿ ಮುಖ್ಯವಾಹಿನಿಗೆ ತರಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಇದೇ ವೇಳೆ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ. ಮೌನೇಶ್ ಅವರು ವಿಶ್ವ ಬಾಲಕಾರ್ಮಿಕ ಪದ್ಧತಿ ಆಚರಣೆಯ ಮಹತ್ವದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

*ಉದ್ದಿಮೆಗಳ ಮೇಲೆ ಆಕಸ್ಮಿಕ ದಾಳಿ: ಬಾಲಕನ ರಕ್ಷಣೆ*ದಿನಾಚರಣೆಯ ಅಂಗವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿದ್ದ ಉದ್ದಿಮೆಗಳ ಮೇಲೆ ಅಧಿಕಾರಿಗಳ ತಂಡ ಆಕಸ್ಮಿಕ ದಾಳಿ ನಡೆಸಿತು. ಈ ವೇಳೆ ಸ್ಥಳೀಯ 'ದಾದಾ ವರ್ಕ್ಶಾಪ್'ನಲ್ಲಿ ಬಾಲಕನೊಬ್ಬ ಕೆಲಸ ಮಾಡುತ್ತಿರುವುದು ಪತೆ–ಯಾಗಿದ್ದು, ಅಧಿಕಾರಿಗಳು ತಕ್ಷಣವೇ ಮಗುವನ್ನು ರಕ್ಷಿಸಿದ್ದಾರೆ. ರಕ್ಷಿಸಲ್ಪಟ್ಟ ಬಾಲಕನನ್ನು ಮುಷ್ಟಗಟ್ಟೆ ಗ್ರಾಮದಲ್ಲಿರುವ ಮೊರಾರ್ಜಿ ವಸತಿ ಶಾಲೆಗೆ ದಾಖಲಿಸಿ, ಶಿಕ್ಷಣ ಮುಂದುವರಿಸಲು ಕ್ರಮ ಕೈಗೊಳ್ಳಲಾಗಿದೆ.ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ ಜಡೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೇಲ್ವಿಚಾರಕರಾದ ಮಂಜುಳಾ, ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿ ವೀರೇಶ್, ಮಕ್ಕಳ ಸಹಾಯವಾಣಿಯ ಕಾರ್ತಿಕ್, ರೀಡ್ಸ್ ಸಂಸ್ಥೆಯ ಸಿಬ್ಬಂದಿ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಕರ್ತವ್ಯ ಲೋಪವೆಸಗಿದರೆ ಕಟ್ಟುನಿಟ್ಟಿನ ಕ್ರಮ: ಡಾ.ಶಂಕ್ರಪ್ಪ ಮೈಲಾರಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಎಲ್ಲಾ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿ ವರ್ಗ 'ಕಾಮ್ಸ್' (ಕರ್ನಾಟಕ ಸುಧಾರಿತ ಹಾಜರಾತಿ ನಿರ್ವಹಣಾ ವ್ಯವಸ್ಥೆ) ತಂತ್ರಾಂಶದ ಮೂಲಕ ಹಾಜರಾತಿಯನ್ನು ತಪ್ಪದೇ ದಾಖಲಿಸಬೇಕು. ಕರ್ತವ್ಯದ ಅವಧಿಯಲ್ಲಿ ಕೇಂದ್ರಸ್ಥಾನದಿಂದ ಹೊರಗೆ ಹೋಗುವ ಸಂದರ್ಭ ಎದುರಾದರೆ ಕಡ್ಡಾಯವಾಗಿ ಚಲನವಲನ ಪುಸ್ತಕದಲ್ಲಿ ನಮೂದಿಸಬೇಕು ಎಂದು ಕಲಬುರಗಿ ವಿಭಾಗದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಸಹ ನಿರ್ದೇಶಕ ಡಾ.ಶಂಕ್ರಪ್ಪ ಮೈಲಾರಿ ಅವರು ಹೇಳಿದರು.ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಜಂಟಿ ಆಶ್ರಯದಲ್ಲಿ ನಗರದ ಡಿಹೆಚ್‌ಓ ಸಭಾಂಗಣದಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಕುರಿತು ಬುಧವಾರ ಆಯೋಜಿಸಿದ್ದ ವೈದ್ಯಾಧಿಕಾರಿಗಳ ಜಿಲ್ಲಾ ಮಟ್ಟದ ಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಯಾವುದೇ ಕಾರಣಕ್ಕೂ ರೋಗಿಗಳಿಗೆ ಹೊರಗಿನ ಔಷಧಿಗಳನ್ನು ಬರೆದುಕೊಡಬಾರದು. ಖಾಸಗಿ ಆಸ್ಪತ್ರೆ ಅಥವಾ ಲ್ಯಾಬ್‌ಗಳಿಗೆ ರೋಗಿಗಳನ್ನು ಶಿಫಾರಸ್ಸು ಮಾಡುವುದನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ. ಆಸ್ಪತ್ರೆಗೆ ಅಗತ್ಯವಿರುವ ಔಷಧಿಗಳನ್ನು ಮುಂಚಿತವಾಗಿಯೇ ಇಂಡೆಂಟ್ ಮಾಡಿಕೊಳ್ಳಬೇಕು. ಆಸ್ಪತ್ರೆಯ ಒಳಗಡೆ ಮತ್ತು ಹೊರಗಡೆ ಸ್ವಚ್ಛತೆಯನ್ನು ಕಾಪಾಡಲು ಮೇಲ್ವಿಚಾರಣಾ ಸಿಬ್ಬಂದಿ ಪ್ರತಿದಿನ ಗಮನ ಹರಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಸುರಕ್ಷಿತ ಹೆರಿಗೆಗಳನ್ನು ಹೆಚ್ಚಿಸಲು ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ತಾಲ್ಲೂಕು ಆಸ್ಪತ್ರೆಗಳಲ್ಲೇ ಹೆಚ್ಚಿನ ಹೆರಿಗೆಗಳನ್ನು ನಿರ್ವಹಿಸಬೇಕು. ಗರ್ಭಿಣಿಯರ ವಿವರಗಳನ್ನು ಮೊದಲ ಮೂರು ತಿಂಗಳ ಒಳಗಾಗಿಯೇ ಕಡ್ಡಾಯವಾಗಿ ದಾಖಲಿಸಿ, ನಿಯಮಿತ ತಪಾಸಣೆ ನಡೆಸಬೇಕು. ಇದರಿಂದ ತೊಡಕಿನ ಗರ್ಭಿಣಿಯರನ್ನು ಆರಂಭದಲ್ಲೇ ಪತ್ತೆ ಹಚ್ಚಿ, ರಕ್ತಹೀನತೆ ನಿವಾರಿಸಿ ತಾಯಿ–ಶಿಶು ಮರಣಗಳನ್ನು ತಡೆಗಟ್ಟಲು ಸಾಧ್ಯವಾಗುತ್ತದೆ ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಮಾತನಾಡಿ ಆರೋಗ್ಯ ಕೇಂದ್ರಗಳಲ್ಲಿ ನಡೆಯುವ ಮಾಸಿಕ ಸಭೆಗಳಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು ಮತ್ತು ಆಶಾ ಕಾರ್ಯಕರ್ತೆಯರು ತೊಡಕಿನ ಗರ್ಭಿಣಿಯರ ಮನೆ ಭೇಟಿ ಹಾಗೂ ಹೆರಿಗೆ ಹತ್ತಿರವಿರುವ ಗರ್ಭಿಣಿಯರ ಮಾಹಿತಿಯನ್ನು ವೈದ್ಯರಿಗೆ ಕಡ್ಡಾಯವಾಗಿ ತಲುಪಿಸಬೇಕು ಎಂದರು.

ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಬಗ್ಗೆ ಆಸ್ಪತ್ರೆಗಳಲ್ಲಿರುವ ಟಿವಿಗಳ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಪ್ರಸ್ತುತ ಮಳೆಗಾಲ ಆರಂಭವಾಗಿರುವುದರಿಂದ ನೀರು ನಿಲ್ಲದಂತೆ ಮುನ್ನೆಚ್ಚರಿಕೆ ವಹಿಸಲು ಕ್ಷೇತ್ರ ಮಟ್ಟದಲ್ಲಿ ಹೆಚ್ಚಿನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ನಾಯಿ ಕಡಿತ ಹಾಗೂ ಹಾವಿನ ಕಡಿತದ ಕುರಿತು ಗ್ರಾಮ ಪಂಚಾಯತಿ, ಶಾಲೆಗಳು ಮತ್ತು ಸಮುದಾಯ ಸಭೆಗಳ ಮೂಲಕ ನಿರಂತರವಾಗಿ ಜಾಗೃತಿ ಮೂಡಿಸಬೇಕು ಎಂದು ವೈದ್ಯಾಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ಅವರು ಮಾತನಾಡಿ, ಕ್ಷಯರೋಗಿಗಳ ಪೌಷ್ಟಿಕಾಂಶದ ಕೊರತೆ ನೀಗಿಸಲು 'ನಿಕ್ಷಯ ಮಿತ್ರ' ಯೋಜನೆಯಡಿ ದಾನಿಗಳನ್ನು ನೋಂದಾಯಿಸಲು ಕ್ರಮ ಕೈಗೊಳ್ಳಲಾಗುವುದು ಮತ್ತು ಗರ್ಭಿಣಿಯರಿಗೆ ಮೊದಲ ತ್ರೈಮಾಸಿಕದಲ್ಲೇ ಹೆಚ್.ಐ.ವಿ., ಹೆಪಟೈಟೀಸ್ ಮತ್ತು ಸಿಫಿಲಿಸ್ ಪರೀಕ್ಷೆಗಳನ್ನು ಮಾಡಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ ವಿ.ಕೆ., ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ.ವೀರೇಂದ್ರ ಕುಮಾರ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು ಆರೋಗ್ಯ ಅಧಿಕಾರಿಗಳು ಹಾಗೂ ಎಲ್ಲಾ ಆಡಳಿತ ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಕ್ಯಾಂಪಸ್ ನೇರ ಸಂದರ್ಶನ

• ಮಲ್ಲಮ್ಮ ನುಡಿ ವಾರ್ತೆ ಕುಕನೂರು

ತಾಲೂಕಿನ ಮಂಡಲಗಿರಿ ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ ಮಂಡಲಗಿರಿಯಲ್ಲಿ ದಿನಾಂಕ 19–06–2026 ರ ಶುಕ್ರವಾರದಂದು ಬೆಳಗ್ಗೆ ಓಖಆಇಅ ಅಔಒಕಂಓಜ ಊಗಃಐಖ ಇವರು ಐಟಿಐ ಪಾಸಾದ ಮತ್ತು ಪ್ರಸ್ತುತ ಎರಡನೇ ವರ್ಷದ ಐಟಿಐ ಪರೀಕ್ಷೆಗೆ ಹಾಜರಾಗುವ ಎಲ್ಲಾ ವೃತ್ತಿಗಳ 18ರಿಂದ 25 ವರ್ಷ ವಯಸ್ಸಿನ ತರಬೇತಾರ್ಥಿಗಳಿಗಾಗಿ ಅಪ್ರೆಂಟಿಸ್ ಗಾಗಿ ಸಂದರ್ಶನವನ್ನು ನಡೆಸಲಿದ್ದಾರೆ. ಅರ್ಹ ತರಬೇತಿದಾರರು ಈ ಸಂದರ್ಶನದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಲು ಸೂಚಿಸಲಾಗಿದೆ. ತರಬೇತಾರ್ಥಿಗಳು ತಮ್ಮ ಬಯೋಡೇಟಾದೊಂದಿಗೆ ಎಸ್ ಎಸ್ ಎಲ್ ಸಿ ಅಂಕಪಟ್ಟಿ, ಐಟಿಐ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ಎರಡು ಪಾಸ್ಪೋರ್ಟ್ ಸೈಜ್ ಫೋಟೋಗಳೊಂದಿಗೆ ಹಾಜರಾಗಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಪ್ರಾಚಾರ್ಯರು ಜಗದ್ಗುರು ತೋಂಟದಾರ್ಯ ಕೈಗಾರಿಕಾ ತರಬೇತಿ ಸಂಸ್ಥೆ ಮಂಡಲಗಿರಿ ಇವರನ್ನು ಸಂಪರ್ಕಿಸಲು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



# ಬಿಜೆಪಿ ಯುವಮೋರ್ಚಾ ಅಧ್ಯಕ್ಷರಾಗಿ ಬಸವರಾಜ್ ಮೇಲುಗಿರಿ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ ಕುರುಗೋಡು



ಕಂಪ್ಲಿ ಕ್ಷೇತ್ರದ ಭಾರತೀಯ ಜನತಾಪಾರ್ಟಿಯ ಯುವ ಮೋರ್ಚಾ ತಾಲ್ಲೂಕು ಅಧ್ಯಕ್ಷರಾಗಿ ಯುವನಾಯಕ ಬಸವರಾಜ ಮೇಲುಗಿರಿ ಆಯ್ಕೆಯಾಗಿದ್ದಾರೆ ಎಂದು ಕುರುಗೋಡು ಮಂಡಲದ ಭಾರತೀಯ ಜನತಾಪಕ್ಷದ ಅಧ್ಯಕ್ಷ ಮದಿರೆ ಕುಮಾರಸ್ವಾಮಿ ಆದೇಶ ಹೊರಡಿಸಿದ್ದಾರೆ.ಈ ಕುರಿತು ಮದಿರೆ ಕುಮಾರಸ್ವಾಮಿ ಮಾತನಾಡಿ ಯುವ ಮುಖಂಡ , ಪಕ್ಷದ ಕಟ್ಟಾಳು ಸಮಾಜಸೇವೆ . ಬಸವರಾಜ ಮೇಲುಗಿರಿ ರವರ ಭಾರತೀಯ ಜನತಾ ಪಕ್ಷದ ಸಂಘಟನಾತ್ಮಕ ಕಾರ್ಯಗಳನ್ನು ಗಮನಿಸಿ, ಕುರುಗೋಡು ಮಂಡಲದ ಯುವ ಮೋರ್ಚಾದ ಅಧ್ಯಕ್ಷರನ್ನಾಗಿ ನೇಮಕ ಮಾಡಲಾಗಿದೆ.ಪಕ್ಷದ ತತ್ವ, ಸಿದ್ಧಾಂತಗಳು ಮತ್ತು ಸಂಘಟನೆಯ ಬಲವರ್ಧನೆಗಾಗಿ ನಿಷ್ಠೆಯಿಂದ ಕಾರ್ಯನಿರ್ವಹಿಸಿ, ಪಕ್ಷವನ್ನು ಇನ್ನಷ್ಟು ಬಲಪಡಿಸುವಂತೆ ವಿನಂತಿಸುತ್ತೇವೆ. ತಮ್ಮ ಅವಧಿಯಲ್ಲಿ ಪಕ್ಷದ ಸಂಘಟನೆಗೆ ಹೊಸ ಸದಸ್ಯರನ್ನು ಸೇರಿಸುವುದು, ಕಾರ್ಯಕರ್ತರನ್ನು ಸಂಘಟಿಸುವುದು ಹಾಗೂ ಪಕ್ಷದ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸುವ ಜವಾಬ್ದಾರಿಯನ್ನು ನಿರ್ವಹಿಸಬೇಕಾಗಿದೆ ಎಂದರು. ಇನ್ನೂ ನೂತನ ಯುವ ಮೋರ್ಚಾ ಅಧ್ಯಕ್ಷರಾಗಿ ಆಯ್ಕೆಯಾದ ಮೇಲುಗಿರಿ ಬಸವರಾಜ್ ಮಾತನಾಡಿ ಪಕ್ಷದ ಬಲವರ್ಧನೆ, ಪಕ್ಷ ಸಂಘಟನೆ ಜೊತೆಗೆ ಕ್ಷೇತ್ರದಲ್ಲಿ ಮತ್ತೆ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಸನ್ಮಾನ್ಯ ಜನನಾಯಕರಾದ ಟಿ.ಹೆಚ್.ಸುರೇಶ್ ಬಾಬು ರವರು ಹಾಗೂ ಪಕ್ಷದ ಹಿರಿಯ ಮುಖಂಡರು ನನಗೆ ಯುವ ಮೋರ್ಚಾ ಅಧ್ಯಕ್ಷ ಸ್ಥಾನ ನೀಡಿರುವುದು ಖುಷಿ ನೀಡಿದೆ.ಇದು ಪಕ್ಷದಲ್ಲಿ ನನ್ನ ಜವಾಬ್ದಾರಿ ಇನ್ನಷ್ಟು ಹೆಚ್ಚು ಮಾಡಿದೆ.ಪಕ್ಷವನ್ನು ತಳಮಟ್ಟದಿಂದ ಸಂಘಟಿಸುವ ಮೂಲಕ ಸತತ ಪರಿಶ್ರಮದಿಂದ ಕ್ಷೇತ್ರದಲ್ಲಿ ಮತ್ತು ರಾಜ್ಯದಲ್ಲಿ ಬಿಜೆಪಿ ಪಕ್ಷವನ್ನು ಅಧಿಕಾರಕ್ಕೆ ತರಲು ಮಾಡಬೇಕಾದ ರೂಪುರೇಷೆಗಳನ್ನು ಜಾರಿಗೆ ತಂದು ಗೆಲುವಿಗೆ ಪ್ರಾಮಾಣಿಕ ಪ್ರಯತ್ನ ಮಾಡುವೆ ಎಂದರು.ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷರಾದ ಮದಿರೆ ಕುಮಾರಸ್ವಾಮಿ . ಜ ತಿಮ್ಮಾರೆಡ್ಡಿ ,ಗಾದಿಲಿಂಗಪ್ಪ, ಅಗಲೂರು ಸುರೇಶ್ ಬಾಬು, ಕೆ ವಿರುಪಾಕ್ಷಗೌಡ. ಶ್ರೀನಿವಾಸ ನಾಯಕ. ಡಿಶ್ ರಾಜು. ಪ್ರೇಮ್ ಕುಮಾರ್.ಸೋಮಶೇಖರ್ ಗೌಡ ಬಿ , ವೀರಭದ್ರಗೌಡ ,ರವಿರೆಡ್ಡಿ,ಲತಮ್ಮ, ರಬಿಯಾ ಸೇರಿದಂತೆ ಕಾರ್ಯಕರ್ತರು. ಪಕ್ಷದ ಪದಾಧಿಕಾರಿಗಳು. ಇದ್ದರು,


# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಜೂ.17–ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ ಅವರು ಬೆಂಗಳೂರಿನಿಂದ ವಿಮಾನದ ಮೂಲಕ 2026ರ ಜೂನ್ 19 ರಂದು ಶುಕ್ರವಾರ ಬೆಳಿಗ್ಗೆ 7.40 ಗಂಟೆಗೆ ಕಲಬುರಗಿಗೆ ಆಗಮಿಸುವರು. ನಂತರ ಅಂದು ಬೆಳಿಗ್ಗೆ 11.30 ಗಂಟೆಗೆ ಸುಲೇಪೇಟ್ ಕಾಂಗ್ರೆಸ್ ಪಕ್ಷದ ಕಚೇರಿ ಹತ್ತಿರದಲ್ಲಿ ಬ್ಲಾಕ್ ಕಾಂಗ್ರೆಸ್ ಕಾರ್ಯಕರ್ತರ ವತಿಯಿಂದ ಹಮ್ಮಿಕೊಳ್ಳಲಾದ ಸನ್ಮಾನ ಸಮಾರಂಭದಲ್ಲಿ ಭಾಗವಹಿಸುವರು. ಅಂದು ಮಧ್ಯಾಹ್ನ 12.30 ಗಂಟೆಗೆ ಸುಲೇಪೇಟ್ ಪೊಲೀಸ್ ಠಾಣೆಯ ಹತ್ತಿರದ ಸರ್ಕಾರಿ ಸಮುದಾಯ ಭವನದಲ್ಲಿ ಸೇಡಂ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಸುಲೇಪೇಟ್ ವೃತ್ತದ ಕಾಮಗಾರಿಗಳ ಪ್ರಗತಿ ಪರಿಶೀಲನಾ (ಕೆ.ಡಿ.ಪಿ.) ಸಭೆಯಲ್ಲಿ ಭಾಗವಹಿಸಿ ನಂತರ ಕಲಬುರಗಿಗೆ ಆಗಮಿಸಿ ವಾಸ್ತವ್ಯ ಮಾಡುವರು.

# ವಿದ್ಯಾರ್ಥಿಗಳಿಗೆ ಉಚಿತ ಅಧ್ಯಯನ ಕೇಂದ್ರ ಪ್ರಾರಂಭ

• ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ



ತಾಲೂಕಿನಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣವನ್ನು ಒದಗಿಸುವ ಉದ್ದೇಶದಿಂದ ಎಬಿಎಸ್ ಡ್ರೀಮ್ ಇಂಡಿಯಾ ಗ್ರೂಪ್ ವತಿಯಿಂದ ಉಚಿತ ಅಧ್ಯಯನ ಕೇಂದ್ರವನ್ನು ಪ್ರಾರಂಭಿಸಲಾಗುತ್ತಿದೆ. ಎಂದು ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕಿ ಶಂಶಾದ್ ಬೇಗಂ ತಿಳಿಸಿದ್ದಾರೆ.

ಪಟ್ಟಣದ ಬಂಡಿಹಳ್ಳಿ ಕ್ರಾಸ್ ಬಳಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಪೊಲೀಸ್ ಕಾನ್ಸ್ಟೇಬಲ್ ನಿಂದ ಹಿಡಿದು ಐಎಎಸ್, ಕೆಎಎಸ್ ಸೇರಿದಂತೆ ಎಲ್ಲಾ ರೀತಿಯ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡುವ ಅಧ್ಯಯನ ಕೇಂದ್ರವನ್ನು ಇದೇ ಭಾನುವಾರ ಉದ್ಘಾಟಿಸಲಾಗುವುದು ಎಂದು ಹೇಳಿದರು.

ಪ್ರಸಿದ್ಧ ಚಾಣಕ್ಯ ಅಕಾಡೆಮಿಗಳ ಮಾದರಿಯಲ್ಲಿ ದೊರೆಯುವ ಶಿಕ್ಷಣ ತರಬೇತಿಯನ್ನು ನಮ್ಮ ಕಲ್ಯಾಣ ಕರ್ನಾಟಕ ಭಾಗದ ವಿದ್ಯಾರ್ಥಿಗಳಿಗೆ ಉಚಿತ ಪ್ರವೇಶ ಕಲ್ಪಿಸಲಾಗುವುದು ಎಂದು ತಿಳಿಸಿದರು. ಎ ಬಿ ಎಸ್ ಸಂಸ್ಥೆಯೂ ತಿಳಿಸಿರುತ್ತಾರೆ.

ಇದರ ಸದುಪಯೋಗವನ್ನು ಹಳ್ಳಿ ಭಾಗದ ವಿದ್ಯಾರ್ಥಿಗಳು ಪಡೆದುಕೊಳ್ಳಬೇಕೆಂದು ಎಬಿಎ ಸಂಸ್ಥಾಪಕಿ ಶಂಶದ್ ಬೇಗಂ ಅವರು ಪತ್ರಿಕಾ ಗೋಷ್ಠಿಯಲ್ಲಿ ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಜೂನ್ 27ರಂದು ವಿದ್ಯಾರ್ಥಿವೇತನ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ನೀಡಲು ಮುಂದಾಗಿರುವ ಸಂಸದ ಡಾ.ಕೆ.ಸುಧಾಕರ್, ಜ್ಞಾನಸುಧಾ ಹೆಸರಿನ ವಿದ್ಯಾರ್ಥಿವೇತನ ಯೋಜನೆಯನ್ನು ಘೋಷಣೆ ಮಾಡಿದ್ದಾರೆ.

ಡಾ.ಕೆ.ಸುಧಾಕರ್ ಫೌಂಡೇಶನ್ ಮತ್ತು ಶ್ರೀ ಸಾಯಿಕೃಷ್ಣ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಜೂನ್ 27 ರಂದು ನಾಡಪ್ರಭು ಕೆಂಪೇಗೌಡ ಜಯಂತಿಯ ದಿನದಂದು ಸಂಜೆ 4 ಗಂಟೆಗೆ ಹೂ ಮಾರುಕಟ್ಟೆಯ ಮೈದಾನದಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ವಿದ್ಯಾರ್ಥಿಗಳಿಗೆ ಜ್ಞಾನಸುಧಾ ಹೆಸರಿನ ವಿದ್ಯಾರ್ಥಿವೇತನ ವಿತರಿಸಲಾಗುತ್ತಿದೆ ಎಂದು ಸಂಸದ ಡಾ.ಕೆ.ಸುಧಾಕರ್ ತಿಳಿಸಿದ್ದಾರೆ.

ಚಿಕ್ಕಬಳ್ಳಾಪುರದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಸಂಸದ ಡಾ.ಕೆ.ಸುಧಾಕರ್, ಈಗ ಸರ್ಕಾರಿ ಕಾಲೇಜುಗಳಲ್ಲೂ ಶುಲ್ಕ ಅಧಿಕವಾಗಿದೆ. ಆದ್ದರಿಂದ ವಿದ್ಯಾರ್ಥಿಗಳಿಗೆ ಶುಲ್ಕ ನೀಡುವುದು ಸೂಕ್ತ ಎಂದು ಕೆಲವರು ಸಲಹೆ ನೀಡಿದ್ದಾರೆ. ಅದಕ್ಕಾಗಿ □ಜ್ಞಾನಸುಧಾ□ ಹೆಸರಿನ ವಿದ್ಯಾಥಿವೇತನ ನೀಡಲು ತೀರ್ಮಾನಿಸಲಾಗಿದೆ. ಈವರೆಗೆ 9 ಸಾವಿರಕ್ಕೂ ಅಧಿಕ ಅರ್ಜಿಗಳು ಬಂದಿವೆ. ಜೂನ್ 20 ರಂದು ಕೊನೆಯ ದಿನಾಂಕವಾಗಿದ್ದು, ಆ ಬಳಿಕ ಅರ್ಹರನ್ನು ಗುರುತಿಸಲಾಗುತ್ತದೆ. ಪಿಯುಸಿ, ಪದವಿ, ಸ್ನಾತಕೋತ್ತರ, ವಿದ್ಯಾರ್ಥಿಗಳಿಗೆ ತಲಾ 5,000 ರೂ. ನೀಡಲಾಗುವುದು. ಇದೇ ದಿನ ಜನಪ್ರಿಯ ಕಲಾವಿದರಿಂದ ಸಂಗೀತ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.



ವಿದ್ಯಾರ್ಥಿಗಳು ಈ ನೆರವನ್ನು ಸದ್ಬಳಕೆ ಮಾಡಬೇಕು. ಉನ್ನತ ಶಿಕ್ಷಣ ಪಡೆದು ಉತ್ತಮ ಉದ್ಯೋಗ ಪಡೆಯಬೇಕು. ಈ ಭಾಗದ ವಿದ್ಯಾರ್ಥಿಗಳು ಎತ್ತರಕ್ಕೆ ಬೆಳೆಯಲು ಈ ವಿದ್ಯಾರ್ಥಿವೇತನ ಸಹಾಯವಾಗುತ್ತದೆ ಎಂದರು.

**ಕ್ಷೇತ್ರಕ್ಕೆ ಅಭಿವೃದ್ಧಿ ಕಾರ್ಯಕ್ರಮಗಳು**

ನಾನು ರಾಜಕೀಯಕ್ಕೆ ಬರುವ ಮೊದಲೇ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡಿದ್ದೆ. ಶಿಕ್ಷಣ ಹಾಗೂ ಆರೋಗ್ಯ ಕ್ಷೇತ್ರಕ್ಕೆ ನಾನು ಹೆಚ್ಚು ಒತ್ತು ನೀಡಿದ್ದೇನೆ. ಯಾವುದೇ ಧರ್ಮ, ಜಾತಿಗಳ ತಾರತಮ್ಯವಿಲ್ಲದೆ ಅನುಕೂಲ ಕಲ್ಪಿಸಿಕೊಡುತ್ತಿದ್ದೇನೆ. ಯಾರು ನನಗೆ ಮತ ನೀಡಿದ್ದಾರೆ ಎಂದು ನೋಡದೆಯೇ ಸಮಾಜ ಕಲ್ಯಾಣ ಕಾರ್ಯಕ್ರಮಗಳನ್ನು ಮಾಡುತ್ತಿದ್ದಾರೆ. 2008 ರಿಂದ ಆರಂಭವಾಗಿ ಸಾವಿರಾರು ವಿದ್ಯಾರ್ಥಿಗಳಿಗೆ ನೋಟ್‌ಪುಸ್ತಕ, ಬಸ್‌ಪಾಸ್ ಮೊದಲಾದ ಸೌಲಭ್ಯ ನೀಡಲಾಗಿದೆ. ನಾನು ಶಾಸಕನಾಗಿದ್ದಾಗ ಚಿಕ್ಕಬಳ್ಳಾಪುರ ವಿಧಾನಸಭಾ ಕ್ಷೇತ್ರದಲ್ಲಿ 3,000 ಮಹಿಳಾ ಸಂಘಗಳ ರಚನೆ, 300 ಕೋಟಿ ರೂ. ಬಡ್ಡಿ ರಹಿತ ಸಾಲ ವಿತರಣೆ ಮಾಡಲಾಗಿದೆ. ಗ್ರಾಮೀಣ ಮಹಿಳೆಯರಿಗೆ ಕ್ರೀಡೆಗಳಿಗೆ ಸ್ಫೂರ್ತಿ ನೀಡಲಾಗಿದೆ. ಡಾ.ಕೆ.ಸುಧಾಕರ್ ಫೌಂಡೇಶನ್ ಹಾಗೂ ಸಾಯಿಕೃಷ್ಣ ಚಾರಿಟೆಬಲ್ ಟ್ರಸ್ಟ್ ವತಿಯಿಂದ ಕುಕ್ಕರ್, ಮಿಕ್ಸರ್, ರೆಫ್ರಿಜರೇಟರ್, ಟಿವಿ ನೀಡಲಾಗಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿಯವರು ಉಜ್ವಲ ಯೋಜನೆಯಡಿ ಉಚಿತ ಅಡುಗೆ ಅನಿಲ ನೀಡಿದಂತೆ-ಯೇ, ಕ್ಷೇತ್ರದಲ್ಲಿ 75 ಸಾವಿರ ಕುಟುಂಬಕ್ಕೆ ಅಡುಗೆ ಸ್ಟೌವ್ ನೀಡಲಾಗಿದೆ. ಕೋವಿಡ್ ಸಮಯದಲ್ಲಿ ಆಶಾ ಕಾರ್ಯಕರ್ತೆಯರಿಗೆ ಫೌಂಡೇಶನ್‌ನಿಂದ ಪ್ರತಿ ತಿಂಗಳು 2 ವರ್ಷಗಳವರೆಗೆ 5,000 ರೂ. ನೀಡಲಾಗಿತ್ತು. 75 ಸಾವಿರ ಕುಟುಂಬಕ್ಕೆ 2 ವರ್ಷಗಳ ಕಾಲ ದಿನಸಿ ಕಿಟ್ ನೀಡಲಾಗಿತ್ತು. ಚಿಕ್ಕಬಳ್ಳಾಪುರ ಜಿಲ್ಲೆಯ ಜನರಿಗೆ ಬೆಂಗಳೂರಿನ ಎರಡು ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸಲು ಹಾಸಿಗೆ ಮೀಸಲಿಡಲಾಗಿತ್ತು. ಅದೇ ಸಮಯದಲ್ಲಿ ಬೃಹತ್ ಆರೋಗ್ಯ ಶಿಬಿರ ಏರ್ಪಡಿಸಿದ್ದು, ಅದು ಜಗತ್ತಿನ ಅತಿ ದೊಡ್ಡ ಆರೋಗ್ಯ ಶಿಬಿರ ಎಂದು ಹೆಸರಾಗಿತ್ತು. ಬಳಿಕ ಕೂಡ 2 ಸಾವಿರ ರೋಗಿಗಳಿಗೆ ಮುಂದುವರಿದ ಚಿಕಿತ್ಸೆ ನೀಡಿ ಅದಕ್ಕೆ ಬೇಕಾದ ಆರ್ಥಿಕ ನೆರವು ನೀಡಲಾಗಿತ್ತು ಎಂದು ತಿಳಿಸಿದರು.

**ಶುದ್ಧ ಕುಡಿಯುವ ನೀರಿನ ಘಟಕ**

ಜಿಲ್ಲೆಯಲ್ಲಿ ಧಾರ್ಮಿಕ ಪರಂಪರೆಯನ್ನು ಕಾಪಾಡಲು ಓಂ ಶಕ್ತಿ ಸಂಘಗಳಿಗೆ ನೆರವು, ಗಣೇಶ ಮೂರ್ತಿ ಖರೀದಿಗೆ ಸಹಾಯ, ಮುಸ್ಲಿನರಿಗೆ ರಮ್‌ಜಾನ್ ಕಿಟ್, ಕ್ರೈಸ್ತರಿಗೆ ಕ್ರಿಸ್‌ಮಸ್ ಕಿಟ್ ನೀಡಲಾಗಿದೆ. ಚಿಕ್ಕಬಳ್ಳಾಪುರ ಕ್ಷೇತ್ರದಲ್ಲಿ ಫೌಂಡೇಶನ್‌ನಿಂದಲೇ 60 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನೀಡಿದ್ದು, ಗ್ರಾಮೀಣ ಜನರು ನೀರು ಸೇವಿಸುತ್ತಿದ್ದಾರೆ. ಮುಂದಿನ ಎರಡು ವರ್ಷಗಳಲ್ಲಿ ಪ್ರತಿ ಗ್ರಾಮದಲ್ಲೂ ಶುದ್ಧ ಕುಡಿಯುವ ನೀರಿನ ಘಟಕ ನಿರ್ಮಿಸಿಕೊಡುತ್ತೇನೆ ಎಂದರು.

ಚಿಕ್ಕಬಳ್ಳಾಪುರ ಮೆಡಿಕಲ್ ಕಾಲೇಜು, ಮಂಚೇನಹಳ್ಳಿ ತಾಲೂಕು ಆಸ್ಪತ್ರೆ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ನಿರ್ಮಿಸಲಾಗಿದೆ. ಸಂಸದನಾದ ಬಳಿಕ ತಲಾ 65 ಲಕ್ಷ ರೂ. ವೆಚ್ಚದ 23 ಆರೋಗ್ಯ ಮಂದಿರಗಳನ್ನು ಜಿಲ್ಲೆಗೆ ತಂದಿದ್ದೇನೆ ಎಂದು ತಿಳಿಸಿದರು.

# ಕಲ್ಯಾಣ ಕರ್ನಾಟಕದ ಯುವ ವಿಜ್ಞಾನಿಗಳಿಗೆ ಹೊಸ ಆಶಾಕಿರಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಕಲ್ಯಾಣ ಕರ್ನಾಟಕದ ಭಾಗದಲ್ಲಿ ಹಲವಾರು ಯುವ ಸಂಶೋಧನಾ ವಿಜ್ಞಾನಿಗಳು ಮುಂಚೂಣಿಯಲ್ಲಿದ್ದು, ಅವರಿಗಾಗಿ ಮುಂದಿನ ದಿನಗಳಲ್ಲಿ ವಿವಿಯ ಕ್ಯಾಂಪಸ್‌ನಲ್ಲಿ ಬಯೋ ಇನ್ನೋವೇಷನ್ ಸೆಂಟರ್ ತೆರೆಯಲಾಗುವುದು ಎಂದು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಎಂ ಮುನಿರಾಜು ಅವರು ಹೇಳಿದರು.

ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಪ್ರೊ.ಸಿದ್ದು ಪಿ ಆಲಗೂರ ಸಭಾಂಗಣದಲ್ಲಿ ವಿಶ್ವವಿದ್ಯಾಲಯ ಮತ್ತು ಸೆಂಟರ್ ಫಾರ್ ನ್ಯಾನೋ ಮತ್ತು ಸಾಫ್ಟ್ ಮ್ಯಾಟರ್ ಸೈನ್ಸಸ್ ಆರ್ ಆಂಡ್ ಡಿ ಕೋಶವು ಜಂಟಿಯಾಗಿ ಬುಧವಾರ ಆಯೋಜಿಸಿದ್ದ 'ನ್ಯಾನೋ ಜಾಥಾ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಯೋ ಇನ್ನೋವೇಷನ್ ಸೆಂಟರ್ ಆರಂಭದಿಂದ ಕಲ್ಯಾಣ ಕರ್ನಾಟಕ ಭಾಗದ ಯುವ ವಿಜ್ಞಾನಿಗಳಿಗಾಗಿ ನಮ್ಮ ವಿಶ್ವವಿದ್ಯಾಲಯವು ಉತ್ತಮ ವೇದಿಕೆಯಾಗಲಿದೆ ಎಂದು ತಿಳಿಸಿದರು.




ಸಂಪನ್ಮೂಲ ವ್ಯಕ್ತಿಯಾಗಿ ಆಗಮಿಸಿದ್ದ ಬೆಂಗಳೂರಿನ ಸಿಇಎನ್‌ಎಸ್ ವಿಜ್ಞಾನಿ ಪ್ರೊ.ಸುಭಾಷ್ ಸಿ.ಕೆ ಅವರು ಮಾತನಾಡಿ, ಇಂಡಿಯಾ ನ್ಯಾನೋ ವಿಜ್ಞಾನ, ತಂತ್ರಜ್ಞಾನ ಮತ್ತು ನಾವಿನ್ಯತೆಯಲ್ಲಿ ಬೆಂಗಳೂರು ಪ್ರಮುಖ ಕೇಂದ್ರವಾಗಿದೆ. ವಿಜ್ಞಾನ ಕ್ಷೇತ್ರದ ಯುವ ಸಂಶೋಧಕರನ್ನು ತಂತ್ರಜ್ಞಾನದಲ್ಲಿ ಸಕ್ರಿಯಗೊಳಿಸುವಲ್ಲಿ ವೇದಿಕೆಯಾಗಿ ಈ ಕೇಂದ್ರವು ಕಾರ್ಯನಿರ್ವಹಿಸುತ್ತದೆ ಎಂದು ಹೇಳಿದರು.

ದೇಶದ ಉತ್ತರ ಮತ್ತು ದಕ್ಷಿಣ ಭಾಗಗಳ 12 ರಾಜ್ಯಗಳ 20 ವಿವಿಧ ಸ್ಥಳಗಳಲ್ಲಿ ಕಾರ್ಯಕ್ರಮವನ್ನು ಕೇಂದ್ರವು ಆಯೋಜಿಸಿದೆ. ಯುವ ವಿಜ್ಞಾನಿಗಳಿಗೆ ಸಂಪೂರ್ಣವಾಗಿ ನಾವೀನ್ಯತೆ ಮತ್ತು ಅನ್ವೇಷಣೆ ಆಧಾರಿತ ತರಬೇತಿಗೆ ಅನುವು ಮಾಡಿಕೊಡುವುದೇ ಕೇಂದ್ರದ ಉದ್ದೇಶವಾಗಿದೆ ಎಂದು ತಿಳಿಸಿದರು.

ವಿಶ್ವವಿದ್ಯಾಲಯದ ಕುಲಸಚಿವ ಪ್ರೊ.ವಿ.ಲೋಕೇಶ್, ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವ ಪ್ರೊ. ಎನ್.ಎಂ ಸಾಲಿ, ಅನ್ವಯಿಕ ವಿಜ್ಞಾನ ನಿಕಾಯದ ಡೀನರಾದ ಪ್ರೊ.ಹನುಮೇಶ್ ವೈದ್ಯ, ಶುದ್ಧ ವಿಜ್ಞಾನ ನಿಕಾಯದ ಡೀನರಾದ ಪ್ರೊ.ಖಡ್ಕೆ ಉದಯಕುಮಾರ ವೇದಿಕೆಯಲ್ಲಿದ್ದರು.

ವಿವಿಯ ಸಂಶೋಧನೆ ಮತ್ತು ಅಭಿವೃದ್ಧಿ ಕೋಶದ ನಿರ್ದೇಶಕ ಪ್ರೊ.ಕೆ. ಎಸ್ ಲೋಕೇಶ್ ಕಾರ್ಯಕ್ರಮದ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿ, ಅತಿಥಿಗಳನ್ನು ಸ್ವಾಗತಿಸಿದರು. ವಿದ್ಯಾರ್ಥಿನಿ ನಾಝಿಶ್ ನಿರೂಪಿಸಿದರು, ಪ್ರೊ.ಖಡ್ಕೆ ಉದಯಕುಮಾರ ವಂದಿಸಿದರು.

# ಜೂ.21 ನೀಟ್ ಮರು ಪರೀಕ್ಷೆಗೆ ಸಿದ್ಧತೆ: ಜಿಲ್ಲಾಧಿಕಾರಿ ಸಂಗಪ್ಪ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯಲ್ಲಿ ಜೂನ್ 21 ರಂದು ನಡೆಯಲಿರುವ ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ (ನೀಟ್-ಯುಜಿ) 2026ರ ಮರು ಪರೀಕ್ಷೆಯನ್ನು ಸುಗಮ, ಪಾರದರ್ಶಕ ಹಾಗೂ ದೋಷರಹಿತವಾಗಿ ನಡೆಸಲು ಎಲ್ಲ ರೀತಿ ಸಿದ್ದತೆ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸಂಗಪ್ಪ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ನೀಟ್ ಪರೀಕ್ಷೆ ಕುರಿತು ಪೂರ್ವಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಾಗಲಕೋಟೆ ನಗರದಲ್ಲಿ 11 ಪರೀಕ್ಷಾ ಕೇಂದ್ರಗಳಲ್ಲಿ ನೀಟ್ ಪರೀಕ್ಷೆ ನಡೆಯಲಿದ್ದು, ಒಟ್ಟು 3967 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷಾ ಸಿದ್ದತೆ ಮತ್ತು ಸುಗಮ ನಿರ್ವಹಣೆಗೆ ಸಂಬಂಧಿಸಿದಂತೆ ಪ್ರತಿಯೊಂದು ಕೇಂದ್ರಗಳ ಸಿಬ್ಬಂದಿಗಳ ಚಲನವಲನ ಗಮನಿಸಲು ಓರ್ವ ಸಿಬ್ಬಂದಿ ನೇಮಿಸಲು ತಿಳಿಸಿದರು.



ಪರೀಕ್ಷಾ ಕೇಂದ್ರಗಳಲ್ಲಿ ಅಗತ್ಯ ಮೂಲಸೌಕರ್ಯಗಳಾದ ವಿದ್ಯುತ್, ಕುಡಿಯುವ ನೀರು, ಸೌಚಾಲಯ, ತುರ್ತು ವೈದ್ಯಕೀಯ ಸೌಲಭ್ಯಗಳನ್ನು ಕಡ್ಡಾಯವಾಗಿ ಕಲ್ಪಿಸಬೇಕು. ಪರೀಕ್ಷಾರ್ಥಿಗಳು ಯಾವುದೇ ರೀತಿಯ ತೊಂದರೆ ತೊಂದತೆಯಾಗದಂತೆ ನೋಡಿಕೊಳ್ಳಬೇಕು. ಅಲ್ಲದೇ ಕಾನೂನು ಸುವ್ಯವಸ್ಥೆ ಕಾಪಾಡುವ ಕುರಿತು ಚರ್ಚೆ ನಡೆಸಿದ ಜಿಲ್ಲಾಧಿಕಾರಿಗಳು ಪ್ರಶ್ನೆ ಪತ್ರಿಕೆಗಳ ಸುರಕ್ಷತೆ ಸಾಗಣೆ, ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕಣ್ಗಾವಲು, ಪೊಲೀಸ್ ಬಂದೋಬಸ್ತ ಹಾಗೂ ಕೇಂದ್ರಗಳ ಸುತ್ತ ನಿಷೇದಾಜ್ಞೆ ಜಾರಿಗೊಳಿಸುವ ಕುರಿತು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನೀಟ್ ಮರು ಪರೀಕ್ಷೆ ಜೂನ್ 21 ರಂದು ಮಧ್ಯಾಹ್ನ 2 ರಿಂದ ಸಂಜೆ 5.15ರ ವರೆಗೆ ನಡೆಯಲಿದ್ದು, ಪರೀಕ್ಷೆಗೆ ಕುಳಿತ ವಿದ್ಯಾರ್ಥಿಗಳ ಪ್ರಿಸ್ಕಿಂಗ್ ಕಾರ್ಯ ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ವರೆಗೆ ನಡೆಯಲಿದ್ದು, ವಿದ್ಯಾರ್ಥಿಗಳು 11 ಗಂಟೆಗೆ ಹಾಜರಾಗಬೇಕು. ಪ್ರಿಸ್ಕಿಂಗ್ ಸಮಯದಲ್ಲಿ ಎನ್.ಟಿ.ಎ ನಿಯೋಜಿಸಿರುವ ಏಜೆನ್ಸಿ ಜೊತೆಗೆ ಓರ್ವ ಪೊಲೀಸ್ ಸಿಬ್ಬಂದಿ ನಿಯೋಜಿಸಿ ಅವರ ಮೂಲಕ ಪ್ರಿಸ್ಕಿಂಗ್ ಕಾರ್ಯ ನಡೆಸಬೇಕು. ಜೂನ್ ತಿಂಗಳಲ್ಲಿ ಮಳೆಗಾಲ ಇರುವದರಿಂದ ಪರೀಕ್ಷಾ ಕೇಂದ್ರದ ಕಟ್ಟಡದಲ್ಲಿ ನೀರು ಸೋರಿಕೆಯಾಗದಂತೆ ಮುಂಚಿತವಾಗಿ ತಪಾಸಣೆ ಮಾಡಲು ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸಿದ್ದಾರ್ಥ ಗೋಯಲ್ ಮಾತನಾಡಿ, ನೀಟ್ ಮರು ಪರೀ-ಕ್ಷೆಗೆ 11 ಪರೀಕ್ಷಾ ಕೇಂದ್ರಗಳಿದ್ದು, ಪ್ರತಿಯೊಂದು ಕೇಂದ್ರಗಳಿಗೆ 10 ಜನ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗುತ್ತಿದೆ. ಗೌಪ್ಯ ಸಾಮಗ್ರಿಗಳನ್ನು ಸುರಕ್ಷಿತವಾಗಿ ನಿರ್ವಹಿಸಲು ಬ್ಯಾಂಕಿನ ಸ್ಟ್ರಾಂಗ ರೂಮ್‌ಗೆ ಓರ್ವ ಎ.ಎಸ್.ಐ ಮತ್ತು 4 ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಲಾಗುತ್ತಿದೆ ಎಂದು ತಿಳಿಸಿದರು. ಸಭೆಯಲ್ಲಿ ಸರಕಾರಿ ಪಾಲಿಟೆಕ್ನಿಕ್ ಕಾಲೇಜನ ಪ್ರಾಚಾರ್ಯ ಪ್ರಭಾಕರ ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರು ಮತ್ತಿತರರು ಇದ್ದರು.

# ಯೋಜನೆಗಳು ಎಲ್ಲರಿಗೂ ಮುಟ್ಟಿಸುವ ಕಾರ್ಯವಾಗಲಿ: ಚವ್ಹಾಣ

• ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ

ಸರ್ಕಾರದ ಯೋಜನೆಗಳು ಎಲ್ಲರಿಗೂ ಮುಟ್ಟಿಸುವ ಕಾರ್ಯವಾಗಬೇಕು ಎಂದು ಗ್ಯಾರೆಂಟಿ ಯೋಜನೆಯ ಅಧ್ಯಕ್ಷ ಹಣಮಂತರಾವ ಚವ್ಹಾಣ ಹೇಳಿದರು.

ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ಬುಧವಾರ ನಡೆದ ಗ್ಯಾರೆಂಟಿ ಯೋಜನೆಯ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರಿ ಕರ್ಮಚಾರಿಗಳು ಪಂಚ ಗ್ಯಾರೆಂಟಿ ಯೋಜನೆಗಳ ಅನುಷ್ಠಾನ ಎಲ್ಲಾ ಫಲಾನುಭವಿಗಳಿಗೆ ಸದುಪಯೋಗ ವಾಗುವಂತೆ ಕಾರ್ಯಮಾಡಬೇಕು. ಗೃಹಲಕ್ಷ್ಮಿ ಯೋಜನೆ, ಅನ್ನಭಾಗ್ಯ ಯೋಜನೆ, ಶಕ್ತಿ ಯೋಜನೆ, ಯುವನಿಧಿ ಯೋಜನೆ ಮತ್ತು ಗೃಹಜ್ಯೋತಿ ಯೋಜನೆ ಸೇರಿದಂತೆ ಪಂಚಗ್ಯಾರಂಟಿಯ ಎಲ್ಲಾ ಅಧಿಕಾರಿಗಳೊಂದಿಗೆ ಕೂಲಕುಂಶವಾಗಿ ಚರ್ಚಿಸಿ, ತಾಲೂಕಿನಲ್ಲಿ ಈ ಎಲ್ಲಾ ಯೋಜನೆಗಳ ಅನುಷ್ಠಾನ ಸರಿಯಾದ ರೀತಿಯಲ್ಲಿ ಅರ್ಹ ಫಲಾನುಭವಿಗಳಿಗೆ ತಲುಪುವುಂತೆ ಕ್ರಮವಹಿಸಬೇಕು ಎಂದು ಅಧಿಕಾರಿಗಳಿಗೆ ತಾಕೀತು ಮಾಡಿದರು.

ಗೃಹ ಲಕ್ಷ್ಮಿ ಯೋಜನೆಗೆ ತಾಲೂಕಿನ 63996 ಫಲಾನುಭವಿಗಳು ನೊಂದಣಿ ಮಾಡಿಸಿದ್ದು ಅವರಲ್ಲಿ 63444 ಅರ್ಹ ಫಲಾನುಭವಿಗಳ ಖಾತೆಗೆ ಹಣ ನೀಡಲಾಗುತ್ತಿದೆ ಎಂದು ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮಾಹಿತಿ ನೀಡಿದರು. ಅನ್ನಭಾಗ್ಯ ಯೋಜನೆಯ ಅಡಿಯಲ್ಲಿ ತಾಲೂಕಿನಲ್ಲಿ ಒಟ್ಟು 80903 ಪಡಿತರ ಚೀಟಿ ಹೊಂದಿರುವ ಫಲಾನುಭವಿಗಳಿದ್ದಾರೆ. ಇವರಲ್ಲಿ ಗ್ರಾಮೀಣ ಭಾಗದ 66547 ಮತ್ತು ಪಟ್ಟಣದ 14356 ಫಲಾನುಭವಿಗಳು ಅನ್ಯಭಾಗ್ಯ ಯೋಜನೆಯ ಲಾಭ ಪಡೆಯುತ್ತಿದ್ದಾರೆ ಎಂದು ಆಹಾರ ನೀರೀಕ್ಷಕರು ಮಾಹಿತಿ ನೀಡಿದರು. ಶಕ್ತಿ ಯೋಜನೆಯ ಅಡಿಯಲ್ಲಿ ಸಾರಿಗೆ ಇಲಾಖೆಯವರು ಉತ್ತಮ ಸೇವೆ ಮಾಡಬೇಕು. ಕೆಲವುಸಲ ಬಸ್‌ಗಳು ಸರಿಯಾದ ಸಮಯಕ್ಕೆ ಬರುತ್ತಿಲ್ಲ ಎನ್ನುವ ಆರೋಪ ಇದೆ ಅದನ್ನು ಸರಿಪಡಿಸಬೇಕು. ಭಾಲ್ಕಿ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಮತ್ತು ಶಾಲಾ ಮಕ್ಕಳಿಗೆ ಸರಿಯಾದ ಸಮಯದಲ್ಲಿ ಬಸ್ ಒದಗಿಸಬೇಕು. ಶಾಲಾ ವಿದ್ಯಾರ್ಥಿಗಳು ಕೈ ಮಾಡಿದಲ್ಲಿ ಬಸ್ ನಿಲ್ಲಿಸಿ ಅವರನ್ನು ಹತ್ತಿಸಿಕೊಳ್ಳಬೇಕು ಎಂದು ಗ್ಯಾರೆಂಟಿ ಯೋಜನೆಯ ನೋಡಲ್ ಅಧಿಕಾರಿ ರಾಜಶೇಖರ ನೆಲ್ಲಿ ಸಾರಿಗೆ ಇಲಾಖೆಯ ಅಧಿಕಾರಿಗಳಿ ತಾಕೀತು ಮಾಡಿದರು.



**ಭಾಲ್ಕಿ: ಪಟ್ಟಣದ ತಾ.ಪಂ. ಸಭಾಂಗಣದಲ್ಲಿ ನಡೆದ ಪಂಚಗ್ಯಾರೆಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಗ್ಯಾರೆಂಟಿ ಯೋಜನೆಯ ಅಧ್ಯಕ್ಷ ಹಣಮಂತರಾವ ಚವ್ಹಾಣ ಮಾತನಾಡಿದರು.**

ಯುವನಿಧಿ ಯೋಜನೆಯಲ್ಲಿ ತಾಲೂಕಿನ 3001 ವಿದ್ಯಾರ್ಥಿಗಳು ತಮ್ಮ ಹೆಸರು ನೊಂದಣಿ ಮಾಡಿಕೊಂಡಿದ್ದು, ಫೆ.2026ರ ತಿಂಗಳಲ್ಲಿ ಪದವಿಧರ 1071 ಮತ್ತು ಡಿಪ್ಲೋಮಾ 19 ಒಟ್ಟು 1090 ವಿದ್ಯಾರ್ಥಿಗಳಿಗೆ ಮತ್ತು ಮಾ.2026 ರಲ್ಲಿ ಪದವಿಧರ 1180 ಮತ್ತು ಡಿಪ್ಲೋಮಾ 20 ಒಟ್ಟು 1200 ವಿದ್ಯಾರ್ಥಿಗಳಿಗೆ, ಎ.2026 ರಲ್ಲಿ ಪದವಿಧರ 1040 ಮತ್ತು ಡಿಪ್ಲೋಮಾ 19 ಒಟ್ಟು 1059 ವಿದ್ಯಾರ್ಥಿಗಳಿಗೆ ಯುವನಿಧಿ ಹಣ ಸಂದಾಯಮಾಡಲಾಗಿದೆ ಎಂದು ಮಾಹಿತಿ ನೀಡಿದರು. ಗೃಹಜ್ಯೋತಿ ಯೋಜನೆಯ ಅಡಿಯಲ್ಲಿ ತಾಲೂಕಿನಲ್ಲಿ 60270 ಗ್ರಾಹಕರಿದ್ದಾರೆ ಇವರಲ್ಲಿ ಸರಾಸರಿ 200 ಯುನಿಟಗಳ ಮೇಲಿನ ಬಳಕೆಯ ಗ್ರಾಹಕರು 858, ಆಗಿದ್ದು ಒಟ್ಟು ಗ್ರಾಹಕರು 59753 ಇದ್ದಾರೆ. ಇವರಲ್ಲಿ 58271 ಗ್ರಾಹಕರು ತಮ್ಮ ಹೆಸರು ನೊಂದಾಯಿಸಿದ್ದಾರೆ. 1482 ಗ್ರಾಹಕರು ನೊಂದಾಯಿಸಲು ಬಾಕಿ ಇದ್ದಾರೆ. ಇಲ್ಲಿಯವರೆಗೆ ಗೃಹ ಜ್ಯೋತಿ ಬಳಕೆ 90.15 ಮಿಲಿಯನ್ ಯುನಿಟ್‌ಗಳಾಗಿದ್ದು, ಅಗಷ್ಟ 23 ರಿಮದ ಮೇ.26 ರವರೆಗೆ 89.72 ಕೊಟಿ ರೂ. ಬೇಡಿಕೆಯಾಗಿದೆ ಎಂದು ಜೆಸ್ಕಾಂ ಅಧಿಕಾರಿಗಳು ಮಾಹಿತಿ ನೀಡಿದರು. ಇದಕ್ಕೆ ಗ್ರಾಹಕರ ಹೆಚ್ಚಿನ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಆಕ್ಷೇಪಗಳು ಬರುತ್ತಿವೆ. ಬಿಲ್ ನೀಡುವಾಗ ಎಲ್ಲವನ್ನು ಸರಿಪಡಿಸಿಕೊಂಡು ಹೋಗಬೇಕು ಎಂದು ಗ್ಯಾರೆಂಟಿ ಯೋಜನೆಯ ನೋಡಲ್ ಅಧಿಕಾರಿಗಳು ಜೆಸ್ಕಾಂ ಎಇಇಗೆ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಸೂರ್ಯಕಾಂತ ಬಿರಾದಾರ, ಗ್ಯಾರೆಂಟಿ ಯೋಜನೆಯ ಸದಸ್ಯರುಗಳಾದ ವಿಲಾಸ ಪಾಟೀಲ ದಾಡಗಿ, ಕೈಲಾಸ ಶಿವಾಜಿ ಭಾವಿಕಟ್ಟೆ, ಧನರಾಜ ಪಾಟೀಲ, ಓಂಕಾರ ರಾಮಶೆಟ್ಟಿ, ಸಂಗಮೇಶ ವಾಲಿ, ಜೈಶ್ರೀ ಮಾನಕಾರಿ, ಪಾಂಡುರಂಗ ಕಣಜೆ, ದಿಲೀಪ ಪಾಟೀಲ, ಸಂಜುಕುಮಾರ ಶಂಕರೆಪ್ಪ, ಮಂಗಳಾ ಬಾಬುರಾವ, ಸತೀಷ ಮಾಳಗೆ, ಗೋಪಾಲ ಸೂರ್ಯವಂಶಿ, ತಾ.ಪಂ. ಸಿಬ್ಬಂದಿ ಸುನೀಲ ಸೇರಿದಂತೆ ಎಲ್ಲಾ ಯೋಜನೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ರಾಂಪುರ ಕಾಲೇಜಿಗೆ ಯುಜಿಸಿ 2(ಎಫ್) ಮಾನ್ಯತೆ



**ಬಾಗಲಕೋಟೆ:** ತಾಲ್ಲೂಕಿನ ರಾಂಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿಗೆ ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ (ಯುಜಿಸಿ) 2(ಎಫ್) ಮಾನ್ಯತೆ ದೊರೆತಿದೆ.

ಈ ಮಾನ್ಯತೆಯೊಂದಿಗೆ ಕಾಲೇಜು ಯುಜಿಸಿಯ ಮಾನದಂಡಗಳ ವ್ಯಾಪ್ತಿಗೆ ಒಳಪಟ್ಟಿದ್ದು, ವಿವಿಧ ಶೈಕ್ಷಣಿಕ ಯೋಜನೆಗಳು, ಅಭಿವೃದ್ಧಿ ಕಾರ್ಯಕ್ರಮಗಳು, ಸಂಶೋಧನಾ ಚಟುವಟಿಕೆಗಳು ಹಾಗೂ ಮೂಲಸೌಕರ್ಯಗಳ ವೃದ್ಧಿಗಾಗಿ ಯುಜಿಸಿ ವತಿಯಿಂದ ದೊರೆಯುವ ಅನುದಾನ ಮತ್ತು ಸೌಲಭ್ಯಗಳನ್ನು ಪಡೆಯಲು ಅರ್ಹತೆ ಹೊಂದಿದೆ ಎಂದು ಪ್ರಾಂಶುಪಾಲ ಅಜಿತ್ ನಾಗರಾಳೆ ತಿಳಿಸಿದ್ದಾರೆ. ಯುಜಿಸಿ 2(ಎಫ್) ಮಾನ್ಯತೆ ಮುಂದಿನ ದಿನಗಳಲ್ಲಿ ಕಾಲೇಜಿಗೆ ನ್ಯಾಕ್ ಮೌಲ್ಯಮಾಪನ, ವಿವಿಧ ಸಂಶೋಧನಾ ಮತ್ತು ಅಭಿವೃದ್ಧಿ ಯೋಜನೆಗಳು, ವಿದ್ಯಾರ್ಥಿ ಹಾಗೂ ಶಿಕ್ಷಕರ ಕಲ್ಯಾಣ ಕಾರ್ಯಕ್ರಮಗಳು, ಗುಣಮಟ್ಟದ ಉನ್ನತ ಶಿಕ್ಷಣದ ವಿಸ್ತರಣೆ ಮತ್ತು ಇನ್ನಿತರ ಶೈಕ್ಷಣಿಕ ಸೌಲಭ್ಯಗಳನ್ನು ಪಡೆಯಲು ಹೊಸ ಅವಕಾಶಗಳನ್ನು ಕಲ್ಪಿಸಿಕೊಡಲಿದ್ದು, ಕಾಲೇಜಿನ ಸಮಗ್ರ ಅಭಿವೃದ್ಧಿಗೆ ಪೂರಕವಾಗಲಿದೆ ಎಂದು ಅವರು ತಿಳಿಸಿದ್ದಾರೆ.

## ಪಿಕೆಪಿಎಸ್ ಗಳಿಂದ ಗ್ರಾಮೀಣ ರೈತರಿಗೆ ಅನುಕೂಲ: ಶಾಸಕ




**ಬಾಗಲಕೋಟೆ:** ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘಗಳು ರೈತಾಪಿ ವರ್ಗಕ್ಕೆ ಬಹಳಷ್ಟು ಅನುಕೂಲವಾಗಿದ್ದು, ಆರ್ಥಿಕ ನೆರವು ನೀಡಿ ರೈತರ ಅಭಿವೃದ್ಧಿಗೆ ಸಹಕಾರಿಯಾಗಿವೆ ಎಂದು ಶಾಸಕ ಉಮೇಶ ಮೇಟಿ ಹೇಳಿದರು. ಸಮೀಪದ ನಾಯನೇಗಲಿ ಗ್ರಾಮದಲ್ಲಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಸಣ್ಣ ರೈತರಿಗೆ ಅಗತ್ಯ ಸಾಲ ಸೌಲಭ್ಯ, ಕೃಷಿ ಚಟುವಟಿಕೆಗಳಿಗೆ ರಸಗೊಬ್ಬರ ಸೇರಿ ವಿವಿಧ ಯೋಜನೆಗಳ ಪ್ರಯೋಜನಗಳನ್ನು ಕಲ್ಪಿಸುವಲ್ಲಿ ಈ ಸಂಘಗಳು ಪ್ರಮುಖ ಕಾರ್ಯ ನಿರ್ವಹಿಸುತ್ತಿವೆ ಎಂದರು. ರೈತರ ಅಭಿವೃದ್ಧಿಯನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ಸಂಘದ ಆಡಳಿತ ಮಂಡಳಿ ಮತ್ತು ಸಿಬ್ಬಂದಿ ಪಾರದರ್ಶಕತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಶಾಸಕರು ಸಲಹೆ ನೀಡಿದರು. ಸಿದ್ಧಲಿಂಗಯ್ಯ ಹಿರೇಮಠ ಸಾನ್ನಿಧ್ಯ ವಹಿಸಿದ್ದರು. ಜಿಪಂ. ಮಾಜಿ ಅಧ್ಯಕ್ಷ ಬಸವಂತಪ್ಪ ಮೇಟಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಪಿಕೆಪಿಎಸ್ ಅಧ್ಯಕ್ಷ ಸಂಗಪ್ಪ ಚಲವಾದಿ ಅಧ್ಯಕ್ಷತೆ ವಹಿಸಿದ್ದರು. ಸಿಇಓ ಮನೋಹರ ಕೋಟಿ, ಉಪಾಧ್ಯಕ್ಷ ದುಂಡಪ್ಪ ವಾಲಿಕಾರ, ನಿರ್ದೇಶಕರಾದ ಆರ್.ಎಚ್. ಕುಲಕರ್ಣಿ, ಡಾ. ಎಂ.ಆರ್. ಅಂಗಡಿ, ಐ. ಎಚ್.ಗೌಡರ, ಪರಶುರಾಮ ಕಟಬರ, ಯಲ್ಲಪ್ಪ ಜಟಗಿ, ಶರಣಗೌಡ ಹೊಸಗೌಡರ, ಮತ್ತಿತರರು ಇದ್ದರು.

## ಬ್ಯಾಂಕ್ ವ್ಯವಹಾರ ನೀಟಾಗಿರಲಿ: ಖಂಡ್ರೆ



**ಭಾಲ್ಕಿ:** ಅರ್ಬನ್ ಬ್ಯಾಂಕ್ ತನ್ನದೆಯಾದ ಗ್ರಾಹಕರನ್ನು ಹೊಂದಿ ಉತ್ತಮ ರೀತಿಯಿಂದ ಕಾರ್ಯನಿರ್ವಹಿಸುತ್ತಾ ಬರುತ್ತಿದೆ. ಮುಂದೆಯೂ ಬ್ಯಾಂಕ್ ವ್ಯವಹಾರ ನೀಟಾಗಿರಲಿ ಎಂದು ನೂತನ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತರಾಜ ಸಚಿವ ಈಶ್ವರ ಖಂಡ್ರೆ ಸಲಹೆ ನೀಡಿದರು. ಅರ್ಬನ್ ಬ್ಯಾಂಕ್‌ನಲ್ಲಿ ನೂತನ ಸಚಿವರಿಗಾಗಿ ಹಮ್ಮಿಕೊಂಡ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು. ಕಿರುಕುಳ ವ್ಯಾಪಾರಸ್ಥರಿಗೆ, ಕೃಷಿ ಕಾರ್ಮಿಕರಿಗೆ, ಬೀದಿ ವ್ಯಾಪಾರಸ್ಥರಿಗೆ ಬ್ಯಾಂಕ್ ನಿಯಮಾನುಸಾರ ಸಾಲ ನೀಡಿ, ವಸೂಲಿಯೂ ಹಾಗೆಯಿರಲಿ. ಸುಸ್ತಿ ಸಾಲಗಾರರಾಗದಂತೆ ಎಚ್ಚರವಹಿಸಿ, ಒಟ್ಟಿನಲ್ಲಿ ಬ್ಯಾಂಕ್ ಪ್ರಗತಿದತ್ತ ದಾಪುಗಾಲ ಹಾಕುವಂತೆ ಬ್ಯಾಂಕ್ ಸಿಬ್ಬಂದಿ ಕರ್ತವ್ಯ ನಿರ್ವಹಿಸಬೇಕು ಎಂದು ಹೇಳಿದರು. ಈ ಸಂಧರ್ಭದಲ್ಲಿ ಬ್ಯಾಂಕ್ ಅಧ್ಯಕ್ಷ ಶಿವುಕುಮಾರ ಕಲ್ಯಾಣೆ, ನಿರ್ದೇಶಕರಾದ ಚಂದ್ರಶೇಖರ ವಂಕೆ, ಜೀವನ ಪೆದ್ದೆ, ದಿಲೀಪಕುಮಾರ ಸುಂಟೆ, ನಿರಂಜನ ಅಷ್ಟೂರೆ, ಅನಿಲಕುಮಾರ ಲೋಖಂಡೆ, ಬಸವರಾಜ ಬೋರಡೆ, ಸೂರ್ಯಮತಿ ಮಡ್ಡೆ, ಮನಿಶಾ ವಾಲೆ, ಶೃತಿ ಪಾಟೀಲ್, ಬಾಲಾಜಿ ಬಾಮನೆ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ವ್ಯವಸ್ಥಾಪಕ ಪ್ರಶಾಂತ ಖಂಡ್ರೆ, ಕೆಯುಡಬ್ಲುಜೆ ಕಾರ್ಯದರ್ಶಿ ಸಂತೋಷ ಬಿಜಿ ಪಾಟೀಲ್ ಸೇರಿದಂತೆ ಬ್ಯಾಂಕ್ ಸಿಬ್ಬಂದಿ ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ ಇಂದು



**ಕಮಲನಗರ:** ಬೀದರ್ ಕಾರ್ಯ ಮತ್ತು ಪಾಲನೆ ವಿಭಾಗದ ವ್ಯಾಪ್ತಿಯಲ್ಲಿ ಔರಾದ್ (ಬಾ) ಉಪ-ವಿಭಾಗದ ಕಮಲನಗರ (ಡಿಗ್ಗಿ) 110 ಕೆ.ವಿ ಉಪ-ಕೇಂದ್ರದಲ್ಲಿ ತುರ್ತು ಕೆಲಸದ ಹಿನ್ನೆಲೆಯಲ್ಲಿ ಜೂ.18 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 2 ರವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಜೆಸ್ಕಾಂನ ತಿಳಿಸಿದೆ. 11 ಕೆ.ವಿ. ತೋರಣಾ, 11 ಕೆ.ವಿ. ಡೋಣಗಾಂವ 11 ಕೆ.ವಿ. ಮುರ್ಕಿ, 11 ಕೆ.ವಿ. ಕಮಲನಗರ, 11 ಕೆ.ವಿ. ಚಾಂಡೇಶ್ವರ, 11 ಕೆ.ವಿ. ಮದನೂರ್ 11 ಕೆ.ವಿ. ಖತ್ತಗಾಂವ ಹಾಗೂ 11 ಕೆ.ವಿ. ಸಂಗಮ್, 11 ಕೆ.ವಿ. ಐ.ಪಿ. ರಂಡ್ಯಾಳ್, 33 ಕೆ.ವಿ. ಕಮಲನಗರ ಮತ್ತು 33 ಕೆ.ವಿ. ಅಳಂದಿ ಫೀಡರ್‌ನಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಪ್ರಯುಕ್ತ ಗ್ರಾಹಕರು ಸಹಕರಿಸಬೇಕು ಎಂದು ತಿಳಿಸಲಾಗಿದೆ.

## ಹಿಂದೂ ಸಮಾವೇಶಕ್ಕೆ ಅನುಮತಿ ನಿರಾಕರಣೆ: ತನಿಖೆಗೆ ಆಗ್ರಹ..!

**ಬೀದರ್:** ಜಿಲ್ಲೆಯ ಬಸವಕಲ್ಯಾಣದಲ್ಲಿ ಜೂನ್ 28ರಂದು ನಡೆಯಬೇಕಿದ್ದ ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶಕ್ಕೆ ತಾಲ್ಲೂಕು



ಆಡಳಿತ ಅನುಮತಿ ನಿರಾಕರಿಸಿರುವುದನ್ನು ಖಂಡಿಸಿ, ಈ ಕುರಿತು ನ್ಯಾಯಾಂಗ ತನಿಖೆ ನಡೆಸುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಸಮಾಜ ಸೇವಕ ಗುರುನಾಥ ವಡ್ಡೆ ಅವರು ಸಲ್ಲಿಸಿರುವ ಮನವಿಯಲ್ಲಿ, ಸಮಾವೇಶಕ್ಕೆ ಅನುಮತಿ ನಿರಾಕರಿಸಿರುವುದು ಭಾರತೀಯ ಸಂವಿಧಾನದ ಅನುಚ್ಛೇದ 19(1)(ಎ), 19(1)(ಬಿ) ಹಾಗೂ 25(1)ರಡಿ ನಾಗರಿಕರಿಗೆ ನೀಡಿರುವ ಅಭಿವ್ಯಕ್ತಿ ಸ್ವಾತಂತ್ರ್ಯ, ಶಾಂತಿಯುತ ಸಭೆ ನಡೆಸುವ ಹಕ್ಕು ಹಾಗೂ ಧಾರ್ಮಿಕ ಸ್ವಾತಂತ್ರ್ಯದ ಹಕ್ಕುಗಳ ಉಲ್ಲಂಘನೆಯಾಗಿದೆ ಎಂದು ಆರೋಪಿಸಿದ್ದಾರೆ.

ಪ್ರಜಾಪ್ರಭುತ್ವವ್ಯವಸ್ಥೆಯಲ್ಲಿ ನಾಗರಿಕರಿಗೆ ದೊರೆತಿರುವ ಮೂಲಭೂತ ಹಕ್ಕುಗಳನ್ನು ನಿರಾಕರಿಸುವುದು ಸಂವಿಧಾನ ವಿರೋಧಿ ಕ್ರಮವಾಗಿದ್ದು, ಇದರಲ್ಲಿ ತಾಲ್ಲೂಕು ಆಡಳಿತದ ದುರುದ್ದೇಶ ಅಡಗಿದೆ ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

ಸಮಾವೇಶಕ್ಕೆ ಅನುಮತಿ ನಿರಾಕರಿಸಿರುವ ಕ್ರಮದ ಬಗ್ಗೆ ನ್ಯಾಯಾಂಗ ತನಿಖೆ ನಡೆಸಿ, ಸಂವಿಧಾನಬದ್ಧ ಹಕ್ಕುಗಳ ಉಲ್ಲಂಘನೆ ಆಗಿದೆ-ಯೇ ಎಂಬುದನ್ನು ಪರಿಶೀಲಿಸಬೇಕು ಎಂದು ಗುರುನಾಥ ವಡ್ಡೆ ಜಿಲ್ಲಾಧಿಕಾರಿಗಳನ್ನು ಆಗ್ರಹಿಸಿದ್ದಾರೆ.

## ಕಲುಷಿತ ನೀರು ಸೇವನೆ: ಅಸ್ವಸ್ಥ

**ಕಲಬುರಗಿ:** ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಸ್ನಾತಕೋತ್ತರ ಬಾಲಕರ ವಸತಿ ನಿಲಯದಲ್ಲಿ (ಹಳೆಯ ವಿಶ್ವವಿದ್ಯಾಲಯ) ಜೂನ್ 15 ರಂದು ಬೆಳಿಗ್ಗೆ 8:30ರ ಸುಮಾರಿಗೆ ವಿದ್ಯಾರ್ಥಿಗಳು ಚಹಾ ಸೇವಿಸುವ ಸಮಯದಲ್ಲಿ ನೀರು ಕುಡಿಯಲು ಹೋದಾಗ ನೀರಿನಲ್ಲಿ ದುರ್ವಾಸನೆ ಬಂದಿದೆ. ಇದರಿಂದ ಅನುಮಾನಗೊಂಡು ವಿದ್ಯಾರ್ಥಿಗಳು ಫಿಲ್ಟರ್ ಟ್ಯಾಂಕ್ ಪರಿಶೀಲಿಸಿದಾಗ ಎರಡು ಸತ್ತ ಹಲ್ಲಿಗಳು ಬಿದ್ದಿರುವುದು ಕಂಡುಬಂದಿದೆ.

ಈ ನೀರನ್ನು ಕುಡಿದಿದ್ದ ಕೆಲವು ವಿದ್ಯಾರ್ಥಿಗಳಲ್ಲಿ ಹೊಟ್ಟೆ ನೋವು ಮತ್ತು ವಾಂತಿ ಕಾಣಿಸಿಕೊಂಡಿದ್ದರಿಂದ, ಅಸ್ವಸ್ಥರಾಗಿದ್ದ 20 ವಿದ್ಯಾರ್ಥಿಗಳಿಗೆ ಜಿಮ್ಸ್ ಆಸ್ಪತ್ರೆಯಲ್ಲಿ ಯಶಸ್ವಿ ಚಿಕಿತ್ಸೆ ನೀಡಲಾಗಿದೆ. ಇಬ್ಬರು ವಿದ್ಯಾರ್ಥಿಗಳನ್ನು ಒಳರೋಗಿ ವಿಭಾಗದಲ್ಲಿ ಹಾಗೂ 18 ವಿದ್ಯಾರ್ಥಿಗಳನ್ನು ಹೊರರೋಗಿ ವಿಭಾಗದಲ್ಲಿ ಉಪಚರಿಸಲಾಗಿದ್ದು, ಎಲ್ಲರೂ ಗುಣಮುಖರಾದ ನಂತರ ಅಂದೇ ಸಾಯಂಕಾಲ ಡಿಸ್ಚಾರ್ಜ್ ಮಾಡಲಾಗಿದೆ. ಸದ್ಯ ಪರಿಸ್ಥಿತಿ ಸಂಪೂರ್ಣ ನಿಯಂತ್ರಣದಲ್ಲಿದೆ.ನೀರು ಕುಡಿದು ಸದ್ಯ ವಸತಿ ನಿಲಯದಲ್ಲಿ ಯಾವುದೇ ಹೊಸ ಪ್ರಕರಣಗಳು ಕಂಡುಬಂದಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಅವರು ತಿಳಿಸಿದ್ದಾರೆ.

ಆರೋಗ್ಯ ಇಲಾಖೆಯಿಂದ ಕೈಗೊಂಡ ಕ್ರಮಗಳು: ಬಾಧಿತ ಎಲ್ಲ ವಿದ್ಯಾರ್ಥಿಗಳಿಗೆ ಜಿಮ್ಸ್ ಆಸ್ಪತ್ರೆಯಲ್ಲಿ ಸೂಕ್ತ ವೈದ್ಯಕೀಯ ಚಿಕಿತ್ಸೆ ನೀಡಲಾಗಿದೆ. ವಸತಿ ನಿಲಯದ ಎಲ್ಲಾ ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ ಪರೀಕ್ಷೆಗಾಗಿ ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಅಲ್ಲದೆ ಸದ್ಯಕ್ಕೆ ಪರ್ಯಾಯ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಲಾಗಿದೆ. ನಂದೂರ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ಮುಂಜಾಗ್ರತಾ ಹಾಗೂ ನಿಯಂತ್ರಣ ಕ್ರಮಗಳಿಗಾಗಿ ಆರೋಗ್ಯ ಸಿಬ್ಬಂದಿಗಳನ್ನು ವಸತಿ ನಿಲಯಕ್ಕೆ ನಿಯೋಜಿಸಲಾಗಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಧಿಕಾರಿಗಳಿಗೆ ಮಾಹಿತಿ ನೀಡಲಾಗಿದ್ದು, ಅವರು ವಸತಿ ನಿಲಯದ ಎಲ್ಲಾ ಕಚ್ಚಾ ಮತ್ತು ಒಣ ಆಹಾರ ಪದಾರ್ಥಗಳನ್ನು ಸಂಗ್ರಹಿಸಿ ಕಲಬುರಗಿಯ ಫುಡ್ ಲ್ಯಾಬ್‌ಗೆ ಪರೀಕ್ಷೆಗಾಗಿ ಕಳುಹಿಸಿದ್ದಾರೆ. ಇಲಾಖೆಯ ವತಿಯಿಂದ ವಸತಿ ನಿಲಯದ ಎಲ್ಲಾ ವಿದ್ಯಾರ್ಥಿಗಳಿಗೆ ವೈಯಕ್ತಿಕ ನೈರ್ಮಲ್ಯದ ಬಗ್ಗೆ ಅರಿವು ಮೂಡಿಸಲಾಗಿದೆ. ಇದರೊಂದಿಗೆ, ನಿಲಯದ ಎಲ್ಲಾ ನೀರಿನ ಟ್ಯಾಂಕ್‌ಗಳನ್ನು ತೊಳೆದು ಕ್ಲೋರಿನೇಷನ್ ಮಾಡಿಸಲಾಗಿದೆ. ವಸತಿ ನಿಲಯದಲ್ಲಿ ಸದ್ಯಕ್ಕೆ ಪರಿಸ್ಥಿತಿ ಸಂಪೂರ್ಣ ಹತೋಟಿಯಲ್ಲಿದ್ದು, ಆತಂಕ ಪಡುವ ಅಗತ್ಯವಿಲ್ಲ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆ ತಿಳಿಸಿದ್ದಾರೆ.

## ತರಲಕಟ್ಟಿಯಲ್ಲಿ ನೂತನ ಮಸೀದಿ ಉದ್ಘಾಟನೆ



**ಕೊಪ್ಪಳ:** ಜಿಲ್ಲೆಯ ಯಲಬುರ್ಗಾ ತಾಲೂಕಿನ ತರಲಕಟ್ಟಿ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಲಾದ ಮಸೀದಿಯ ಉದ್ಘಾಟನಾ ಕಾರ್ಯಕ್ರಮವು ಭಕ್ತಿಭಾವ ಹಾಗೂ ಸೌಹಾರ್ದ ಮತ್ತು ಮುಸ್ಲಿಂ ಬಾಂಧವರಿಂದ ವಾತಾವರಣದಲ್ಲಿ ನೆರವೇರಿತು.

ಕಾರ್ಯಕ್ರಮದಲ್ಲಿ ಗ್ರಾಮದ ಎಲ್ಲ ಸಮುದಾಯದ ಮುಖಂಡರು,ಹಿರಿಯರು ಹಾಗೂ ಅಪಾರ ಸಂಖ್ಯೆಯಲ್ಲಿ ಗ್ರಾಮಸ್ಥರು ಭಾಗವಹಿಸಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ನೂತನ ಮಸೀದಿಯು ಗ್ರಾಮದ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳಿಗೆ ಸಹಕಾರಿಯಾಗಲಿದೆ ಎಂದು ಮುಖಂಡರು ಅಭಿಪ್ರಾಯ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತೇಜನಗೌಡ ಪೊಲೀಸ್ ಪಾಟೀಲ್. ಪ್ರಭುಗೌಡ ಪೊಲೀಸ್ ಪಾಟೀಲ್. ಕರಿಯಪ್ಪ ಶಿಲ್ಪಿ. ಹನುಮಂತಪ್ಪ ಗುರುಕಾರ. ಮುದಿಯಪ್ಪ ಮೇಟಿ. ದೇವೇಂದ್ರಪ್ಪ ಪೂಜಾರ. ವೆಂಕೋಬ್ ನಾಯಕ್. ನಾಗಪ್ಪ ಕಟ್ಟಿಮನಿ. ಮಲ್ಲನಗೌಡ ವಕೀಲರು. ಹನುಮಂತಪ್ಪ ದಳಪತಿ ಮೇಟಿ. ವಿರುಪಾಕ್ಷಪ್ಪ ಕೊಡದಾಳ. ವೀರೇಶ್ ನಾಯಕ್. ರಂಗನಾಥ ವಲ್ಮಕೊಂಡಿ . ಬಸಪ್ಪ ನೆಲಜೇರಿ. ವಿರುಪಣ್ಣ ಕೊಡದಾಳ. ತೋಟಪ್ಪ ಬೇವೂರು. ಶ್ರೀಕಾಂತಗೌಡ ಮಾಲಿ ಪಾಟೀಲ್ ಪತ್ರಕರ್ತರು. ವೀರನಗೌಡ ಪೊಲೀಸ್ ಪಾಟೀಲ್. ಬಸಪ್ಪ ಕೋಳೂರು. ಹನುಮಂತ್ ಹಿರೇಮನಿ. ಯಮನೂರಪ್ಪ ಪೊಲೀಸ್ ಪಾಟೀಲ್. ನಾಗಪ್ಪ ಚುಕುಣಿ. ಶರಣಪ್ಪ ಕಂಬಳಿ. ಶರಣಪ್ಪ ಮೇಟಿ. ಯಮನೂರಪ್ಪ ತಳವಾರ್. ಸಣ್ಣಯನೂರಪ್ಪ ಹರಿಜನ. ಬಸಪ್ಪ ಬ್ಯಾಳಿ. ಹನುಮಗೌಡ ಮಾಲಿ ಪಾಟೀಲ್. ಹಾಗೂ ಗ್ರಾಮದ ಮುಖಂಡರುಗಳಿಗೆ ಸನ್ಮಾನ ನೆರವೇರಿಸಿ, ಗ್ರಾಮದ ಜನರಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸೌಹಾರ್ದತೆ ಸದಾ ನೆಲೆಸಲಿ ಎಂದು ಪ್ರಾರ್ಥಿಸಿದರು. ಕಾರ್ಯಕ್ರಮದಲ್ಲಿ ಮಾತನಾಡಿದ ಮುಖಂಡರು, ಗ್ರಾಮದಲ್ಲಿ ಎಲ್ಲಾ ಸಮುದಾಯದವರು ಒಗ್ಗಟ್ಟಿನಿಂದ ಜೀವನ ನಡೆಸುತ್ತಿದ್ದು, ಈ ಮಸೀದಿಯ ನಿರ್ಮಾಣವು ಗ್ರಾಮದ ಅಭಿವೃದ್ಧಿಯ ಒಂದು ಭಾಗವಾಗಿದೆ ಎಂದು ಹೇಳಿದರು. ನಂತರ ಭಕ್ತರಿಗೆ ಪ್ರಸಾದ ಹಾಗೂ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ಕಾರ್ಯಕ್ರಮವು ಶಾಂತಿಯುತವಾಗಿ ಹಾಗೂ ಯಶಸ್ವಿಯಾಗಿ ಮುಕ್ತಾಯಗೊಂಡಿತು.

# ಕಾಂಗ್ರೆಸ್ ವಿರುದ್ಧ ರಮೇಶ ಜಗಜಣಗಿ ವಾಗ್ದಾಳಿ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**



ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ದೇಶವನ್ನು ಅಭಿವೃದ್ಧಿಯ ಪಥದಲ್ಲಿ ಮುನ್ನಡೆಸುತ್ತಿರುವುದನ್ನು ಶ್ಲಾಘಿಸಿದ ಸಂಸದ ರಮೇಶ ಜಿಗಜಿಣಗಿ ಅವರು, ಇದೇ ವೇಳೆ ವಿರೋಧ ಪಕ್ಷವಾದ ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ಹೌದು ಬುಧವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಂಸದ ರಮೇಶ ಜಿಗಜಿಣಗಿ ಅವರು ನರೇಂದ್ರ ಮೋದಿಯವರ ಸುದೀರ್ಘ ಅವಧಿಯ ಸಾಧನೆಗಳು ಮತ್ತು ದೇಶದ ಸರ್ವತೋಮುಖ ಪ್ರಗತಿಯನ್ನು ಜನತೆಯ ಮುಂದಿಡುತ್ತಾ, ಕಾಂಗ್ರೆಸ್‌ನ ದಶಕಗಳ ಆಡಳಿತದ ವೈಫಲ್ಯಗಳನ್ನು ಅವರು ತರಾಟೆಗೆ ತೆಗೆದುಕೊಂಡಿದ್ದಾರೆ.

ಮೋದಿ ಸರ್ಕಾರದ ಐತಿಹಾಸಿಕ ಸಾಧನೆಗಳನ್ನು ಸಂಸದ ರಮೇಶ ಜಿಗಜಿಣಗಿ ಅವರು ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವವನ್ನು ಶ್ಲಾಘಿಸಿದರು. ಕಳೆದ 12 ವರ್ಷಗಳಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿದ್ದ ಅವಧಿಯಿಂದ ಹಿಡಿದು ಇಂದಿನವರೆಗಿನ ಅವರ ಸುದೀರ್ಘ ಸಾರ್ವಜನಿಕ ಸೇವೆಯನ್ನು ಸ್ಮರಿಸುತ್ತಾ, ದೇಶ ಕಂಡಿರುವ ಮಹತ್ತರ ಬದಲಾವಣೆಗಳನ್ನು ಅವರು ಪಟ್ಟಿ ಮಾಡಿ ತಿಳಿಸಿದರು.

ಜಾಗತಿಕ ಮಟ್ಟದಲ್ಲಿ ಭಾರತದ ಪ್ರತಿಷ್ಠೆಯು ಹಿಂದೆಂದೂ ಕಾಣದ ರೀತಿಯಲ್ಲಿ ಭಾರತದ ಗೌರವ ಜಾಗತಿಕ ಮಟ್ಟದಲ್ಲಿ ಹೆಚ್ಚಾಗಿದೆ. ಇಂದು ಜಗತ್ತಿನ ಪ್ರಮುಖ ನಿರ್ಧಾರಗಳಲ್ಲಿ ಭಾರತದ ಪಾತ್ರ ನಿರ್ಣಾಯಕವಾಗಿದೆ, ವಿಶ್ವದ ದುರ್ಬಲ ಆರ್ಥಿಕತೆಗಳ ಪಟ್ಟಿಯಲ್ಲಿದ್ದ ಭಾರತವನ್ನು ಇಂದು ಜಗತ್ತಿನ ಐದನೇ ಅತಿ ದೊಡ್ಡ ಆರ್ಥಿಕ ಶಕ್ತಿಯನ್ನಾಗಿ ಮೋದಿ ಸರ್ಕಾರ ರೂಪಿಸಿದೆ.

ಮೂಲಸೌಕರ್ಯ ಕ್ರಾಂತಿಯಲ್ಲಿ ಹೆದ್ದಾರಿಗಳು, ರೈಲ್ವೆ ಮೇಲ್ದರ್ಜೀಕರಣ, ಡಿಜಿಟಲ್ ಇಂಡಿಯಾ ಮತ್ತು ಗ್ರಾಮೀಣ ಭಾಗಗಳಿಗೆ ವಿದ್ಯುತ್ ಹಾಗೂ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವಲ್ಲಿ ಅಭೂತಪೂರ್ವ ಪ್ರಗತಿ ಸಾಧಿಸಲಾಗಿದೆ.

ಬಡವರ ಕಲ್ಯಾಣಕ್ಕಾಗಿಯೆ ಆಯುಷ್ಮಾನ್ ಭಾರತ್, ಪ್ರಧಾನ ಮಂತ್ರಿ ಆವಾಸ್ ಯೋಜನೆ, ಮತ್ತು ಉಚಿತ ಪಡಿತರ ಯೋಜನೆಗಳ ಮೂಲಕ ದೇಶದ ಕೋಟ್ಯಂತರ ಬಡ ಕುಟುಂಬಗಳಿಗೆ ನೇರ ಸೌಲಭ್ಯ ತಲುಪಿಸಲಾಗಿದೆ ಎಂದರು.

ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಸಂಸದ ರಮೇಶ ಜಿಗಜಿಣಗಿ ಕಾಂಗ್ರೆಸ್ ಪಕ್ಷದ ನೀತಿಗಳ ವಿರುದ್ಧ ಸಂಸದರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು. ಕಾಂಗ್ರೆಸ್ ಕೇವಲ ಸುಳ್ಳು ಭರವಸೆಗಳನ್ನು ನೀಡುವ ಮೂಲಕ ದಶಕಗಳ ಕಾಲ ಅಧಿಕಾರ ನಡೆಸಿತೇ ವಿನಃ ದೇಶದ ನೈಜ ಅಭಿವೃದ್ಧಿಗೆ ಶ್ರಮಿಸಲಿಲ್ಲ ಎಂದು ಆರೋಪಿಸಿದರು.

ಕಾಂಗ್ರೆಸ್ ಪಕ್ಷಕ್ಕೆ ದೇಶದ ಹಿತಾಸಕ್ತಿಗಿಂತ ಒಂದು ಕುಟುಂಬದ ಹಿತಾಸಕ್ತಿಯೇ ಮುಖ್ಯವಾಗಿತ್ತು. ಭ್ರಷ್ಟಾಚಾರ ಮತ್ತು ತುಷ್ಟೀಕರಣ ರಾಜಕಾರಣದಿಂದ ದೇಶವನ್ನು ನಷ್ಟಕ್ಕೆ ತಳ್ಳಿದ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ. ಆದರೆ ಮೋದಿ ಸರ್ಕಾರ 'ಸಬ್ ಕಾ ಸಾಥ್, ಸಬ್ ಕಾ ವಿಕಾಸ್' ಮಂತ್ರದೊಂದಿಗೆ ಯಾವುದೇ ತಾರತಮ್ಯವಿಲ್ಲದೆ ಎಲ್ಲ ವರ್ಗದ ಜನರಿಗೂ ನ್ಯಾಯ ಒದಗಿಸಿದೆ ಎಂದು ತಿಳಿಸಿದರು.

## ಭಕ್ತಿ ಭಾವದಿಂದ ಪ್ರತಾಪ್ ಸಿಂಹ ಜಯಂತಿ

• **ಮಲ್ಲಮ್ಮ ನುಡಿ ವಾರ್ತೆ ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿ ರಾಷ್ಟ್ರೋತ್ಥಾನ ವಿದ್ಯಾಕೇಂದ್ರ ಸಿಬಿಎಸ್‌ಇ ಶಾಲೆಯಲ್ಲಿ ಇಂದು ಮಹಾರಾಣಾ ಪ್ರತಾಪ್ ಸಿಂಹ ಜಯಂತಿಯನ್ನು ಆಚರಿಸಲಾಯಿತು. ಶಾಲೆಯ ಸಮಾಜ ವಿಜ್ಞಾನ ಶಿಕ್ಷಕರಾದ ಮಹೇಶ್ ರವರು ವಿದ್ಯಾರ್ಥಿಗಳನ್ನು ಕುರಿತು ಮಾತನಾಡಿ "ಮಹಾರಾಣಾ ಪ್ರತಾಪ್ ಸಿಂಹ ಜಯಂತಿಯನ್ನು ಪ್ರತಿವರ್ಷ ದೇಶದ ವಿವಿಧ ಭಾಗಗಳಲ್ಲಿ ವಿಶೇಷವಾಗಿ ಆಚರಿಸಲಾಗುತ್ತದೆ. ಮಹಾರಾಣಾ ಪ್ರತಾಪ್ ಸಿಂಹರು 1540ರಲ್ಲಿ ರಾಜಸ್ಥಾನದ ಮೇವಾರ್‌ನಲ್ಲಿ ಜನಿಸಿದರು. ಅವರು ಧೈರ್ಯಶಾಲಿ ರಾಜಪೂತ್ ರಾಜನಾಗಿದ್ದು, ಸ್ವಾತಂತ್ರ್ಯ ಮತ್ತು ಸ್ವಾಭಿಮಾನಕ್ಕಾಗಿ ಜೀವನವಿಡೀ ಹೋರಾಟ ನಡೆಸಿದರು.

ಮೊಘಲ್ ಸಾಮ್ರಾಜ್ಯದ ಚಕ್ರವರ್ತಿ ಅಕ್ಬರ್ ಅವರ ಆಳ್ವಿಕೆಗೆ ತಲೆಬಾಗದೆ, ತಮ್ಮ ರಾಜ್ಯದ ಸ್ವಾತಂತ್ರ್ಯವನ್ನು ಕಾಪಾಡಲು ಅವರು ಅರಣ್ಯಗಳಲ್ಲಿ ಸಹ ಕಷ್ಟಕರ ಜೀವನ ನಡೆಸಿದರು. 1576ರಲ್ಲಿ ನಡೆದ ಹಳದಿಘಾಟಿ ಯುದ್ಧದಲ್ಲಿ ಅವರು ತಮ್ಮ ಶೌರ್ಯವನ್ನು ತೋರಿಸಿದರು. ಈ ಯುದ್ಧದಲ್ಲಿ



ಅವರು ಗಾಯಗೊಂಡರೂ ತಮ್ಮ ಧೈರ್ಯವನ್ನು ಕಳೆದುಕೊಳ್ಳಲಿಲ್ಲ. ಮಹಾರಾಣಾ ಪ್ರತಾಪ್ ಸಿಂಹರ ಜೀವನವು ನಮಗೆ ದೇಶಭಕ್ತಿ, ಧೈರ್ಯ ಮತ್ತು ಸ್ವಾಭಿಮಾನವನ್ನು ಕಲಿಸುತ್ತದೆ" ಎಂದು ಹೇಳಿದರು.

ಶಾಲೆಯ ಪ್ರಧಾನಾಚಾರ್ಯರಾದ ರಂಗನಾಥರವರು ಮಾತನಾಡಿ "ಮಹಾರಾಣಾ ಪ್ರತಾಪ್ ಸಿಂಹರು ನಮ್ಮ ದೇಶದ ಮಹಾನ್ ವೀರರಲ್ಲಿ ಒಬ್ಬರು. ಅವರ ಜೀವನ ಸಂದೇಶವು ಸದಾ ನಮ್ಮನ್ನು ಸತ್ಯ ಮತ್ತು ಸ್ವಾತಂತ್ರ್ಯದ ಮಾರ್ಗದಲ್ಲಿ ನಡೆಯಲು ಪ್ರೇರೇಪಿಸುತ್ತದೆ" ಎಂದು ಹೇಳಿದರು. ಈ ಸಂದರ್ಭದಲ್ಲಿ ಎಲ್ಲ ಶಿಕ್ಷಕ ವೃಂದದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಎಲುಬಿಲ್ಲದ ನಾಲಿಗೆಯಿಂದ ಉಡಾಫೆ ಪ್ರಶ್ನೆ: ಕಿಡಿ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಅಧಿಕೃತ ನೊಂದಣಿ ಕುರಿತು ರಾಜ್ಯದ ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರು ಎಲುಬಿಲ್ಲದ ನಾಲಿಗೆಯಿಂದ ಉಡಾಫೆ ಪ್ರಶ್ನೆ ಮಾಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯ ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ಅವರು ಕಿಡಿಕಾರಿದರು.

ಕೇಂದ್ರ ಸರ್ಕಾರದ ಹೆಮ್ಮೆಯ ಭಾರತ್ ಮಾಲಾ ರಸ್ತೆಯೋಜನೆಯನ್ನು ಬುಧವಾರ ಜಿಲ್ಲೆಯ ಜೇವರ್ಗಿ ಭಾಗದಲ್ಲಿ ಹಾದು ಹೋಗುವ ರಸ್ತೆ ಕಾಮಗಾರಿಯನ್ನು ವೀಕ್ಷಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಗೃಹ ಸಚಿವರಾಗಿ ಪ್ರಿಯಾಂಕ್ ಖರ್ಗೆಯವರು ಇಂತಹ ಪ್ರಶ್ನೆಯನ್ನು ಉಡಾಫೆಯಾಗಿ ಕೇಳುತ್ತಿದ್ದಾರೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಉಡಾಫೆಯಾಗಿ ಉತ್ತರ ಕೊಡುತ್ತಿದ್ದಾರೆ ಎಂಬ ಪ್ರಿಯಾಂಕ್ ಖರ್ಗೆಯವರಿಗೆ ತಿರುಗೇಟು ನೀಡಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘವು ಸರ್ಕಾರದಿಂದ ಯಾವುದೇ ಅನುದಾನವನ್ನು ಮತ್ತು ಜಮೀನು ಪಡೆದಿಲ್ಲ. ಸ್ವಯಂ ಸೇವಕರಿಂದ ಕಾರ್ಯನಿರ್ವಹಿಸುತ್ತಿದೆ. ಹಾಗಾಗಿ ಅಧಿಕೃತ ನೊಂದಣಿ ಮಾಡುವ ಅಗತ್ಯವಿಲ್ಲ. ಎಲ್ಲ



ಸಂಘಟನೆಗಳು, ಸಂಸ್ಥೆಗಳು ಅಧಿಕೃತವಾಗಿ ನೊಂದಣಿ ಮಾಡಿಕೊಳ್ಳಬೇಕು ಎಂದು ಸಂವಿಧಾನದಲ್ಲಿ ಇದ್ದರೆ ಆ ಕುರಿತು ಸಚಿವ ಪ್ರಿಯಾಂಕ್ ಖರ್ಗೆ ಅವರು ತೋರಿಸಲಿ ಎಂದು ಅವರು ಸವಾಲು ಹಾಕಿದರು.

ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಪ್ರಧಾನ ಕಚೇರಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆಯವರು ಹೋಗುವ ಅಗತ್ಯವಿಲ್ಲ. ತಮ್ಮ ಹತ್ತಿರ ಇರುವ ಆರ್‌ಎಸ್‌ಎಸ್ ಶಾಖೆಗೆ ಹೋದರೆ ಎಲ್ಲ ಮಾಹಿತಿಯೂ ಗೊತ್ತಾಗುತ್ತದೆ. ಆ ಕುರಿತು ಪರಿವರ್ತನೆ ಆಗಬಹುದು ಎಂದು ತಿಳಿಸಿದ ಅವರು, ಭಾರತದ ಮೊದಲ ಪ್ರಧಾನಿ ಪಂಡಿತ್ ಜವಾಹರಲಾಲ್ ನೆಹರೂ ಅವರು ತಮ್ಮ ಜೀವನದ ಕೊನೆಯ ಅವಧಿಯಲ್ಲಿ ಪರೇಡ್ ವಂದನೆಗೆ ರಾಷ್ಟ್ರೀಯ ಸ್ವಯಂ ಸೇವಕರನ್ನು ಕರೆಸಿದ್ದರು ಎಂಬುದನ್ನು ನೆನಪಿಸಿದರು.

# ಚಾಲಕನ ನಿಯಂತ್ರಣ ತಪ್ಪಿ ಬಸ್ ಪಲ್ಟಿ: ತಪ್ಪಿದ ಭಾರಿ ಅನಾಹುತ

• **ಮಲ್ಲಮ್ಮ ನುಡಿ ವಾರ್ತೆ ಕೆಂಭಾವಿ**

ಸಮೀಪದ ಆಲ್ಹಾಳ ಗ್ರಾಮದ ಬಳಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಬಸ್ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಗೆ ಪಲ್ಟಿಯಾದ ಘಟನೆ ಬುಧವಾರ ನಡೆದಿದೆ. ಅದೃಷ್ಟವಶಾತ್ ಭಾರಿ ಅನಾಹುತವೊಂದು ತಪ್ಪಿದ್ದು, ಅಪಘಾತದಲ್ಲಿ ಹಲವು ಪ್ರಯಾಣಿಕರಿಗೆ ವಿದ್ಯಾರ್ಥಿಗಳಿಗೆ ಸಣ್ಣಪುಟ್ಟ ಗಾಯಗಳಾಗಿದ್ದು ಅಪಾಯದಿಂದ ಪಾರಾಗಿದ್ದಾರೆ.

ಬೆಳಿಗ್ಗೆ ಕೆಂಭಾವಿಯಿಂದ ಪೀರಾಪುರ ಮಾರ್ಗವಾಗಿ ತಾಳಿಕೋಟಿ ಕಡೆ ಚಲಿಸುತ್ತಿದ್ದ ಬಸ್, ಆಲ್ಹಾಳ ಗ್ರಾಮದ ಹತ್ತಿರ ಬರುತ್ತಿದ್ದಂತೆ ಚಾಲಕನ ನಿಯಂತ್ರಣ ಕಳೆದುಕೊಂಡು ಪಲ್ಟಿಯಾಗಿದೆ. ಘಟನೆಯ ವೇಳೆ ಕೆಲ ಪ್ರಯಾಣಿಕರು ಆತಂಕಗೊಂಡಿದ್ದರೂ ಯಾವುದೇ ಪ್ರಾಣಹಾನಿ ಅಥವಾ



ಗಂಭೀರ ಗಾಯಗಳಾಗಿಲ್ಲ ಎಂದು ತಿಳಿದುಬಂದಿದೆ. ಘಟನೆ ಸಂಭವಿಸುತ್ತಿದ್ದಂತೆ ತಕ್ಷಣ ಕಾರ್ಯಪ್ರವೃತ್ತರಾದ ಸ್ಥಳೀಯರು, ಬಸ್ಸಿನ ಒಳಗಿದ್ದ ಪ್ರಯಾಣಿಕರನ್ನು ಸುರಕ್ಷಿತವಾಗಿ ಹೊರಗೆ ತರಲು ನೆರವಾದರು.

ಗಾಯಗೊಂಡ ಪ್ರಯಾಣಿಕರನ್ನು ತಕ್ಷಣವೇ ಚಿಕಿತ್ಸೆಗಾಗಿ ಕೆಂಭಾವಿಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಗಿದೆ. ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ ಎಂದು ತಿಳಿದುಬಂದಿದ್ದು, ಗಾಯಾಳುಗಳಿಗೆ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಹಾಗೂ ಸೂಕ್ತ ಆರೈಕೆ ನೀಡಲಾಯಿತು. ಹಾಗೂ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಹಾಗೂ ತಾಲೂಕು ಆಸ್ಪತ್ರೆಗೆ ಮಕ್ಕಳು ಹಾಗೂ ಪ್ರಯಾಣಿಕರನ್ನು ಕಳುಹಿಸಿ ಕೊಡಲಾಯಿತು ಎಂದು ವೈದ್ಯರು ತಿಳಿಸಿದರು.

> **ಕಲ್ಯಾಣ ಕರ್ನಾಟಕ ಭಾಗದ ಜನರಿಗೆ ಸರ್ಕಾರಿ ಬಸ್ಸುಗಳೇ ಜೀವಾಳವಾಗಿವೆ. ಅವುಗಳನ್ನೇ ಅವಲಂಬಿಸಿದ್ದಾರೆ. ಆದರೆ ಸಂಸ್ಥೆಯು ಹಳೆಯ ಡಕೋಟಾ ಬಸ್ಸುಗಳನ್ನು ರಸ್ತೆಗಿಳಿಸಿ ಪ್ರಯಾಣಿಕರ ಜೀವದ ಜೊತೆ ಚೆಲ್ಲಾಟವಾಡುತ್ತಿದೆ. ಹೊಸ ಬಸ್ ಸಂಚರಿಸ್ಬೇಕು ಶಕ್ತಿ ಯೋಜನೆ ಬಂದಾಗಿಂದ ಲಾಭ ಗಳಿಸುವುದೊಂದೇ ಗುರಿಯಾಗಬಾರದು, ಸುರಕ್ಷತೆಗೂ ಆದ್ಯತೆ ನೀಡಬೇಕು.**
>
> **–ಆರಿಫ್ ಹುಸೇನ್ ಖಾಜಿ**
> **ಪುರಸಭೆ ಸದಸ್ಯರು, ಕೆಂಭಾವಿ**

# ಮೌನ: ಶಬ್ದಗಳ ಕೊರತೆಯಲ್ಲ, ಆಂತರ್ಯದ ಪಕ್ವತೆ



**ಭೋಗ–ಐಭೋಗ**
● **ವೀರಣ್ಣ ಕಲಕೇರಿ**
**ಕೆಂಭಾವಿ**

ಮೌನ ಎಂದರೆ ಮೇಲ್ನೋಟಕ್ಕೆ ಶಬ್ದ ಮಾಡದೆ ಇರುವುದು ಎಂದಷ್ಟೇ ನಾವು ಅಂದುಕೊಂಡಿದ್ದೇವೆ. ಆದರೆ ಮೌನ ಎಂದರೆ ಕೇವಲ ನಿಶ್ಶಬ್ದವಲ್ಲ; ಅದು ಆಂತರ್ಯವನ್ನು ಶುದ್ಧೀಕರಿಸುವ, ತಿದ್ದಿತೀಡುವ ಪ್ರಕ್ರಿಯೆ. ಮೌನ ಎಂದರೆ ಶಬ್ದಗಳ ಕೊರತೆಯಲ್ಲ, ಅದು ಅನಗತ್ಯ ಆಲೋಚನೆಗಳ ಅನುಪಸ್ಥಿತಿ. ಅದು ಅಸಹಾಯಕತೆಯಲ್ಲ, ಬದಲಿಗೆ ಆಂತರಿಕ ಶಕ್ತಿಯ ಶಿಖರ.

ನಾವು ಮೌನವನ್ನು ಮುನಿಗೆ ಬಹಳ ಹತ್ತಿರವಾಗಿ ಕಾಣುತ್ತೇವೆ, ಏಕೆಂದರೆ ಮುನಿಯ ಭಾವವೇ ಮೌನ. ಹಾಗಾಗಿ ಈ ಮೌನಕ್ಕೂ ಮತ್ತು ಮುನಿಗೂ ಅವಿನಾಭಾವ ಸಂಬಂಧವಿದೆ. ಆದರೂ ಅವರನ್ನು ಕೇವಲ 'ಮೌನಿಗಳು' ಎಂದು ಕರೆದುಬಿಡಲಾಗದು. ಮೇಲ್ನೋಟಕ್ಕೆ ಅವರು ಮೌನವಾಗಿ ಕಂಡರೂ, ಅವರ ಅಂತರಂಗದ ಲೋಕದಲ್ಲಿ ನಿರಂತರ ಮಂಥನ ನಡೆಯುತ್ತಿರುತ್ತದೆ. ಹೊರಗಣ್ಣು ಮತ್ತು ಬಾಯಿ ಮುಚ್ಚಿದ್ದರೂ, ಒಳಗಣ್ಣಿನಿಂದ ವಿಶಾಲ ಜಗತ್ತಿನೊಂದಿಗೆ ಬೆರೆತು, ಭಾವಶೂನ್ಯತೆಯನ್ನು ಭೇದಿಸುವ ಕೆಲಸ ಅಲ್ಲಿ ನಡೆಯುತ್ತಿರುತ್ತದೆ. ಮಾತು ಲೌಕಿಕ ಜಗತ್ತಿನ ಸಂಪರ್ಕ ಸಾಧನವಾದರೆ, ಮೌನ ಅಂತರಂಗದ ಸಂಪರ್ಕ ಸಾಧನ. ಹಾಗಾಗಿ ಋಷಿ–ಮುನಿಗಳು ಹೊರಜಗತ್ತಿಗೆ ಮೌನಿಯಾಗಿ ಕಂಡರೂ, ಅವರು ವಾಸ್ತವವಾಗಿ ಆಂತರ್ಯದ ಸಂಗಾತಿಗಳು.

ಹೊರಗಿನ ಗದ್ದಲ ನಿಂತಾಗ, ಒಳಗಿನ ವಿಚಾರ ಶಕ್ತಿ ಜಾಗೃತಗೊಳ್ಳುತ್ತದೆ. ಹಾಗಾಗಿಯೇ ಮುನಿಗಳು ಯಾವಾಗಲೂ ಮೌನವನ್ನು ಆಶ್ರಯಿಸುತ್ತಿದ್ದರು. ಇಂತಹ ಮೌನದಿಂದ ಹೊರಬರುವ ಮುನಿಗಳ ಒಂದೇ ಒಂದು ಮಾತು ಜಗತ್ತನ್ನೇ ವಿಶ್ಲೇಷಿಸುವ ಆಳವನ್ನು ಹೊಂದಿರುತ್ತದೆ; ಸ್ಫೋಟಕವಾಗಿರುತ್ತದೆ. ಅದು ಅವರ ಮೌನ ಮಂಥನದಿಂದ ಉದ್ಭವಿಸಿದ ಶಕ್ತಿ. ಅದಕ್ಕಾಗಿಯೆ ಕಾವಿಯನ್ನು ಬೆಂಕಿಗೆ ಹೋಲಿಸುವರು, ಮೌನದ ಸ್ಪರ್ಶವೇ ಅಂತಹದ್ದು! ಏಕೆಂದರೆ, ಶಬ್ದಗಳ ಅಬ್ಬರವಿಲ್ಲದಾಗ ಮಾತ್ರ ಬುದ್ಧಿ ಚುರುಕಾಗುತ್ತದೆ. ಇದು ಮೌನದ ಮಂಥನದಿಂದ ಸಾಧ್ಯ.

ಅದಕ್ಕಾಗಿಯೇ ಹಿರಿಯರು "ಮಾತು ಮಿತವಾಗಿರಲಿ" ಎಂದು ಹೇಳಿರುವುದು. ಇದರ ಅರ್ಥ ನಾವು ಆಡುವ ಮುನ್ನ ಯೋಚಿಸಬೇಕು ಮತ್ತು ನಮ್ಮ ಮಾತು ತನ್ನ ಮೌಲ್ಯವನ್ನು ಕಳೆದುಕೊಳ್ಳಬಾರದು ಎಂಬುದಾಗಿದೆ. ಮೌನ ನಮಗೆ: ಯಾವಾಗ ಮಾತನಾಡಬೇಕು, ಎಷ್ಟು ಮಾತನಾಡಬೇಕು, ಮತ್ತು ಎಲ್ಲಿ ಮಾತನಾಡಬಾರದು ಎಂಬ ಉನ್ನತ ವಿವೇಚನೆಯನ್ನು ಕಲಿಸುತ್ತದೆ. ಈ ವಿವೇಚನೆ ವ್ಯಕ್ತಿಯಲ್ಲಿ ಮೂಡಿದಾಗ ಮಾತ್ರ ಆತನ ನಿಶ್ಶಬ್ದವು ಯಶಸ್ಸಿನ ಸದ್ದು ಮಾಡಲು ಸಾಧ್ಯ. ಈ ಮೌನದ ಸ್ಫೋಟವು ಕೇವಲ ಲೌಕಿಕ ಸದ್ದು ಮಾಡದೆ, ಆಧ್ಯಾತ್ಮಿಕ ಸತ್ಯಗಳ ದರ್ಶನವನ್ನೂ ಮಾಡಿಸುತ್ತದೆ. ಅದಕ್ಕಾಗಿಯೇ ನಮ್ಮ ಸಂಸ್ಕೃತಿಯಲ್ಲಿ 'ಧ್ಯಾನ'ದ ಕಲ್ಪನೆಯನ್ನು ನೀಡಲಾಗಿದೆ.

ಈ ಹಿನ್ನಲೆಯಲ್ಲಿ ಗೌತಮ ಬುದ್ಧನ ಜೀವನವೇ ಅತ್ಯಂತ ಶ್ರೇಷ್ಠ ಮತ್ತು ಜೀವಂತ ಉದಾಹರಣೆಯಾಗಿ ನೋಡಬಹುದು. ಬುದ್ಧನ ಜೀವನದಲ್ಲಿ ಮೌನವು ಕೇವಲ ನಿಶ್ಶಬ್ದವಾಗಿರಲಿಲ್ಲ; ಅದು ಇಡೀ ಜಗತ್ತನ್ನೇ ಬದಲಾಯಿಸುವ ಒಂದು ದಿವ್ಯ ಸ್ಫೋಟವಾಗಿತ್ತು. ಸಿದ್ಧಾರ್ಥನು ಎಲ್ಲ ತೊರೆದು ಸತ್ಯದ ಅನ್ವೇಷಣೆಯಲ್ಲಿ ತೊಡಗಿದಾಗ ಆತನಿಗೆ ಲೌಕಿಕ ಜಗತ್ತಿನ ಯಾವುದೇ ಮಾತುಗಳು, ಚರ್ಚೆಗಳಿಂದ ಉತ್ತರ ಸಿಗಲಿಲ್ಲ. ಅದಕ್ಕಾಗಿಯೇ ಆತ ಕೊನೆಗೆ ಆರಿಸಿಕೊಂಡಿದ್ದು ಮೌನ ಮತ್ತು ಧ್ಯಾನದ ದಾರಿ. ಬೋಧಿ ವೃಕ್ಷದ ಕೆಳಗೆ ಹಲವು ಕಾಲ ಆಂತರಿಕ ಮೌನಕ್ಕೆ ಜಾರಿದಾಗ, ಆ ಮೌನದ ಪರಮಾವಧಿಯಲ್ಲಿ ಆತನಿಗೆ ಆಧ್ಯಾತ್ಮಿಕ ಸತ್ಯಗಳ ದರ್ಶನವಾಯಿತು, ಅದೇ ಜ್ಞಾನೋದಯ. ಮುಂದೆ ತನ್ನ ಆಳವಾದ ಮೌನ ಮತ್ತು ಧ್ಯಾನದ ಮೂಲಕ ಜಗತ್ತಿನ ಕತ್ತಲನ್ನು ದೂರ ಮಾಡಿದ ಆತನ ಮೌನವೇ ಮುಂದೆ ಬೌದ್ಧ ಮತದ ಮಹಾನ್ ಸ್ಫೋಟವಾಗಿ ಜಗತ್ತಿನಾದ್ಯಂತ ಸದ್ದು ಮಾಡಿತು ಎಂದರೆ ತಪ್ಪಾಗಲಾರದು.

ಅಂದು ಮಹಾ ಕ್ರೂರಿ ದರೋಡೆಕೋರನಾದ ಅಂಗುಲಿಮಾಲನನ್ನು ಬದಲಾಯಿಸಿದ್ದು ಇದೇ ಬುದ್ಧನ ಮೌನ. ಕಾಡಿನ ಹಾದಿಯಲ್ಲಿ ಹೊರಟ ಬುದ್ಧನನ್ನು ಹೆದರಿಸಲು ಅಂಗುಲಿಮಾಲನು ಕತ್ತಿ ಹಿಡಿದು ಜೋರಾಗಿ ಕಿರುಚುತ್ತಾನೆ, ಆರ್ಭಟಿಸುತ್ತಾನೆ (ಇದು ಅಂಗುಲಿಮಾಲನ ಲೌಕಿಕ ಸದ್ದು). ಆದರೆ ಬುದ್ಧ ಆತನ ಎದುರು ಅತ್ಯಂತ ಪ್ರಶಾಂತವಾಗಿ, ಮೌನವಾಗಿ ನಡೆದುಕೊಂಡು ಹೋಗುತ್ತಾನೆ. ಅಲ್ಲಿ ಬುದ್ಧನ ದಿವ್ಯ ಮೌನದ ಪ್ರಭಾವ ಎಷ್ಟಿತ್ತೆಂದರೆ, ಅಂಗುಲಿಮಾಲನ ಕ್ರೌರ್ಯವೆಲ್ಲ ಬುದ್ಧನ ನಿಶ್ಶಬ್ದದ ಎದುರು ಕರಗಿ ಹೋಗುತ್ತದೆ. ಬುದ್ಧನ ಮೌನದ ತೇಜಸ್ಸು ಮುಖದ ಮೇಲೆ ಕಂಡ ಅಂಗುಲಿಮಾಲ ತನ್ನ ಆಯುಧವನ್ನು ಕೆಳಗಿಟ್ಟು ಬುದ್ಧನ ಚರಣಗಳಿಗೆ ಶರಣಾಗುತ್ತಾನೆ. ಬುದ್ಧನ ಮೌನದ ಒಂದು ನೋಟ ಮತ್ತು ಮಿತವಾದ ಮಧು ಮಾತು ಒಬ್ಬ ಕ್ರೂರಿಯನ್ನು ಸಾಧುವಾಗಿ ಬದಲಾಯಿಸಿತ್ತು.

ಕೊನೆಯದಾಗಿ ಹೇಳಬೇಕೆಂದರೆ, ಇಂದಿನ ಆಧುನಿಕ ಜಗತ್ತು ಹೊರಗಿನ ಗದ್ದಲಗಳಲ್ಲೇ ಕಳೆದುಹೋಗಿದೆ. ಎಲ್ಲರಿಗೂ ಮಾತನಾಡಬೇಕಿದೆ, ಆದರೆ ಯಾರೂ ಕೇಳಿಸಿಕೊಳ್ಳುವ ಸ್ಥಿತಿಯಲ್ಲಿಲ್ಲ. ಇಂತಹ ಸಂದರ್ಭದಲ್ಲಿ ಮೌನ ಎನ್ನುವುದು ಕೇವಲ ಒಂದು ಆಯ್ಕೆಯಾಗಿ ಉಳಿದಿಲ್ಲ, ಅದೊಂದು ಅನಿವಾರ್ಯತೆಯಾಗಿ ಉಳಿದಿದೆ ಎನಿಸುತ್ತಿದೆ.

ಮೌನ ಎಂದರೆ ಕೇವಲ ಸುಮ್ಮನಿರುವುದಲ್ಲ; ಅದು ನಮ್ಮನ್ನು ನಾವು ಕಂಡುಕೊಳ್ಳುವ, ನಮ್ಮ ಆತ್ಮವನ್ನು ಶುದ್ಧೀಕರಿಸಿಕೊಳ್ಳುವ ಒಂದು ಪವಿತ್ರ ಪ್ರಕ್ರಿಯೆ. ಜಗತ್ತನ್ನು ಗೆಲ್ಲಲು ಮಾತಿನ ಚತುರತೆ ಬೇಕಾಗಬಹುದು, ಆದರೆ ನಮ್ಮನ್ನು ನಾವು ಗೆಲ್ಲಲು ವಿವೇಕವೇ ಬೇಕು. ಅದಕ್ಕೆ ಮೌನ ಅವಶ್ಯ. ಹೊರಗಿನ ಕೃತಕ ಶಬ್ದಗಳನ್ನು ಕೊಂಚ ಬದಿಗಿಟ್ಟು, ಹಾಗಾಗಿ ಒಳಗಿನ ಈ ಅನಂತ ನಿಶ್ಶಬ್ದಕ್ಕೆ ಶರಣಾದಾಗ ಮಾತ್ರ ಬದುಕಿನ ಪರಮ ಸತ್ಯ ಚೂರು ಅರಿಯಲು ಸಾಧ್ಯ ಅಲ್ಲವೆ? ಹೀಗೆ ಮೌನದಿಂದ ಮಾಗಿದ ವ್ಯಕ್ತಿತ್ವ ಮಾತ್ರ ಆಂತರ್ಯದ ಬೆಳಕು ಕಾಣಬಹುದು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000, Telephone Number:08483200215

PRGI NO. 120927
(RNINO:KARKAN/2011/48371)